12 June 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜೀವನದಲ್ಲಿ ಸದಾ ಉತ್ಸಾಹವನ್ನು ಜೀವಂತವಾಗಿಟ್ಟುಕೊಂಡರೆ ಹತಾಶೆಯ ಭಾವ ಮನದಲ್ಲಿ ಎಂದಿಗೂ ಸುಳಿಯದು!

» ಸ್ನೇಹಾ ಆನಂದ್

info.varthaman@gmail.com


12 ವರ್ಷದಲ್ಲ ಮೋದಿಯದು ಐತಿಹಾಸಿಕ ಸಾಧನೆ: ಯದುವೀರ್ — ಪುಟ ಸಂ. 2


ಇಬ್ಬರು ಆರೋಪಿಗಳ ಬಂಧನ, ನಾಡಬಂದೂಕು ಜಪ್ತಿ — ಪುಟ ಸಂ. 3


ವಿದ್ಯಾರ್ಥಿಗಳೊಂದಿಗೆ ಊಟ ಸವಿದ ಜಿಲ್ಲಾಧಿಕಾರಿ ಶ್ರೀರೂಪ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 196 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಆಡಳಿತಕ್ಕೆ ಚುರುಕು ನೀಡಲು ಮುಂದಾದ ಸಿಎಂ ಶಿವಕುಮಾರ್

### ನಾಳೆ ಜಿಲ್ಲಾಧಿಕಾರಿಗಳು ಜಿಪಂ ಸಿಇಒಗಳ ಜೊತೆ ಪರಿಶೀಲನಾ ಸಭೆ

**ಬೆಂಗಳೂರು:** ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅಧಿಕಾರ ಸ್ವೀಕರಿಸಿದ ಬಳಿಕ ರಾಜ್ಯದ ಜಿಲ್ಲಾಡಳಿತದೊಂದಿಗೆ ಮೊದಲ ಮಹತ್ವದ ಸಮಾಲೋಚನಾ ಸಭೆ ಜೂನ್ 13ರಂದು ವಿಧಾನಸೌಧದಲ್ಲಿ ನಡೆಯಲಿದೆ.

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ (ಸಿಇಒ) ಜೊತೆ ಪರಿಶೀಲನಾ ಸಭೆ ನಡೆಸಲು ಮುಖ್ಯಮಂತ್ರಿ ಡಿಕೆಶಿ ನಿರ್ಧರಿಸಿದ್ದಾರೆ.

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ಸಿದ್ಧತೆ, ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಸರ್ಕಾರದ ಪ್ರಮುಖ ಯೋಜನೆಗಳ ಅನುಷ್ಠಾನ ಹಾಗೂ ಜಿಲ್ಲಾಮಟ್ಟದಲ್ಲಿ ಆಡಳಿತಾತ್ಮಕ ಸಮನ್ವಯ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಿದ್ದಾರೆ.



ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ, ಮೂಲಸೌಕರ್ಯ ಕಾಮಗಾರಿಗಳ ವೇಗ, ಅನುದಾನ ಬಳಕೆ ಹಾಗೂ ಜನಪರ ಯೋಜನೆಗಳ ಪರಿಣಾಮಕಾರಿ ಜಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸ್ಪಷ್ಟ ನಿರ್ದೇಶನ ನೀಡುವ ಸಾಧ್ಯತೆ ಇದೆ. ಆಡಳಿತಾತ್ಮಕ ಮಟ್ಟದಲ್ಲಿ ಹಲವು ಮಹತ್ವದ ಬದಲಾವಣೆಗಳನ್ನು ಕೈಗೊಂಡಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಆಡಳಿತದ ವೇಗ ಹೆಚ್ಚಿಸಲು ಒತ್ತು ನೀಡುತ್ತಿದ್ದಾರೆ. ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಇಒಗಳು ಹಾಗೂ ಹಿರಿಯ ಅಧಿಕಾರಿಗಳ ಭಾಗವಹಿಸಲಿದ್ದಾರೆ.ಗುಪ್ತಚರ

ಪುಟ 2ಕ್ಕೆ

## ರಾಜ್ಯದಿಂದ ರಾಜ್ಯಸಭೆಗೆ ನಾಲ್ವರು ಅವಿರೋಧ ಆಯ್ಕೆ



**ಬೆಂಗಳೂರು:** ಕರ್ನಾಟಕದಿಂದ ರಾಜ್ಯಸಭೆಗೆ ಸ್ಪರ್ಧಿಸಿದ್ದ ನಾಲ್ವರು ಅಭ್ಯರ್ಥಿಗಳು ಅವಿ ರೋಧ ಆಯ್ಕೆ ಆಗಿದ್ದಾರೆ ಎಂದು ಚುನಾವಣಾಧಿಕಾರಿ ಘೋಷಣೆ ಮಾಡಿದ್ದಾರೆ.

ಕಾಂಗ್ರೆಸ್‌ನ ಮೂವರು ಅಭ್ಯರ್ಥಿಗಳಾದ ಮಲ್ಲಿಕಾರ್ಜುನ ಖರ್ಗೆ, ಪವನ್ ಖೇರಾ, ಮನ್ಸೂರ್ ಅಲಿಖಾನ್ ಹಾಗೂ ಬಿಜೆಪಿ ಅಭ್ಯರ್ಥಿ ಪ್ರೊ. ನಾಗರಾಜ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪವನ್ ಖೇರಾ, ಮನ್ಸೂರ್ ಅಲಿಖಾನ್, ಪ್ರೊ.ನಾಗರಾಜ್ ಚುನಾವಣಾಧಿಕಾರಿಗಳಿಂದ ಪ್ರಮಾಣ ಪತ್ರ ಪಡೆದುಕೊಂಡಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿ ಯಲ್ಲಿರುವ ಕಾರಣ ಬೆಂಗಳೂರಿಗೆ ವಾಪಸ್ ಆದ ಬಳಿಕ ಪ್ರಮಾಣ ಪತ್ರ ಪಡೆದುಕೊಳ್ಳಲಿದ್ದಾರೆ. ಕಾಂಗ್ರೆಸ್ ಸದಸ್ಯ ಪವನ್ ಖೇರಾ ಮಾತನಾಡಿ, ಕರ್ನಾಟಕದಿಂದ ರಾಜ್ಯಸಭೆ ಸದಸ್ಯನಾಗಿ ಆಯ್ಕೆಯಾಗಿದ್ದಕ್ಕೆ ಖುಷಿ ಇದೆ. ಮುಂದೆ ನಾನು ಬರುವಾಗ ಕನ್ನಡ ಕಲಿತು ಬರುತ್ತೇನೆ ಎಂದು ಶಪಥ ಮಾಡಿದರು.

## ‘ಗೃಹಲಕ್ಷ್ಮಿ’ಗೆ ಕಂಡಿಷನ್ ಏಕೆ?

### ರಾಜ್ಯದ ಖಜಾನೆ ಖಾಲಿ: ಎಂಎಲ್ಸಿ ಸಿ.ಟಿ.ರವಿ ವಾಗ್ದಾಳಿ

**ಬೆಂಗಳೂರು:** ಗೃಹಲಕ್ಷ್ಮಿ ಯೋಜನೆಗೆ ಆಗ ಇಲ್ಲದ ಕಂಡಿಷನ್ ಈಗ ಯಾಕೆ? ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಪ್ರಶ್ನಿಸಿದ್ದಾರೆ.

ಮಾಧ್ಯಮಗಳೊಂದಿಗೆ ಗುರುವಾರ ಮಾತನಾಡಿದ ಅವರು, ಕಾಕಾ ಪಾಟೀಲ್ ನಿಂಗೂ ಫ್ರೀ, ಮಹದೇವಪ್ಪ ನಿಂಗೂ ಫ್ರೀ ಎಂದು ಚುನಾವಣೆ ಪ್ರಚಾರದ ವೇಳೆ ಸಿದ್ದರಾಮಯ್ಯ ತಿಳಿಸಿದ್ದರು. ಈಗ ನಿಮ್ಮ ಕಂಡಿಷನ್ ಯಾಕೆ, ಖಜಾನೆ ಖಾಲಿ ಎಂಬುದು ಜನರಿಗೆ ಗೊತ್ತಾಗಿದೆ ಎಂದು ಟೀಕಿಸಿದರು.

ಫಲಾನುಭವಿ ಜನರನ್ನು ಕಡಿಮೆ ಮಾಡಲು ಕಂಡಿಷನ್ ಹಾಕುತ್ತೀರಿ. ನಿಮ್ಮ ಹಳೆಯ ಭಾಷಣವನ್ನು ಜನರು ಕೇಳಿಸಿಕೊಳ್ಳುತ್ತಾರೆ. ಇದಕ್ಕೆ ಸೂಕ್ತ ಸಮಯದಲ್ಲಿ ಜನರು ಉತ್ತರ ಕೊಡುತ್ತಾರೆ. ನನಗೂ ಗ್ಯಾರಂಟಿ ಯೋಜನೆಗಳಿಗೂ ಸಂಬಂಧ ಇಲ್ಲ ಎಂದು ಡಿ.ಕೆ.ಶಿವಕುಮಾರ್ ಹೇಳಿದರೆ, ನಾವು ಪ್ರಶ್ನೆ ಮಾಡುವುದಿಲ್ಲ ಎಂದು ಸವಾಲು ಹಾಕಿದರು.




ಗೃಹಲಕ್ಷ್ಮಿ ಕೊಡಬೇಕಾಗುತ್ತದೆ ಎಂದು ಹೊಸ ಬಿಪಿಎಲ್ ಕಾರ್ಡ್ ಕೊಡುವುದನ್ನೂ ನಿಲ್ಲಿಸಿದ್ದಾರೆ. ಇದರಿಂದ ಅರ್ಹ ಫಲಾನುಭವಿಗಳು ಬಿಪಿಎಲ್ ಕಾರ್ಡ್ನಿಂದಲೂ ವಂಚಿತರಾಗಿದ್ದಾರೆ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ರಸಗೊಬ್ಬರ ಬೇಡಿಕೆಗೆ ಅನುಗುಣವಾಗಿ ಸ್ಟಾಕ್ ಇದೆ ಎಂದು ಹಿಂದಿನ ಕೃಷಿ ಸಚಿವರು ಹೇಳಿಕೆ ನೀಡಿದ್ದರು. ಹಾಗಿದ್ದರೂ ಕೊರತೆ ಹೇಗೆ? ಯಾಕೆ ಕಾಳಸಂತೆಯಲ್ಲಿ ಮಾರಾಟ ಆಗುತ್ತಿದೆ ಎಂಬುದಕ್ಕೆ ಹೊಸ ಸರ್ಕಾರ ಮತ್ತು ಅಧಿಕಾರಿಗಳು ಉತ್ತರ ಕೊಡಲಿ ಎಂದು ಒತ್ತಾಯಿಸಿದರು.

## ಎಥೆನಾಲ್ ಮಿಶ್ರಿತ ಪೆಟ್ರೋಲ್ ಅಬಕಾರಿ ಸುಂಕ ವಿನಾಯಿತಿ

**ನವದೆಹಲಿ:** ಹೆಚ್ಚಿನ ಪ್ರಮಾಣದ ಎಥೆ ನಾಲ್ ಮಿಶ್ರಿತ ಪೆಟ್ರೋಲ್ ಮೇಲಿನ ಅಬ ಕಾರಿ ಸುಂಕಕ್ಕೆ ವಿನಾಯಿತಿ ನೀಡಲಾಗಿದೆ ಎಂದು ಕೇಂದ್ರ ಸರ್ಕಾರ ಘೋಷಿಸಿದೆ.

ಇ22 (ಎಥೆನಾಲ್ 22% ಮತ್ತು ಪೆಟ್ರೋಲ್ 78% ಮಿಶ್ರಿತ ಇಂಧನ), ಇ25, ಇ27 ಮತ್ತು ಇ30 ಎಥೆನಾಲ್ ಮಿಶ್ರಿತ ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು ತೆಗೆದು ಹಾಕಲಾಗಿದೆ.

ಎಥೆನಾಲ್ ಮಿಶ್ರಿತ ಪೆಟ್ರೋಲ್ ಬಳಕೆಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಕ್ರಮಕೈಗೊಳ್ಳಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಮಧ್ಯಪ್ರಾಚ್ಯ ಯುದ್ಧದ ಪರಿಣಾಮವಾಗಿ ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಕಂಡಿದೆ. ಕಳೆದ ತಿಂಗಳು 11 ದಿನಗಳ ಅಂತರದಲ್ಲಿ ದೇಶದಲ್ಲಿ ಪೆಟ್ರೋಲ್ ದರವನ್ನು 7.5 ರೂ. ಹೆಚ್ಚಳ ಮಾಡಲಾಗಿದೆ.

ಪುಟ 2ಕ್ಕೆ




# ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ಕುಸಿತ

### ಬೆಂಗಳೂರು, ಮೈಸೂರು, ಮಂಡ್ಯ ನಗರಗಳಿಗೆ ಕುಡಿಯುವ ನೀರಿನ ಆತಂಕ

**ಮೈಸೂರು:** ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆ ಇನ್ನೂ ಚುರುಕುಗೊಳ್ಳದ ಹಿನ್ನೆಲೆಯಲ್ಲಿ ಜೀವನಾಡಿ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ 81 ಅಡಿಗೆ ಕುಸಿದಿದೆ.

ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ಕುಸಿಯುತ್ತಿರುವುದರಿಂದ ಮುಂಬರುವ ದಿನಗಳಲ್ಲಿ ಬೆಂಗಳೂರು, ಮೈಸೂರು, ಮಂಡ್ಯ, ರಾಮನಗರ ಸೇರಿದಂತೆ ಪ್ರಮುಖ ನಗರಗಳಿಗೆ ಭಾರೀ ಸಂಕಷ್ಟ ಎದುರಾಗುವ ಮುನ್ಸೂಚನೆ ಇದೆ. ರಾಜಧಾನಿ ಬೆಂಗಳೂರಿಗೆ ಕುಡಿಯುವ ನೀರು ಪೂರೈಸುವ ಪ್ರಮುಖ ಮೂಲವೇ ಕೆಆರ್‌ಎಸ್ ಆಗಿರುವುದರಿಂದ ಬೆಂಗಳೂರಿಗರಿಗೆ ಕುಡಿಯುವ ನೀರಿನ ಅಭಾವ ಎದುರಾಗುವುದು ಖಚಿತ ಎನ್ನಲಾಗಿದೆ.

ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ ಡ್ಯಾಂನ ನೀರಿನ ಮಟ್ಟ 81 ಅಡಿಗೆ ಕುಸಿದಿರುವುದರಿಂದ ಕುಡಿಯುವ ನೀರಿಗೆ ಸಮಸ್ಯೆ ಎದುರಾಗುವ ಆತಂಕ ಪರಿಸ್ಥಿತಿ ನಿರ್ಮಾಣವಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಜಲಾಶಯದಲ್ಲಿ ನೀರಿನ ಮಟ್ಟ 108 ಅಡಿ ಇತ್ತು.

ಆದರೆ ಈ ಬಾರಿ ಮಳೆ ಅಭಾವದಿಂದ ಡ್ಯಾಂ ಸಂಪೂರ್ಣ ಖಾಲಿಯಾಗುವ ಹಂತ ತಲುಪಿದೆ. ಈ ಹಿಂದೆ 2019ರಲ್ಲಿ ಜಲಾಶಯದ ಮಟ್ಟ 80 ಅಡಿಗೆ ಕುಸಿದಿತ್ತು. ಸದ್ಯ

ಪುಟ 2ಕ್ಕೆ



### ಮತ್ತೆ ಕಾವೇರಿ ವಿವಾದದ ಕಿಡಿ

**ತಮಿಳುನಾಡಿಗೆ ಜೂನ್ ತಿಂಗಳಿನಲ್ಲಿ ಕರ್ನಾಟಕ 9.19 ಟಿಎಂಸಿ ಕೋಟಾದ ನೀರನ್ನು ಹರಿಸಬೇಕಾಗಿದೆ. ಆದರೆ ಕೆಆರ್‌ಎಸ್ ಜಲಾಶಯದಲ್ಲೇ ಸದ್ಯ ಬಳಕೆಗೆ ಇರುವುದು ಕೇವಲ 6 ಟಿಎಂಸಿ ನೀರು. ಇದರಿಂದ ತಮಿಳುನಾಡಿನ ಜೊತೆ ಜಲ ಸಮಸ್ಯೆ ತಲೆದೂರುವ ಆತಂಕ ಎದುರಾಗಿದೆ. ಉಭಯ ರಾಜ್ಯಗಳ ನಡುವೆ ಮತ್ತೆ ಕಾವೇರಿ ವಿವಾದದ ಕಿಡಿ ಹೊತ್ತಿಕೊಳ್ಳುವ ಸಾಧ್ಯತೆ ದಟ್ಟವಾಗಿದೆ. ಮುಂಬರುವ ದಿನಗಳಲ್ಲಿ ಮುಂಗಾರು ಮಳೆ ಚುರುಕಾಗಿ, ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ನೀರು ಹರಿದು ಬರದಿದ್ದರೆ ಕರ್ನಾಟಕ ಮತ್ತು ತಮಿಳುನಾಡು ಎರಡೂ ರಾಜ್ಯಗಳಿಗೆ ಜಲಸಂಕಷ್ಟ ಆಗುವ ಸಾಧ್ಯತೆ ಇದೆ ಎನ್ನಲಾಗಿದೆ.**

## ಸರ್ಕಾರ ರಿಪೀಟ್ ಆದ ಚರಿತ್ರೆ ಇಲ್ಲ!

### 2028ಕ್ಕೆ ಕಾಂಗ್ರೆಸ್ ಸೋಲಿನ ಮುನ್ಸೂಚನೆ ನೀಡಿದರೆ ಜಾರಕಿಹೊಳಿ?

**ಬೆಂಗಳೂರು:** ರಾಮಕೃಷ್ಣ ಹೆಗಡೆ ಸರ್ಕಾರದ ನಂತರ ರಾಜ್ಯದಲ್ಲಿ ಇದುವರೆಗೂ ಒಂದೇ ಒಂದು ಸರ್ಕಾರ ಸಹ ರಿಪೀಟ್ ಆಗಿಲ್ಲ ಎಂದು ಹೇಳುವ ಮೂಲಕ ಪರೋಕ್ಷವಾಗಿ 2028ರಲ್ಲಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಭವಿಷ್ಯ ನುಡಿದಿದ್ದಾರೆ.

ಮಾಧ್ಯಮದವರೊಂದಿಗೆ ಗುರುವಾರ ಮಾತನಾಡಿದ ಅವರು, ದುಡಿದರೆ ಕೂಲಿ ಸಿಕ್ಕಿಯೇ ಸಿಗುತ್ತದೆ. ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕೆಲಸ ಮಾಡಿದ್ದೇವೆಂದು ಅವರಿಗೆ ಅಧಿಕಾರ ಕೊಟ್ಟಿದ್ದಾರೆ. ಯಾರು ಪಕ್ಷಕ್ಕೆ ದುಡಿಯುತ್ತಾರೆ ಅವರಿಗೆ ಅಧಿಕಾರ ಸಿಗಲೇಬೇಕು. 2028ರ ಬಗ್ಗೆ ಈಗಲೇ ಚರ್ಚೆ ಯಾಕೆ? ಇನ್ನೂ ಮಗುನೇ ಹುಟ್ಟಿಲ್ಲ ಚರ್ಚೆ ಯಾಕೆ? ನನಗೂ ಕೂಲಿ ಸಿಕ್ಕಿದೆ. ಮಂತ್ರಿ ಮಾಡಿದ್ದಾರೆ. ನನಗೆ ಡಬಲ್ ಸಮಾಧಾನ ಆಗಿದೆ. ಕೆಲಸ ಮಾಡುವವರಿಗೆ ಹುದ್ದೆ ಅವಶ್ಯಕತೆ ಇಲ್ಲ. ಹಿಂದಿನ



### ಸಿದ್ದು ಜೊತೆ ಭಿನ್ನಾಭಿಪ್ರಾಯವಿಲ್ಲ

**ಬೆಂಗಳೂರು:** ಸಿದ್ದರಾಮಯ್ಯ ಹಾಗೂ ನನ್ನ ನಡುವೆ ಭಿನ್ನಾಭಿಪ್ರಾಯ ಇದೆ ಎಂದು ಹೇಳಿದ್ದು ಯಾರು? ಈ ಬಗ್ಗೆ ನಾನು ಮೊದಲಿನಿಂದಲೂ ಹೇಳಿದ್ದೇನೆ. ನಮ್ಮ ನಡುವೆ ಯಾವುದೇ ಗೊಂದಲ ಇಲ್ಲ. ಕೆಲವು ಐಟಿ ಸೆಲ್‌ನವರು ಸ್ವಲ್ಪ ಹೆಚ್ಚಿನ ಪ್ರಚಾರ ಮಾಡಿದರು ಎಂದು ಸಚಿವ ಸತೀಶ್

## ಜಮೀರ್ ವಿರುದ್ಧ ಸಿದ್ದು ಕಿಡಿ

### ನನ್ನ ವಿರುದ್ಧವೇ ಷಡ್ಯಂತ್ರ: ಅವನಿಗೇಕೆ ಕೊಡಬೇಕು ಸಚಿವ ಸ್ಥಾನ?

**ಬೆಂಗಳೂರು:** ಚುನಾವಣೆಯಲ್ಲಿ ನನ್ನ ವಿರುದ್ಧವೇ ಷಡ್ಯಂತ್ರ ಮಾಡಿದ್ದಾನೆ. ಅವನಿಗೇಕೆ ಕೊಡಬೇಕು ಸಚಿವ ಸ್ಥಾನ? ಎಂದು ಮಾಜಿ ಸಚಿವ ಜಮೀರ್ ಅಹ್ಮದ್ ವಿರುದ್ಧ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗುಡುಗಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಂಪುಟದಲ್ಲಿ ಜಮೀರ್ ಅಹ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ನೀಡಬೇಕು




ಎಂದು ಜಮೀರ್ ಅವರ ಬೆಂಬಲಿಗರು ಮನವಿ ಮಾಡಲು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಲು

## ಜಿಟಿಡಿ ಜೆಡಿಎಸ್ ಬಿಡಲ್ಲ: ರೇವಣ್ಣ

**ಮೈಸೂರು:** ಶಾಸಕ ಜಿ.ಟಿ.ದೇವೇಗೌಡ ಅವರು ಜೆಡಿಎಸ್ ನಲ್ಲೇ ಇರುತ್ತಾರೆ. ಜೆಡಿಎಸ್ ನಿಂದಲೇ ಸ್ಪರ್ಧೆ ಮಾಡುತ್ತಾರೆ ಎಂದು ಶಾಸಕ ಎಚ್.ಡಿ. ರೇವಣ್ಣ ತಿಳಿಸಿದರು.

ಮೈಸೂರಿನಲ್ಲಿ ಜಿ.ಟಿ.ದೇವೇಗೌಡರ ಕುರಿತು ಪ್ರತಿಕ್ರಿಯಿಸಿದ ಅವರು, ಜಿ.ಟಿ ದೇವೇಗೌಡರು ದೇವೇಗೌಡರನ್ನು ಭೇಟಿ ಮಾಡಿ ನಾನೆಲ್ಲೂ ಹೋಗಲ್ಲ ಜೆಡಿಎಸ್ ನಲ್ಲೇ ಇರುತ್ತೇನೆ ಎಂದಿದ್ದಾರೆ. ಏನೇ ಭಿನ್ನಾಭಿಪ್ರಾಯ ಇದ್ದರೂ ನಾನು, ಎಚ್.ಡಿ. ಕುಮಾರಸ್ವಾಮಿ, ಸಾರಾ ಮಹೇಶ್ ಎಲ್ಲರೂ ಒಟ್ಟಾಗಿ ಕೂತು ಸರಿಪಡಿಸುತ್ತೇವೆ. ಎಲ್ಲವನ್ನೂ ಕಾಲ ನಿರ್ಧರಿಸುತ್ತದೆ ಎಂದರು.



ರಾಜ್ಯಸಭೆ ಸೀಟಿಗೆ ದೇವೇಗೌಡರು ಅರ್ಜಿ ಹಾಕಿರಲಿಲ್ಲ ದೇವೇಗೌಡರಿಗೆ ರಾಜ್ಯಸಭಾ ಸ್ಥಾನ ಮುಖ್ಯವೇನು ಅಲ್ಲ. ಮೋದಿ ಕೈಬಲಪಡಿಸುವುದು ನಮಗೆ ಮುಖ್ಯ. ದೇವೇಗೌಡರು ರಾಜ್ಯಸಭೆ ಸ್ಥಾನವನ್ನು ಕೇಳಿರಲಿಲ್ಲ. ಮಾಧ್ಯಮಗಳಲ್ಲಿ ಆ ವಿಚಾರ ಪ್ರಸ್ತಾಪವಾಯಿತು

ಪುಟ 2ಕ್ಕೆ

## ಶಾಸಕ ಷಡಕ್ಷರಿ ಅಸ್ವಸ್ಥ



**ನವದೆಹಲಿ:** ತಿಪಟೂರು ಕಾಂಗ್ರೆಸ್ ಶಾಸಕ ಷಡಕ್ಷರಿ ಅವರು ಅಸ್ವಸ್ಥರಾಗಿದ್ದಾರೆ. ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ನವದೆಹಲಿಯ ಕರ್ನಾಟಕ ಭವನದಲ್ಲಿದ್ದಾಗ ದಿಢೀರ್ ಅಸ್ವಸ್ಥರಾಗಿದ್ದಾರೆ. ಅಲ್ಲಿಯೇ ಇದ್ದ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಅವರು ಷಡಕ್ಷರಿ ಅವರನ್ನು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.


ಶಾಸಕ ಷಡಕ್ಷರಿ ಅವರು ಸಚಿವ ಸ್ಥಾನಕ್ಕಾಗಿ ಹೈಕಮಾಂಡ್ ನಾಯಕರನ್ನು ಭೇಟಿಯಾಗಲು ದೆಹಲಿಗೆ ತೆರಳಿದ್ದರು. ಈ ವೇಳೆ ಆರೋಗ್ಯದಲ್ಲಿ ಸಮಸ್ಯೆ ಕಾಣಿಸಿಕೊಂಡಿದೆ ಎಂದು ತಿಳಿದುಬಂದಿದೆ.

## ಹಾರ್ಮುಜ್ ಬಂದ್: ಕಚ್ಚಾತೈಲ ಪೂರೈಕೆ ವ್ಯತ್ಯಯ

**ಟೆಹ್ರಾನ್:** ಇರಾನ್, ಅಮೆರಿಕ ಮತ್ತು ಇಸ್ರೇಲ್ ಸಂಘರ್ಷ ಮತ್ತೆ ಉಲ್ಬಣಗೊಂಡಿದೆ. ಅಮೆರಿಕಾ ದಾಳಿ ಬೆನ್ನಲ್ಲೇ ಹಾರ್ಮುಜ್ ಜಲಸಂಧಿಯನ್ನು ಇರಾನ್ ಮತ್ತೆ ಬಂದ್ ಮಾಡಿದೆ.

ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ಮುಚ್ಚಿರುವುದಾಗಿ ಇರಾನ್ ಘೋಷಿಸಿದೆ. ಈ ಜಲಸಂಧಿಯನ್ನು ದಾಟಲು ಪ್ರಯತ್ನಿಸುವ ಯಾವುದೇ ಹಡಗಿನ ಮೇಲೆ ದಾಳಿ ಮಾಡಲಾಗುವುದು ಎಂದು ಐಆರ್‌ಜಿಸಿಯಿಂದ ಘೋಷಣೆ ಮಾಡಿದೆ.

ಎಲ್ಲ ದೇಶಗಳಿಗೂ ಐಆರ್‌ಜಿಸಿ ಎಚ್ಚರಿಕೆ ಸಂದೇಶ ರವಾನಿಸಿದೆ. ದೇಶದ ಉನ್ನತ ಜಂಟಿ ಮಿಲಿಟರಿ ಕಮಾಂಡ್, ವಾಣಿಜ್ಯ ಹಡಗುಗಳು ಮತ್ತು ತೈಲ ಟ್ಯಾಂಕರ್‌ಗಳು ಸೇರಿದಂತೆ ಎಲ್ಲಾ ಸಂಚಾರಕ್ಕೂ ಹಾರ್ಮುಜ್ ಜಲಸಂಧಿಯನ್ನು



ಸ್ಥಗಿತಗೊಳಿಸಲು ಆದೇಶಿಸಿದೆ. ಹಾರ್ಮುಜ್ ಮೇಲಿನ ನಿರ್ಬಂಧದಿಂದ ಕಚ್ಚಾತೈಲ ಮತ್ತು ನೈಸರ್ಗಿಕ ಅನಿಲ ಪೂರೈಕೆಯಲ್ಲಿ

ಪುಟ 2ಕ್ಕೆ

## ಅಮೆರಿಕಾ ದಾಳಿ: 3 ಭಾರತೀಯರು ಸಾವು

**ನವದೆಹಲಿ:** ಹಾರ್ಮುಜ್ ಜಲಸಂಧಿಯ ಬಳಿ ಭಾರತದ ವಾಣಿಜ್ಯ ಹಡಗಿನ ಮೇಲೆ ಅಮೆರಿಕಾ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಸಾವನ್ನಪ್ಪಿದ್ದಾರೆ.

ಒಮಾನ್ ಕರಾವಳಿಯಲ್ಲಿ 24 ಭಾರತೀಯ ನಾವಿಕರಿದ್ದ ಹಡಗಿನ ಮೇಲೆ ದಾಳಿ ನಡೆದಿತ್ತು. ಇದರಲ್ಲಿ 21 ನಾವಿಕರನ್ನು ರಕ್ಷಣೆ ಮಾಡಲಾಗಿದೆ. ಮೂವರು ನಾಪತ್ತೆಯಾಗಿದ್ದರು. ಈ ಮೂವರಲ್ಲಿ ಇಬ್ಬರ ಮೃತದೇಹ ಪತ್ತೆಯಾಗಿದೆ ಎಂದು ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ತಿಳಿಸಿದ್ದಾರೆ.

ಟ್ಯಾಂಕರ್ ಇರಾನ್‌ನಿಂದ ತೈಲವನ್ನು ಸಾಗಿಸುತ್ತಿತ್ತು. ಸೂಚನೆಗಳನ್ನು ಪಾಲಿಸದ ಕಾರಣ ನಮ್ಮ ಸೇನೆಯು ಹಡಗಿನ ಮೇಲೆ ನಿಖರವಾದ ದಾಳಿ ನಡೆಸಿತು ಎಂದು ಅಮೆರಿಕ ತಿಳಿಸಿದೆ.



## ರಾಕೇಶ್ ಟ್ರಸ್ಟ್‌ಗೆ ಸಿದ್ದು ಅನುದಾನ

### ಪದತ್ಯಾಗಕ್ಕೂ ಮುನ್ನ ಪುತ್ರನ ಹೆಸರಿನ ಸಂಸ್ಥೆಗೆ ‘ಭರ್ಜರಿ ಗಿಫ್ಟ್’

**ಬೆಂಗಳೂರು:** ಮಾಜಿ ಸಿಎಂ ಸಿದ್ದರಾಮಯ್ಯ ಅವರು ಪದತ್ಯಾಗಕ್ಕೂ ಮುನ್ನವೇ ಕುರುಬ ಸಮುದಾಯಕ್ಕೆ ಭರ್ಜರಿ ಗಿಫ್ಟ್ ನೀಡಿದ್ದಾರೆ. ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿಯುವ ತರಾತುರಿಯಲ್ಲೇ ಕುರುಬ ಸಮುದಾಯಕ್ಕೆ ಅನುದಾನ ಬಿಡುಗಡೆ ಮಾಡಿದ್ದಾರೆ ಎನ್ನಲಾಗಿದೆ.

ನೂತನ ಸಿಎಂ ಡಿ.ಕೆ.ಶಿವಕುಮಾರ್ ಅವರ ಪ್ರಮಾಣ ವಚನ ಸ್ವೀಕಾರಕ್ಕೂ ಒಂದು ದಿನ ಮೊದಲೇ ಆರ್ಥಿಕ ಇಲಾಖೆಯು ವಿವಿಧ ಸಂಸ್ಥೆಗಳಿಗೆ 71.85 ಕೋಟಿ ಅನುದಾನ ಮಂಜೂರು ಮಾಡಿದೆ. ಸಮುದಾಯ ಭವನ ಹಾಸ್ಟೆಲ್ ನಿರ್ಮಾಣಕ್ಕೆ ಮೀಸಲಿಟ್ಟ ಬಜೆಟ್‌ನ ಶೇ 52ರಷ್ಟು ಅನುದಾನ ಇದೀಗ ಕೆಲವೇ ಸಮುದಾಯದ ಸಂಸ್ಥೆಗಳಿಗೆ ಮಂಜೂರಾಗಿದೆ ಎಂದು ತಿಳಿದು ಬಂದಿದೆ.

2026–27ನೇ ಸಾಲಿನ ಬಜೆಟ್‌ನಲ್ಲಿ ಸಮು




ದಾಯ ಭವನಗಳ ನಿರ್ಮಾಣಕ್ಕೆ 136 ಕೋಟಿ ಮೀಸಲಿಟ್ಟಿದ್ದ ಸರ್ಕಾರ ಈ ಪೈಕಿ ಶೇ 52ರಷ್ಟು ಅನುದಾನವನ್ನು ಕೇವಲ ಮೂರ್ನಾಲ್ಕು ಸಮುದಾಯಗಳಿಗೆ ಮಾತ್ರ ಮಂಜೂರು ಮಾಡಿದೆ. 8 ಮಡಿವಾಳ ಸಮುದಾಯ ಸಂಘಗಳು, 2 ಯಾದವ ಸಮುದಾಯ ಸಂಘಗಳು, 1 ಹೆಳವ ಸಮುದಾಯ ಸಂಘ, 1 ಸವಿತಾ ಸಮಾಜದ ಸಂಘ ಮತ್ತು ತಿ.ನರಸೀಪುರ ತಾಲೂಕಿಗೆ 13 ಸಮುದಾಯ ಭವನಗಳನ್ನು ಮಂಜೂರು ಮಾಡಲಾಗಿದೆ. ಜೊತೆಗೆ ಕುರುಬ ಸಮುದಾಯದ 89 ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ. ಇದರೊಂದಿಗೆ ಗದಗದ ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್‌ಗೂ 50 ಲಕ್ಷ ಅನುದಾನ ಬಿಡುಗಡೆಯಾಗಿದೆ ಎನ್ನಲಾಗಿದೆ.

ಹಿಂದುಳಿದ ವರ್ಗಗಳ ಸಮುದಾಯದ ಅಡಿಯಲ್ಲಿ ಸಾವಿರಕ್ಕೂ ಹೆಚ್ಚು ಜಾತಿಗಳು ಬರುತ್ತವೆ. ಪ್ರವರ್ಗ 1ರಲ್ಲಿಯೇ 147 ಜಾತಿಗಳಿವೆ. ಇವೆಲ್ಲವನ್ನೂ ಕಡೆಗಣಿಸಿ ಕೇವಲ ಮೂರ್ನಾಲ್ಕು ಸಮುದಾಯಕ್ಕೆ ತರಾತುರಿಯಲ್ಲಿ ಅನುದಾನ ಮಂಜೂರು ಮಾಡಲಾಗಿದೆ. ಹಿಂದುಳಿದ ವರ್ಗಗಳ ಪೈಕಿ ಕುರುಬ ಸಮುದಾಯಕ್ಕೆ ಹೆಚ್ಚಿನ ಅನುದಾನ ನೀಡಿದೆ.

ಪುಟ 2ಕ್ಕೆ

## ಜಿ ರಾಮ್ ಜಿ: 80:20 ವೇತನಕ್ಕೆ ಆಗ್ರಹ

### ರಾಜ್ಯಗಳಿಗೆ ಹೆಚ್ಚಿನ ಹೊರೆ: ಸಚಿವ ಈಶ್ವರ ಖಂಡ್ರೆ ಟೀಕೆ

**ಬೆಂಗಳೂರು:** ಗ್ರಾಮೀಣ ಜನರಿಗೆ ಉದ್ಯೋಗ ಖಾತ್ರಿ ಒದಗಿಸುವ ವಿಬಿ ಜಿ ರಾಮ್ ಜಿ ಯೋಜನೆಯಡಿ ನೀಡುವ ವೇತನ ಅನುಪಾತವನ್ನು ಕನಿಷ್ಠ 80:20ಕ್ಕೆ ಹೆಚ್ಚಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದರು.

ಸುದ್ದಿಗಾರರ ಜೊತೆ ಗುರುವಾರ ಮಾತನಾಡಿದ ಅವರು, ಯುಪಿಎ ಸರ್ಕಾರ 2006ರಲ್ಲಿ ಜಾರಿ ಮಾಡಿದ ನರೇಗಾ ಯೋಜನೆಯ ಅಡಿಯಲ್ಲಿ ಒದಗಿಸಲಾಗುವ ಉದ್ಯೋಗಕ್ಕೆ ನೀಡುವ ಕೂಲಿಯ ಶೇ.90ರಷ್ಟು ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿತ್ತು. ರಾಜ್ಯ ಸರ್ಕಾರಗಳು ಕೇವಲ 10ರಷ್ಟು ಭರಿಸುತ್ತಿದ್ದವು ಎಂದರು.

ಆದರೆ, ನರೇಗಾ ಬದಲು ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಜುಲೈ 1ರಿಂದ ಜಾರಿ ಮಾಡುತ್ತಿರುವ ವಿಬಿ ಜಿ ರಾಮ್ ಜಿಯಲ್ಲಿ ಕೇಂದ್ರ



ಸರ್ಕಾರ 60:40 ಅನುಪಾತದಡಿ ಹಣ ಒದಗಿಸಲಿದೆ. ಇದು ರಾಜ್ಯ ಸರ್ಕಾರಗಳಿಗೆ ಹೆಚ್ಚಿನ ಹೊರೆಯಾಗಲಿದೆ. ಹೀಗಾಗಿ ಈ ಅನುಪಾತವನ್ನು ಹಿಂದೆ ಇದ್ದಂತೆ 90:10 ಅನುಪಾತದಲ್ಲಿ ಮುಂದುವರಿಸಬೇಕು ಅಥವಾ ಕನಿಷ್ಠ 80:20ಕ್ಕಾದರೂ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ವರ್ಷದಲ್ಲಿ ಕೃಷಿ ಚಟುವಟಿಕೆ ಉತ್ತುಂಗದ 60 ದಿನ ಉದ್ಯೋಗ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿಲುವು ಸರಿಯಲ್ಲ. ಸಮರ್ಥನೀಯವೂ ಅಲ್ಲ. ಆಧುನಿಕ ಯುಗದಲ್ಲಿ ಕೃಷಿ ಕಾರ್ಯಕ್ಕೆ ಯಂತ್ರೋಪಕರಣಗಳು ಬಂದಿವೆ. ಬಹುತೇಕ ಗ್ರಾಮೀಣ ಭೂರಹಿತ ಕೂಲಿ ಕಾರ್ಮಿಕರಿಗೆ ಉದ್ಯೋಗ ಸಿಗುತ್ತಿಲ್ಲ. ಹೀಗಾಗಿ, ಅವರಿಗೆ ಆಸರೆಯಾಗಿರುವ ಉದ್ಯೋಗ ಖಾತ್ರಿಗೆ ರಜೆ ನೀಡುವ ಪ್ರಸ್ತಾವ ಕೈಬಿಡಬೇಕು ಎಂದು ಖಂಡ್ರೆ ಒತ್ತಾಯಿಸಿದರು.

ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅಧ್ಯಕ್ಷತೆಯಲ್ಲಿ ಜೂನ್ 28 ಮತ್ತು 29ರಂದು ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರ ಸಭೆ ದೆಹಲಿಯಲ್ಲಿ ನಡೆಯಲಿದೆ. ಈ ಸಭೆಯಲ್ಲಿ ವೇತನ ಅನುಪಾತ

ಪುಟ 2ಕ್ಕೆ

# ನೋಟಿಸ್ ನೀಡದೆ ಸರ್ವೆಗೆ ಬಂದ ಅಧಿಕಾರಿಗಳಿಗೆ ರೈತರಿಂದ ಆಕ್ಷೇಪ





ರಾಮನಗರ: ನೋಟಿಸ್ ನೀಡದೆ ಅಕ್ರಮವಾಗಿ ಜಮೀನು ಸರ್ವೆ ಮಾಡಲು ಮುಂದಾದ ಕಂದಾಯ ಇಲಾಖೆ, ಭೂ ದಾಖಲೆಗಳ ಇಲಾಖೆ ಹಾಗೂ ಬಿಎಂಐಸಿಪಿಎ ಅಧಿಕಾರಿಗಳು ರೈತರ ಪ್ರಶ್ನೆಗಳಿಗೆ ಉತ್ತರಿಸಲಾಗದೆ ಕಾಲ್ಕಿತ್ತ ಪ್ರಸಂಗ ತಾಲ್ಲೂಕಿನ ಬಿಡದಿ ಹೋಬಳಿ ಶೇಷಗಿರಿಹಳ್ಳಿ ಗ್ರಾಮದಲ್ಲಿ ನಡೆದಿದೆ.

ರಾಮನಗರ ತಾಲ್ಲೂಕು ಭೂ ದಾಖಲೆಗಳ ಸಹಾಯಕ ನಿರ್ದೇಶಕ ಸಚಿನ್, ಬಿಡದಿ ಉಪತಹಸೀಲ್ದಾರ್ ಮಂಜುನಾಥ್ ಹಾಗೂ ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ಸಹಾಯಕ ನಿರ್ದೇಶಕಿ ಬಬಿತಾ ಅವರನ್ನು ಒಳಗೊಂಡ ತಂಡ ಶೇಷಗಿರಿಹಳ್ಳಿ ಗ್ರಾಮದ ಸೋಮಶೇಖರಯ್ಯ ಎಂಬುವರಿಗೆ ಸೇರಿದ ಸರ್ವೆ ನಂಬರ್ 15/9ರಲ್ಲಿರುವ 3 ಎಕರೆ ಜಮೀನಿನಲ್ಲಿ ಸರ್ವೆ ಕಾರ್ಯಕ್ಕೆ ಮುಂದಾಗಿದ್ದರು.

ವಿಷಯ ತಿಳಿದ ಸೋಮಶೇಖರಯ್ಯರವರ ಪತ್ನಿ ಸುಶೀಲಮ್ಮನವರು ಸ್ಥಳಕ್ಕಾಗಮಿಸಿ ಸರ್ವೆ ಕಾರ್ಯದ ಬಗ್ಗೆ ಪ್ರಶ್ನೆ ಮಾಡಿದ್ದಾರೆ.

**▸▸ ರೈತರ ಪ್ರಶ್ನೆಗಳಿಗೆ ಉತ್ತರಿಸಲಾಗದೆ ಕಾಲ್ಕಿತ್ತ ಅಧಿಕಾರಿಗಳು**

**▸▸ ಬಂಡವಾಳ ಶಾಹಿಗಳೊಂದಿಗೆ ಶಾಮೀಲಾಗಿರುವ ಅಧಿಕಾರಿಗಳು ರೈತರಿಗೆ ಪೋಡಿ ಮಾಡಿಕೊಡುತ್ತಿಲ್ಲ: ಆರೋಪ**

ನಮ್ಮ ಜಮೀನಿನ ಸರ್ವೇ ಕಾರ್ಯ ಮಾಡಲು ನಿಮಗೆ ಹೇಳಿದವರು ಯಾರು? ನಾವು ಅರ್ಜಿ ಕೊಟ್ಟಿದ್ದೀವಾ? ಎಂದು ಪ್ರಶ್ನೆ ಮಾಡಿದರು. ಆದರೆ ಅಧಿಕಾರಿಗಳು ಉದ್ಧಟತನ ತೋರಿ ಸರ್ವೇ ಕಾರ್ಯ ಮಾಡುತ್ತಿದ್ದರು.

ಗಲಾಟೆಯನ್ನು ಗಮನಿಸಿದ ಅಕ್ಕ ಪಕ್ಕದ ರೈತರು ಮತ್ತು ಸ್ಥಳೀಯ ಮುಖಂಡರು ಸ್ಥಳಕ್ಕೆ ಬಂದು ಆಕ್ಷೇಪ ವ್ಯಕ್ತಪಡಿಸಿದಾಗ ಅಧಿಕಾರಿಗಳು ಉತ್ತರ ಕೊಡಲಾಗದೆ ಕಾರು ಹತ್ತಿ ಪರಾರಿಯಾದರು.

ಈ ವೇಳೆ ಭೂ ಮಾಲೀಕರಾದ ಸುಶೀಲಮ್ಮ ಮಾತನಾಡಿ, ಶೇಷಗಿರಿಹಳ್ಳಿ ಸರ್ವೆ ನಂ. 15/9ರ ಜಮೀನು ನನ್ನ ಪತಿ ಸೋಮಶೇಖರಯ್ಯ ಬಿನ್ ದೊಡ್ಡನಾರಾಯಣಪ್ಪ ಅವರಿಗೆ ಸೇರಿದ್ದಾಗಿದ್ದು, 1978ರಲ್ಲಿ ಸರಕಾರಿ ಗೋಮಾಳ ಮಂಜೂರಾಗಿದ್ದು ಸಾಗುವಳಿ ಪತ್ರದ ಮೂಲಕ ಖಾತೆಯಾಗಿದೆ. ಆದರೆ ಅನೇಕ ಬಾರಿ ಅರ್ಜಿ ಸಲ್ಲಿಸಿದ್ದರೂ ಅಧಿಕಾರಿಗಳು ಪೋಡಿ ಮಾಡುತ್ತಿಲ್ಲ ಎಂದು ಕಿಡಿಕಾರಿದರು.

ಪಕ್ಕದ ಜಮೀನಿನಲ್ಲಿ ಖಾಸಗಿಯವರು ಲೇಔಟ್ ಮಾಡಿರುವ ವಿಚಾರವಾಗಿ ಸ್ಥಳೀಯ ವ್ಯಕ್ತಿಯೊಬ್ಬರು ತಕರಾರು ಅರ್ಜಿ ಸಲ್ಲಿಸಿದ್ದು, ಆ ತಕರಾರು ಬಗೆಹರಿಸಲು ಬಿಎಂಐಸಿಪಿಎಗೆ ಪತ್ರ ಬರೆದಿರುವುದಾಗಿ ರಾಮನಗರ ತಹಸೀಲ್ದಾರ್‌ರವರು ಹಾರಿಕೆ ಉತ್ತರ ಹೇಳಿಕೊಂಡು ದಿನ ದೂಡುತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ಶೇಷಗಿರಿಹಳ್ಳಿ ಸರ್ವೆ ನಂ. 15/6, 15/7 ರ ಜಮೀನು ಅಸುಪಾಸಿನಲ್ಲಿದ್ದು ನಮಗೆ ಸೇರಿದ ಸರ್ವೆ ನಂ. 15/9ರ ಪೈಕಿ 3 ಎಕರೆಯಲ್ಲಿ ನಾವು ಅನುಭವದಲ್ಲಿದ್ದು, ಪ್ರತಿವರ್ಷ ಬೆಳೆ ಬೆಳೆಯುತ್ತಿದ್ದೇವೆ. ಇದೀಗ ಎಡಿಎಲ್‌ಆರ್ ಮತ್ತು ಬಿಎಂಐಸಿಪಿ ಅಧಿಕಾರಿಗಳು ಭೂ ಮಾಲೀಕರಿಗೆ ನೋಟಿಸ್ ನೀಡದೆ ಏಕಾಏಕಿ ಖಾಸಗಿ ವ್ಯಕ್ತಿಗಳೊಂದಿಗೆ ಬಂದು ಜಮೀನು ಅಳತೆ ಮಾಡುತ್ತಿದ್ದರು. ಅಧಿಕಾರಿಗಳು ನಕ್ಷೆ, ನೋಟಿಸ್ ಅಥವಾ ಆದೇಶ ಸೇರಿದಂತೆ ಯಾವುದೇ ಅಧಿಕೃತ ದಾಖಲೆಗಳನ್ನು ತಂದಿರಲಿಲ್ಲ. ಇದನ್ನು ಪ್ರಶ್ನಿಸಿದರೆ ಬೇಜವಾಬ್ದಾರಿಯಿಂದ ಮಾತಾಡುತ್ತಾರೆ ಎಂದು ದೂರಿದರು.

ಗ್ರಾಮದ ಮುಖಂಡ ದೇವರಾಜು ಮಾತನಾಡಿ, ಶೇಷಗಿರಿಹಳ್ಳಿ ಭಾಗದಲ್ಲಿ ಭೂ ಮಾಲೀಕರಿಗೆ ನೋಟಿಸ್ ನೀಡದೆ ಅಧಿಕಾರಿಗಳು ಸರ್ವೆ ಕಾರ್ಯಕ್ಕೆ ಮುಂದಾಗಿ ರೈತರಿಗೆ ದೌರ್ಜನ್ಯ ಎಸಗುತ್ತಿರುವ ಪ್ರಕರಣಗಳು ನಡೆಯುತ್ತಿವೆ. ಬೆಂಗಳೂರು ಮಹಾನಗರಕ್ಕೆ ಸಮೀಪದಲ್ಲಿರುವ ಜಮೀನುಗಳ ಮೇಲೆ ಕಣ್ಣಿಟ್ಟಿರುವ ಕೆಲವು ಬಂಡವಾಳ ಶಾಹಿ ವ್ಯಕ್ತಿಗಳೊಂದಿಗೆ ಶಾಮೀಲಾಗಿರುವ ಅಧಿಕಾರಿಗಳು ರೈತರಿಗೆ ಪೋಡಿ ಮಾಡಿಕೊಡುತ್ತಿಲ್ಲ. ತಾವೇ ಬೇರೆಯವರಿಂದ ತಕರಾರು ಅರ್ಜಿ ಹಾಕಿಸುವ ಮೂಲಕ ತಡೆಯೊಡ್ಡುವುದಲ್ಲದೆ ರೈತರಿಗೆ ಧಮಕಿ ಹಾಕುತ್ತಾರೆಂದು ಆರೋಪಿಸಿದರು. ಇದೇ ಶೇಷಗಿರಿಹಳ್ಳಿಯ ಸರ್ವೆ ನಂಬರ್ 77ರಲ್ಲಿ ಟಿಬೆಟಿಯನ್ ಚಿಲ್ಡ್ರನ್ ವಿಲೇಜ್ ಗೆ ಸೇರಿದ ನೂರಾರು ಎಕರೆ ಜಮೀನನ್ನು ಇತ್ತೀಚೆಗೆ ಅಧಿಕಾರಿಗಳು ಪೋಡಿ ಮಾಡಿಕೊಟ್ಟಿದ್ದಾರೆ. ಆದರೆ, ರೈತರ ಪೋಡಿ ಅರ್ಜಿಗಳು ಹತ್ತಾರು ವರ್ಷಗಳಿಂದ ವಿಲೇವಾರಿ ಮಾಡುತ್ತಿಲ್ಲ. ಪೋಡಿಗಾಗಿ ಅರ್ಜಿ ಸಲ್ಲಿಸಿರುವ ರೈತರು ಬಕ ಪಕ್ಷಿಗಳಂತೆ ಕಾಯುತ್ತಿದ್ದಾರೆ. ಈ ಬಗ್ಗೆ ಕಂದಾಯ ಸಚಿವರು ಗಮನ ಹರಿಸಬೇಕು ಎಂದು ದೇವರಾಜು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಶೇಷಗಿರಿಹಳ್ಳಿ ಶಿವಣ್ಣ, ಮಂಜು, ನರಸಿಂಹಮೂರ್ತಿ, ರೈತ ಗೋಪಾಲಯ್ಯ ಮತ್ತಿತರರು ಇದ್ದರು.

> **ಶೇಷಗಿರಿಹಳ್ಳಿ ಬಳಿಯ ಮೆಗಾ ಸಿಟಿ ಲೇಔಟ್ ನಿರ್ಮಾಣಕ್ಕಾಗಿ 2000ನೇ ಸಾಲಿನಲ್ಲಿ ಬಿಎಂಐಸಿಪಿಎ ಯಿಂದ ಕೇವಲ ತಾತ್ಕಾಲಿಕ ವಿನ್ಯಾಸ ನಕ್ಷೆಯನ್ನಷ್ಟೇ ಪಡೆಯಲಾಗಿದೆ. 25 ವರ್ಷಗಳಾದರೂ ಈ ನಕ್ಷೆಯನ್ನು ಅಧಿಕೃತ ಮಾಡಿಕೊಂಡಿಲ್ಲ. ಬಡಾವಣೆ ನಿರ್ಮಿಸುವಾಗ ರಸ್ತೆ, ಚರಂಡಿ, ವಿದ್ಯುತ್ ಉದ್ಯಾನವನ ಮೂಲಸೌಕರ್ಯ ಕಲ್ಪಿಸುವುದು ಸೇರಿದಂತೆ 14 ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಅಲ್ಲದೆ ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಾಗಗಳನ್ನು ಸ್ಥಳೀಯ ಪಂಚಾಯಿತಿಗೆ ಹಸ್ತಾಂತರಿಸಿ ಗ್ರಾಪಂನಿಂದ ಪರಿತ್ಯಾಜನ ಪತ್ರ ಪಡೆಯಬೇಕು ಆದರೆ ಇದ್ಯಾವುದು ನಡೆದಿಲ್ಲ.**
>
> ▸▸ **ದೇವರಾಜು**
> ಮುಖಂಡರು, ಶೇಷಗಿರಿಹಳ್ಳಿ.

## ಮೊದಲ ಪುಟದಿಂದ

### ರಿಪೀಟ್ ಆದ ಚರಿತ್ರೆ ಇಲ್ಲ!

ಚುನಾವಣೆ, ಮೊದಲಿನ ಚುನಾವಣೆ ಎಲ್ಲಾ ಸಂದರ್ಭದಲ್ಲಿ ಕೂಡ ನಾನು ಕೆಲಸ ಮಾಡಿದ್ದೇನೆ ಎಂದು ಹೇಳಿದರು.

### ಜಮೀರ್ ವಿರುದ್ಧ ಸಿದ್ದು ಕಿಡಿ

ಬಂದಿದ್ದರು. ಆದರೆ, ಈ ಸಂದರ್ಭದಲ್ಲಿ ಬೆಂಬಲಿಗರ ಮನವಿ ಆಲಿಸುವ ಬದಲು ಸಿದ್ದರಾಮಯ್ಯ ಅವರು ಜಮೀರ್ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಜಮೀರ್ ಬೆಂಬಲಿಗರ ಮುಂದೆ ಗುಡುಗಿದ ಸಿದ್ದರಾಮಯ್ಯ, ಅವನು ನನ್ನ ಪರಮಾಪ್ತ ಅಂತ ನೀವೆಲ್ಲ ಹೇಳ್ತೀರಾ? ಆದರೆ ಅವನು ಚುನಾವಣೆಯಲ್ಲಿ ನನ್ನ ವಿರುದ್ಧವೇ ಕೆಲಸ ಮಾಡಿದ್ದಾನೆ ಎಂದರು.

### ಜಿಟಿಡಿ ಜೆಡಿಎಸ್ ಬಿಡಲ್ಲ: ರೇವಣ್ಣ

ಅಷ್ಟೇ. ಪ್ರಧಾನಿ ಹುದ್ದೆಯನ್ನೇ ತ್ಯಾಗ ಮಾಡಿದ ದೇವೇಗೌಡರಿಗೆ ರಾಜ್ಯ ಸಭಾ ಸ್ಥಾನ ದೊಡ್ಡದೇನಲ್ಲಾ. ಕಾಂಗ್ರೆಸ್ ಈಗ ಮಾತನಾಡುತ್ತಿರುವುದು ಅಪ್ರಸ್ತುತ ಎಂದು ಹೇಳಿದರು..

### 80:20 ವೇತನಕ್ಕೆ ಆಗ್ರಹ

ಹೆಚ್ಚಿಸುವಂತೆ ಮತ್ತು 60 ದಿನಗಳ ಬಿಡುವು ಪ್ರಸ್ತಾವ ಕೈಬಿಡುವಂತೆ ಒತ್ತಾಯಿಸುತ್ತೇನೆ ಎಂದರು. ನರೇಗಾ ಯೋಜನೆಯ ನೂತನ ಸ್ವರೂಪವಾದ ವಿಬಿ ಜಿ ರಾಮ್ ಜಿ ಅಡಿಯಲ್ಲಿ ಇಂತದ್ದೇ ಕೆಲಸ ಮಾಡಬೇಕು ಎಂದು ರಾಜ್ಯಗಳಿಗೆ ಕೇಂದ್ರ ಸರ್ಕಾರ ನಿರ್ಬಂಧ ವಿಧಿಸುವುದು ಕೂಡಾ ಸರಿಯಲ್ಲ. ರಾಜ್ಯಗಳಿಗೆ ಉದ್ಯೋಗ ಆಯ್ಕೆ ಮಾಡಿಕೊಳ್ಳುವ ಸ್ವಾತಂತ್ರ್ಯ ನೀಡಬೇಕು ಎಂದು ಅವರು ಪ್ರತಿಪಾದಿಸಿದರು.

### ಅಬಕಾರಿ ಸುಂಕ ವಿನಾಯಿತಿ

ಇದರಿಂದ ವಾಹನ ಸವಾರರ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ. ಭಾರತವು ತನಗೆ ಅಗತ್ಯವಿರುವ ಶೇ.87ರಷ್ಟು ಕಚ್ಚಾ ತೈಲವನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತಿದೆ. ಇದರಿಂದ ದೇಶದ ಆರ್ಥಿಕತೆಗೆ ಹೊಡೆತ ಬೀಳುತ್ತಿದೆ. ಈ ಹಿನ್ನೆಲೆ ದೇಶೀಯವಾಗಿ ತಯಾರಾಗುವ ಎಥೆನಾಲ್ ಬಳಕೆಯನ್ನು ಹೆಚ್ಚಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ.

### ರಾಕೇಶ್ ಟ್ರಸ್ಟ್‌ಗೆ ಸಿದ್ದು ಅನುದಾನ

ಅಧಿಕಾರದಿಂದ ಇಳಿಯುವ ವೇಳೆ ತರಾತುರಿಯಲ್ಲಿ ಸಿದ್ದರಾಮಯ್ಯ ಈ ಆದೇಶ ಹೊರಡಿಸಿದ್ದಾರೆ ಎಂದು ತಿಳಿದು ಬಂದಿದೆ.

### ಚುರುಕು ನೀಡಲು ಮುಂದಾದ ಸಿಎಂ

ಆಡಳಿತದ ವೇಗ ಹೆಚ್ಚಿ ಸಲು ಒತ್ತು ನೀಡುತ್ತಿದ್ದಾರೆ. ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಇಒಗಳು ಹಾಗೂ ಹಿರಿಯ ಅಧಿಕಾರಿಗಳ ಭಾಗ ವಹಿಸಲಿದ್ದಾರೆ. ಗುಪ್ತಚರ ವಿಭಾಗದ ಮುಖ್ಯಸ್ಥರ ನೇಮಕ ಸೇರಿದಂತೆ ಹಲವು ಪ್ರಮುಖ ಹುದ್ದೆಗಳಲ್ಲಿ ಬದಲಾವಣೆಗಳನ್ನು ಮಾಡಿರುವ ಸರ್ಕಾರ, ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಹೊಸ ಚೈತನ್ಯ ನೀಡಲು ಮುಂದಾಗಿದೆ ಎನ್ನಲಾಗಿದೆ.

### ಕಚ್ಚಾತೈಲ ಪೂರೈಕೆ ವ್ಯತ್ಯಯ

ವ್ಯತ್ಯಯ ಸಾಧ್ಯತೆ ಇದೆ. ಇರಾನ್ ವಿರುದ್ಧ ಅಮೆರಿಕ ಮತ್ತೊಂದು ಸರಣಿ ಮಿಲಿಟರಿ ಕಾರ್ಯಾಚರಣೆ ಪ್ರಾರಂಭಿಸಿದ ನಂತರ ಈ ಬೆಳವಣಿಗೆ ನಡೆದಿದೆ. ಇದು ಮೂರು ತಿಂಗಳಿಗೂ ಹೆಚ್ಚು ಕಾಲ ಮುಂದುವರಿದಿರುವ ಸಂಘರ್ಷವನ್ನು ಮತ್ತಷ್ಟು ಹೆಚ್ಚಿಸಿದೆ.

### ನೀರಿನ ಮಟ್ಟ ಕುಸಿತ

ಕೆಆರ್‌ಎಸ್ ಡ್ಯಾಂನಲ್ಲಿ ಕೇವಲ 11.399 ಟಿಎಂಸಿ ನೀರು ಮಾತ್ರ ಸಂಗ್ರಹ ವಿದೆ. ಆದರೆ ಇದರಲ್ಲಿ 5 ಟಿಎಂಸಿ ನೀರು ಡೆಡ್ ಸ್ಟೋರೇಜ್ ಇರುವುದರಿಂದ ಸದ್ಯ ಬಳಕೆಗೆ 6 ಟಿಎಂಸಿ ನೀರು ಮಾತ್ರ ಸಿಗಲಿದೆ.

### ಸಿದ್ದು ಜೊತೆ ಭಿನ್ನಾಭಿಪ್ರಾಯವಿಲ್ಲ

ಜಾರಕಿಹೊಳಿ ಗುರುವಾರ ಸ್ಪಷ್ಟನೆ ನೀಡಿದ್ದಾರೆ. ಬೆಂಗಳೂರಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಸತೀಶ್ ಜಾರಕಿಹೊಳಿ, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೂ, ಸಿಎಂ ಸ್ಥಾನಕ್ಕೂ ಯಾವುದೇ ಸಂಬಂಧ ಇಲ್ಲ. ಅಧ್ಯಕ್ಷ ಆಗಿಯೇ ಪಕ್ಷದ ಕೆಲಸ ಮಾಡಬೇಕು ಅಂತೇನೂ ನಿಯಮವಿಲ್ಲ.

# ಹದಗೆಟ್ಟ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ

## ಕಸ ವಿಲೇವಾರಿ ಟೆಂಡರ್‌ನಲ್ಲಿ ಭಾರೀ ಗೋಲ್‌ಮಾಲ್: ಎಂ.ಜಿ.ಮಹೇಶ್



ಮೈಸೂರು: ರಾಜ್ಯದ ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಗೃಹ ಸಚಿವರು ತಮ್ಮ ಜವಾಬ್ದಾರಿ ಮರೆತು, ಪ್ರತಿನಿತ್ಯ ಆರ್ ಎಸ್‌ಎಸ್ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಾ ಟಿವಿ ಪ್ಯಾನೆಲಿಸ್ಟ್‌ನಂತೆ ವರ್ತಿಸುತ್ತಿದ್ದಾರೆ ಎಂದು ಬಿಜೆಪಿ ವಕ್ತಾರ ಎಂ.ಜಿ. ಮಹೇಶ್ ವಾಗ್ದಾಳಿ ನಡೆಸಿದರು

ಗುರುವಾರ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದರೂ ಸಚಿವರು ಕೇವಲ ಸೈದ್ಧಾಂತಿಕ ದ್ವೇಷ ಸಾಧನೆಯಲ್ಲಿ ನಿರತರಾಗಿದ್ದಾರೆ.

?ರಾಷ್ಟ್ರೀಯ ಅಪರಾಧ ದಾಖಲಾತಿ ಬ್ಯೂರೋ ಇತ್ತೀಚಿನ ವರದಿಯ ಪ್ರಕಾರ, ಗೃಹ ಸಚಿವರ ತವರು ಜಿಲ್ಲೆ ಕಲಬುರ್ಗಿಯಲ್ಲಿ ಅಪರಾಧ ಚಟುವಟಿಕೆಗಳು ಶೇ.15ಕ್ಕಿಂತಲೂ ಹೆಚ್ಚಾಗಿವೆ. ಸಚಿವರ ಸ್ವಕ್ಷೇತ್ರ ಚಿತ್ತಾಪುರದಲ್ಲೇ 12 ಪಿಎಸ್‌ಐ ಹುದ್ದೆಗಳು ಖಾಲಿ ಇವೆ. ಹಲವು ಪೊಲೀಸ್ ಠಾಣೆಗಳಿಗೆ ಜೀಪ್ ಸೌಲಭ್ಯವೂ ಇಲ್ಲ. ಸ್ವಂತ ಜಿಲ್ಲೆಯ ಸಮಸ್ಯೆಗಳನ್ನೇ ಬಗೆಹರಿಸದ ಸಚಿವರು ಪ್ರತಿದಿನ ಆರ್ ಎಸ್‌ಎಸ್ ವಿಶ್ಲೇಷಣೆ ಮಾಡುತ್ತಾ ಕಾಲ ಕಳೆಯುತ್ತಿದ್ದಾರೆ ಎಂದು ಟೀಕಿಸಿದರು. ತಾಕತ್ತಿದ್ದರೆ ಯುಎಪಿಎ ಅಡಿ ಕೇಸ್ ದಾಖಲಿಸಿ: ಆರ್ ಎಸ್‌ಎಸ್ ಸಂಘಟನೆಯನ್ನು ರಾಷ್ಟ್ರವಿರೋಧಿ ಎಂದು ಬಿಂಬಿಸಲು ಹೊರಟಿರುವ ಗೃಹ ಸಚಿವರಿಗೆ ತಾಕತ್ತಿದ್ದರೆ, ಅದರ ವಿರುದ್ಧ ಯುಎಪಿಎ ಕಾಯ್ದೆಯಡಿ ಪ್ರಕರಣ ದಾಖಲಿಸಿ ಸಾಬೀತುಪಡಿಸಲಿ. ಅದನ್ನು ಬಿಟ್ಟು ಪ್ರತಿದಿನ ಲಘುವಾಗಿ ಮಾತನಾಡುವುದು ಕುರುಡರು ಆನೆಯನ್ನು ವರ್ಣಿಸಿದಂತೆ ಕಾಣುತ್ತದೆ. ಈ ಹಿಂದೆ ಜವಾಹರ ಲಾಲ್ ನೆಹರು, ಇಂದಿರಾ ಗಾಂಧಿ, ಸರ್ದಾರ್ ಪಟೇಲ್ ಅವರಂತಹ ನಾಯ ಕರಿಗೇ ಆರ್ ಎಸ್‌ಎಸ್ ಮುಗಿಸಲು ಸಾಧ್ಯವಾಗಿಲ್ಲ. ನೀವು ಎಷ್ಟು ಕೆಸರೆರಚುತ್ತೀರೋ, ಸಂಘಟನೆ ಕೆಸರಿ ನಲ್ಲಿ ಅರಳುವ ಕಮಲದಂತೆ ಮತ್ತಷ್ಟು ಪ್ರಬಲವಾಗಿ ಹೊರಹೊಮ್ಮುತ್ತದೆ ಎಂದರು.

ಕಳೆದ ಆರು ತಿಂಗಳಲ್ಲಿ ಯಾದಗಿರಿ, ಶಹಾಬಾದ್ ಹಾಗೂ ವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಲ್ಲು ತೂರಾಟದ ಘಟನೆಗಳು ನಡೆದಿದ್ದರೂ ಗೃಹ ಸಚಿವರು ಯಾವುದೇ ಕಠಿಣ ನಿಲುವು ತಳೆದಿಲ್ಲ. ಶಿವಲಿಂಗಕ್ಕೆ ಅವಮಾನ ಮಾಡಿದ, ಪೊಲೀಸರ ಮೇಲೆಯೇ ಹಲ್ಲೆ ನಡೆಸಿದ ಆರೋಪಿಗಳ ಮೇಲಿನ ಪ್ರಕರಣ ಹಿಂಪಡೆಯಲು ಸಹಿ ಮಾಡುವ ಮೂಲಕ ಸಚಿವರು ಒಂದು ವರ್ಗದ ತುಷ್ಟೀಕರಣಕ್ಕೆ ನಿಂತಿದ್ದಾರೆ. ಹಿಂದೂಗಳ ಭಾವನೆಗಳಿಗೆ ಧಕ್ಕೆ ತರುತ್ತಿದ್ದಾರೆ ಎಂದು ದೂರಿದರು. ಸೈದ್ಧಾಂತಿಕ ಭಿನ್ನಾಭಿಪ್ರಾಯಗಳಿದ್ದರೂ ಯಾರ ಮೇಲೂ ದ್ವೇಷ ಸಾಧಿಸದೆ ಎಲ್ಲರನ್ನೂ ಒಳಗೊಳ್ಳುವ ಸಂವಿಧಾನ ನೀಡಿದರು. ಆದರೆ, ಗೃಹ ಸಚಿವರು ಸಂವಿಧಾನ ಮತ್ತು ಮೀಸಲಾತಿಯ ಲಾಭ ಪಡೆದು ಇಂದು ಸಮಾಜದಲ್ಲಿ ದ್ವೇಷ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ವಾಕ್ ಸ್ವಾತಂತ್ರ್ಯದ ಹೆಸರಿನಲ್ಲಿ ಅಧಿಕಾರ ದುರುಪಯೋಗಪಡಿಸಿಕೊಳ್ಳುವುದನ್ನು ನಿಲ್ಲಿಸಿ, ತಕ್ಷಣವೇ ರಾಜ್ಯವನ್ನು ಡ್ರಗ್ ಮುಕ್ತವಾಗಿಸಲು ಹಾಗೂ ಕಾನೂನು ಸುವ್ಯವಸ್ಥೆ ಹತೋಟಿಗೆ ತರಲು ಗಮನಹರಿಸಿ ಎಂದು ಆಗ್ರಹಿಸಿದರು.ಗೋಷ್ಠಿಯಲ್ಲಿ ನಗರ ಮಾಧ್ಯಮ ಸಂಚಾಲಕ ಮಹೇಶ್ ರಾಜೇ ಅರಸ್, ನಗರ ಸಹ ವಕ್ತಾರ ಜಯಶೇಖರ್, ಮಾಧ್ಯಮ ಸಹ ಸಂಚಾಲಕ ಸಂತೋಷ್ ಕುಮಾರ್.ಬಿ.ಎಂ ಇದ್ದರು.

### ವ್ಯಾಪಿಸಿದ ಡ್ರಗ್ಸ್ ಜಾಲ

**ರಾಜ್ಯದಲ್ಲಿ ಮಾದಕ ದ್ರವ್ಯಗಳ ಹಾವಳಿ ಮಿತಿ ಮೀರಿದ್ದು, ಕಾಲೇಜುಗಳು ಡ್ರಗ್ಸ್ ಅಡ್ಡೆಗಳಾಗುತ್ತಿವೆ. ಸೇಡಂನಲ್ಲಿ ಶಾಲಾ ಮಕ್ಕಳೇ ಗಾಂಜಾ ಸಾಗಾಟ ಮಾಡುತ್ತಾ ಸಿಕ್ಕಿಬಿದ್ದಿದ್ದಾರೆ. ಆಡಳಿತ ಪಕ್ಷದ ಪ್ರಮುಖ ಪದಾಧಿಕಾರಿಯೊಬ್ಬರು ಗೋವಾದಿಂದ ಡ್ರಗ್ಸ್ ತಂದು ಸಿಕ್ಕಿಬಿದ್ದಿದ್ದರೂ ಸಚಿವರು ಈ ಬಗ್ಗೆ ಮೌನ ವಹಿಸಿದ್ದಾರೆ. ರಾಜ್ಯದಲ್ಲಿ ಸದ್ಯ ದಾಖಲಾಗುತ್ತಿರುವ ಪ್ರಕರಣಗಳಲ್ಲಿ ಕೇವಲ ಶೇ.31 ರಷ್ಟು ಮಾತ್ರ ಶಿಕ್ಷೆಯಾಗುತ್ತಿದ್ದು, ಶಿಕ್ಷೆಯ ಪ್ರಮಾಣ ಹೆಚ್ಚಿಸುವಲ್ಲಿ ಗೃಹ ಇಲಾಖೆ ಸಂಪೂರ್ಣ ವಿಫಲವಾಗಿದೆ ಎಂದರು.**

> **ಬೆಂಗಳೂರಿನ ಕಸ ವಿಲೇವಾರಿ ಟೆಂಡರ್ ನಲ್ಲಿ ಭಾರೀ ಗೋಲ್ ಮಾಲ್ ನಡೆದಿದ್ದು ಅಂದಾಜು 36 ಸಾವಿರ ಕೋಟಿ ಹಗರಣ ನಡೆದಿದೆ. ಬೆಂಗಳೂರು ಉಸ್ತುವಾರಿ ಹೊತ್ತಿದ್ದ ಸಿಎಂ. ಡಿ.ಕೆ.ಶಿವಕುಮಾರ್ ಅವರೇ ಇದಕ್ಕೆ ಸಹಿ ಹಾಕಿ ಅನುಮೋದನೆ ನೀಡಿದ್ದಾರೆ. ಈ ಹಗರಣದಲ್ಲಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಶಿವಕುಮಾರ್ ಭಾಗಿಯಾಗಿದ್ದಾರೆ.**
>
> ▸▸ **-ಎಂ.ಜಿಮಹೇಶ್** ರಾಜ್ಯ ಬಿಜೆಪಿ ವಕ್ತಾರ

## ಭೋವಿಗೂ ಸಚಿವ ಸ್ಥಾನ ಕೊಡಿ



ಮೈಸೂರು: ಕಾಂಗ್ರೆಸ್ ಪಕ್ಷವು ನೂತನ ರಾಜ್ಯ ಸರ್ಕಾರದಲ್ಲಿ ಭೋವಿ ಸಮುದಾಯಕ್ಕೆ ಸಚಿವ ಸ್ಥಾನ ನೀಡಬೇಕು ಎಂದು ಶಿವಯೋಗಿ ಸಿದ್ಧರಾಮೇಶ್ವರ ಭೋವಿ ಹಿತರಕ್ಷಣಾ ಸಮಿತಿ ಗೌರವಾಧ್ಯಕ್ಷ ಜಿ.ವಿ.ಸೀತಾರಾಮು ಒತ್ತಾಯಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಭೋವಿ ಸಮುದಾಯವು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕವಾಗಿ ಹಿಂದುಳಿದಿದ್ದು, ಸರ್ಕಾರದಲ್ಲಿ ಸೂಕ್ತ ಪ್ರಾತಿನಿಧ್ಯ ದೊರೆತರೆ ಮಾತ್ರ ಅಭಿವೃದ್ಧಿ ಸಾಧ್ಯ. ಅನುಭವಿ ರಾಜಕಾರಣಿ ಶಿವರಾಜ ತಂಗಡಗಿ, ಶಾಸಕರಾದ ಎ.ಸಿ.ಶ್ರೀನಿವಾಸ್, ವೆಂಕಟೇಶ್ ಅವರಲ್ಲಿ ಯಾರಿಗಾದರೂ ಸಚಿವ ಸ್ಥಾನ ನೀಡಬೇಕು. ಹಾಗೆಯೇ ವಿಧಾನ ಪರಿಷತ್ ಮತ್ತು ನಿಗಮ ಮಂಡಳಿಯಲ್ಲೂ ಅವಕಾಶ ಒದಗಿಸಬೇಕು ಎಂದು ಆಗ್ರಹಿಸಿದರು. ಅಧ್ಯಕ್ಷ ಎಸ್.ವಿಜಯಕುಮಾರ್, ಸಹ ಕಾರ್ಯದರ್ಶಿ ಎಸ್.ಪರಮೇಶ್, ಖಜಾಂಚಿ ಪಿ.ಬಸವರಾಜು, ಸಂಘಟನಾ ಕಾರ್ಯದರ್ಶಿ ಸಿ.ರಾಮಸ್ವಾಮಿ ಇದ್ದರು.

## ನಾಳೆ ಚಲಚಿತ್ರಗೀತೆಗಳ ಗಾಯನ



ಮೈಸೂರು: ನಗರದ ವಿನಾಯಕನಗರದ ಶಿವು ಮ್ಯೂಸಿಕಲ್ ವೈಬ್ಸ್ ನಿಂದ ನಾದಬ್ರಹ್ಮ ಸಂಗೀತ ಸಭಾಂಗಣದಲ್ಲಿ ಜೂನ್ 12 ರಂದು ಸಂಜೆ 4ಕ್ಕೆ ಕನ್ನಡ ಚಲನಚಿತ್ರ ಗೀತೆಗಳ ಕರೋಕೆ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಂಡದ ಸ್ಥಾಪಕ, ವಕೀಲ ಎಂ.ಶಿವಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಾರ್ಯಕ್ರಮದಲ್ಲಿ 10 ಮಂದಿ ಹವ್ಯಾಸಿ ಗಾಯಕ, ಗಾಯಕಿಯರು ಸುಮಾರು 45 ಹಾಡುಗಳನ್ನು ಪ್ರಸ್ತುತಪಡಿಸುವರು. ಅವರಲ್ಲಿ ನಾಲ್ವರು ವಕೀಲರು ಸೇರಿದ್ದಾರೆ. ಸಾರ್ವಜನಿಕರಿಗೆ ಉಚಿತ ಪ್ರವೇಶವಿದೆ ಎಂದರು. ನಿರೂಪಕಿ ಮೇಘಶ್ರೀ ಸುರೇಶ್, ವಕೀಲರಾದ ಜೆ. ಎನ್.ಪರಶಿವಮೂರ್ತಿ, ಮುತ್ತುರಾಜು ಇದ್ದರು.

## ಘಾಟಿ ನಾಟಕ ಪ್ರದರ್ಶನ

ಮೈಸೂರು: ನಾಟ್ಯಾಲೇಖ ರಂಗಸಮೂಹ ಮೈಸೂರು ವತಿಯಿಂದ "ಘಾಟಿ" ನಾಟಕ ಪ್ರದರ್ಶನವನ್ನು ಆಯೋಜನೆ ಮಾಡಲಾಗಿದೆ ಎಂದು ನಾಟ್ಯಾಲೇಖ ರಂಗಸಮೂಹದ ಖಜಾಂಚಿ ಮಹೇಶ್ ಕಲ್ಲಂಗಡಿ ಹೇಳಿದರು

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಜೂನ್ 11 ಮತ್ತು 12 ರಂದು ಸಂಜೆ 6.30 ಕ್ಕೆ ಸುಮಧುರ ರಾವ್ ರಚಿಸಿರುವ ಅಮಿತ್ ಜೆ ರೆಡ್ಡಿ ನಿರ್ದೇಶನದ ಘಾಟಿ ನಾಟಕ ಪ್ರದರ್ಶನಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಚಾಲನೆ ನೀಡುವರು. ಜಿಲ್ಲಾ ಹವ್ಯಾಸಿ ರಂಗಕರ್ಮಿ ವೇದಿಕೆ ಅಧ್ಯಕ್ಷ ರಾಜೇಶ್ ತಲಕಾಡು ಉಪಸ್ಥಿತರಿರುವರು. ನಾಟಕ ಪ್ರದರ್ಶನಕ್ಕೆ 100 ರೂ ನಿಗದಿ ಮಾಡಲಾಗಿದ್ದು ಮುಂಗಡ ಟಿಕೇಟ್ ಮಾರಾಟ ವ್ಯವಸ್ಥೆ ಮಾಡಲಾಗಿದ್ದು ಟಿಕೇಟ್ ಗಾಗಿ 6361848788,9482203369 ಸಂಪರ್ಕಿಸಬಹುದು ಎಂದು ತಿಳಿಸಿದರು ಮಧುಸೂದನ್, ಧನುಷ್, ಪ್ರಶಾಂತ್, ನಯನಾ ಇದ್ದರು.



# 12 ವರ್ಷದಲ್ಲಿ ಮೋದಿಯದು ಐತಿಹಾಸಿಕ ಸಾಧನೆ: ಯದುವೀರ್



ಮೈಸೂರು: ಚುನಾಯಿತ ಪ್ರಧಾನಿಯಾಗಿ ಸತತ 12 ವರ್ಷಗಳಿಂದ ನರೇಂದ್ರ ಮೋದಿ ದೇಶದ ಸರ್ವತೋಮುಖ ಅಭಿವೃದ್ಧಿ, ಸುರಕ್ಷತೆ, ಜಾಗತಿಕ ಮನ್ನಣೆಗಾಗಿ ಅನೇಕ ಐತಿಹಾಸಿಕ ನಿಲುವುಗಳನ್ನು ಕೈಗೊಂಡು ದೇಶಕ್ಕಾಗಿ ಶ್ರಮಿಸುತ್ತಿದ್ದಾರೆ ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ಬುಧವಾರ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 2014ರಲ್ಲಿ ಪ್ರಧಾನಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ದಿನದಿಂದ ಇಂದಿನವರೆಗೆ ಭಾರತವನ್ನು ಅತ್ಯಂತ ಸುಭದ್ರ, ಶ್ರೇಷ್ಠ ಹಾಗೂ ವಿಕಸಿತ ರಾಷ್ಟ್ರವನ್ನಾಗಿ ಪರಿವರ್ತಿಸಲು ಹಲವು ಯೋಜನೆ ಜಾರಿಗೆ ತಂದಿದ್ದಾರೆ. 2014ಕ್ಕಿಂತ ಮುಂಚೆ ಜಾಗತಿಕ ಮಟ್ಟದಲ್ಲಿ ಅಸ್ಥಿರ ಆರ್ಥಿಕತೆಯ ಪಟ್ಟಿಯಲ್ಲಿದ್ದ ಭಾರತ, ಇಂದು ವಿಶ್ವದ ಅತ್ಯಂತ ಬಲಿಷ್ಠ ಆರ್ಥಿಕ ರಾಷ್ಟ್ರವಾಗಿ ಹೊರಹೊಮ್ಮಿದೆ. ಹಿಂದೆ ಭಾರತವನ್ನು ಕೇವಲ ಕಡಿಮೆ ವೆಚ್ಚದ ಶ್ರಮಿಕ ವಲಯ ಎಂದು ನೋಡುತ್ತಿದ್ದ ಅಂತರರಾಷ್ಟ್ರೀಯ ಸಂಸ್ಥೆಗಳು, ಇಂದು ಇಲ್ಲಿನ ಯುವ ಪ್ರತಿಭೆ ಮತ್ತು ತಂತ್ರಜ್ಞಾನವನ್ನು ನಂಬಿ ದೇಶದಾದ್ಯಂತ ನೂರಾರು ಜಿಸಿಸಿಗಳನ್ನು ಸ್ಥಾಪಿಸುತ್ತಿವೆ ಎಂದು ತಿಳಿಸಿದರು.

ನೀತಿ ಆಯೋಗ ಹಾಗೂ ಅಂತರಾಷ್ಟ್ರೀಯ ವರದಿಗಳ ಪ್ರಕಾರ ಕೇಂದ್ರ ಸರ್ಕಾರದ ಜನಪರ ನೀತಿಗಳಿಂದಾಗಿ ದೇಶದ ಸುಮಾರು 25 ಕೋಟಿ ಜನರು ಬಹು ಆಯಾಮದ ಬಡತನದಿಂದ ಮುಕ್ತರಾಗಿದ್ದಾರೆ. ಇದರೊಂದಿಗೆ ದೇಶದಲ್ಲಿದ್ದ ಬಡತನದ ಪ್ರಮಾಣ ಶೇ. 29 ರಿಂದ ಶೇ.11ಕ್ಕೆ ಕುಸಿದಿದೆ. ಅಲ್ಲದೆ, ಪ್ರಧಾನಿ ಮೋದಿಯವರ ಮಹತ್ವಾಕಾಂಕ್ಷೆಯ ಸ್ವಚ್ಛ ಭಾರತ ಅಭಿಯಾನದ ಫಲವಾಗಿ ದೇಶದಲ್ಲಿ ಹಿಂದೆ ಶೇ.10-12ರಷ್ಟಿದ್ದ ಶಿಶು ಮರಣ ಪ್ರಮಾಣ ಇಂದು ಶೇ.2-3ಕ್ಕೆ ಇಳಿಕೆಯಾಗಿದೆ ಎಂದು ಮಾಹಿತಿ ನೀಡಿದರು.

ದೇಶದ ಇತಿಹಾಸದಲ್ಲೇ ಮೊದಲ ಬಾರಿಗೆ ರೈತರ ಖಾತೆಗಳಿಗೆ ನೇರವಾಗಿ ವಾರ್ಷಿಕ 6 ಸಾವಿರ ರೂ. ಜಮೆ ಮಾಡುವ ಯೋಜನೆಯಡಿ ಇದುವರೆಗೆ 4.5 ಲಕ್ಷ ಕೋಟಿ ರೂ ನೇರ ನಗದು ವರ್ಗಾವಣೆ ಮಾಡಲಾಗಿದೆ. ಯೂರಿಯಾ ಗೊಬ್ಬರದ ಮೇಲೆ ಶೇ.90ರಷ್ಟು ಸಬ್ಸಿಡಿ ನೀಡಲಾಗುತ್ತಿದ್ದು, ಆಹಾರ ಧಾನ್ಯ ಉತ್ಪಾದನೆಯಲ್ಲಿ ಶೇ.71ರಷ್ಟು ಪ್ರಗತಿಯಾಗಿದೆ. ಜನ್‌ಧನ್ ಯೋಜನೆಯಡಿ ಮಹಿಳೆಯರಿಗಾಗಿಯೇ 32 ಕೋಟಿ ಬ್ಯಾಂಕ್ ಖಾತೆಗಳನ್ನು ತೆರೆಯಲಾಗಿದೆ. ಲಖ್ಪತಿ ದೀದಿ ಯೋಜನೆಯ ಮೂಲಕ 3 ಕೋಟಿ ಮಹಿಳೆಯರು ಆರ್ಥಿಕ ಸ್ವಾವಲಂಬನೆ ಸಾಧಿಸಿದ್ದು, 91 ಲಕ್ಷಕ್ಕೂ ಹೆಚ್ಚು ಸ್ವಸಹಾಯ ಗುಂಪುಗಳು ದೇಶದ ನಾರಿಶಕ್ತಿಯ ಬದುಕಿಗೆ ಆಸರೆಯಾಗಿವೆ. ದೇಶದಲ್ಲಿ ತಂತ್ರಜ್ಞಾನ ಆಧಾರಿತ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು.

ಭಾರತೀಯ ಪರಂಪರೆಗೆ ಜಾಗತಿಕ ಮನ್ನಣೆ ದೊರೆತಿದ್ದು, ದೇಶದಲ್ಲಿ ಪ್ರಸ್ತುತ 44 ಯುನೆಸ್ಕೋ ವಿಶ್ವ ಪಾರಂಪರಿಕ ತಾಣಗಳಿವೆ. ವಿದೇಶಗಳಲ್ಲಿದ್ದ 668ಕ್ಕೂ ಹೆಚ್ಚು ಪುರಾತನ ಕಲಾಕೃತಿಗಳನ್ನು ಭಾರತಕ್ಕೆ ಮರಳಿ ತರಲಾಗಿದೆ. 500 ವರ್ಷಗಳ ಸುದೀರ್ಘ ಹೋರಾಟಕ್ಕೆ ಕಾನೂನುಬದ್ಧ ಪರಿಹಾರ ಕಂಡುಕೊಂಡು ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರ ನಿರ್ಮಿಸಲಾಗಿದೆ. ಕಾಶಿ ವಿಶ್ವನಾಥ, ಮಹಾಕಾಳ್ ಮತ್ತು ಕೇದಾರನಾಥ ಧಾಮಗಳನ್ನು ಜೀರ್ಣೋದ್ಧಾರ ಮಾಡಲಾಗಿದೆ. ವಿಶ್ವಸಂಸ್ಥೆಯಲ್ಲಿ ಯೋಗಕ್ಕೆ ಅಂತರರಾಷ್ಟ್ರೀಯ ಮಾನ್ಯತೆ ದೊರಕಿಸಿಕೊಡುವ ಮೂಲಕ ಭಾರತದ ಸಾಫ್ಟ್ ಪವರ್ ಅನ್ನು ಜಗತ್ತಿಗೆ ಸಾರಲಾಗಿದೆ ಎಂದರು. ದೇಶದ ಸುರಕ್ಷತೆಗೆ ಮೊದಲ ಆದ್ಯತೆ ನೀಡಿರುವ ಕೇಂದ್ರ ಸರ್ಕಾರ, ಜಮ್ಮು-ಕಾಶ್ಮೀರದ ಆರ್ಟಿಕಲ್ 370 ರದ್ದುಗೊಳಿಸುವ ಮೂಲಕ ಅಲ್ಲಿನ ಪ್ರತ್ಯೇಕತಾವಾದಕ್ಕೆ ಶಾಶ್ವತ ತೆರೆ ಎಳೆದಿದೆ. ದೇಶದಲ್ಲಿದ್ದ ನಕ್ಸಲಿಸಂ ಅನ್ನು ಬೇರುಸಹಿತ ಕಿತ್ತೊಗೆಯಲಾಗಿದೆ. ಸಂವಿಧಾನದ ಆಶಯದಂತೆ ಪ್ರತಿ 10 ವರ್ಷಕ್ಕೊಮ್ಮೆ ನಡೆಯಬೇಕಾದ ಜನಗಣತಿ ಹಾಗೂ ಜಾತಿವಾರು ಮಾಹಿತಿಗಳ ಕ್ರೋಢೀಕರಣದ ಪ್ರಕ್ರಿಯೆಗೆ ಕೋವಿಡ್ ವಿಳಂಬದ ನಂತರ ಈಗ ಅಧಿಕೃತವಾಗಿ ಚಾಲನೆ ನೀಡಲಾಗಿದ್ದು, ಮನೆಗಳ ಸಮೀಕ್ಷೆ ಪ್ರಗತಿಯಲ್ಲಿದೆ ಎಂದರು. ಗೋಷ್ಠಿಯಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕ ಹರ್ಷವರ್ಧನ್, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ, ಮಾಜಿ ಮೇಯರ್ ಶಿವಕುಮಾರ್, ಮುಖಂಡರಾದ ವಸಂತಕುಮಾರ್, ಮಹೇಶ್ ರಾಜೇ ಅರಸ್ ಸೇರಿ ಹಲವರು ಇದ್ದರು.

> **ಬೆಂಗಳೂರಿನ ಸಿ-ಡಾಕ್‌ನಲ್ಲಿ ಡೇಟಾ ಸೆಂಟರ್ ಹಾಗೂ ಕ್ವಾಂಟಮ್ ಕಂಪ್ಯೂಟಿಂಗ್‌ಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಮೈಸೂರಿನಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ಸಿಸ್ಟಮ್ ಬರಲಿದೆ. ಇದಕ್ಕೆ ಕರ್ನಾಟಕ ಸರ್ಕಾರ ಭೂಮಿ ಮಂಜೂರಾತಿ ಸೇರಿದಂತೆ ಅಗತ್ಯ ಸಹಕಾರ ನೀಡಿದರೆ ರಾಜ್ಯಕ್ಕೆ ದೊಡ್ಡ ಆಸ್ತಿಯಾಗಲಿದೆ.**
>
> ▸▸ **-ಯದುವೀರ್ ಒಡೆಯರ್** ಸಂಸದ

### ಕೇಂದ್ರದೊಂದಿಗೆ ಉತ್ತಮ ಸಂಬಂಧವಿಲ್ಲ

**ರಾಜ್ಯ ಸರ್ಕಾರ ಕೇಂದ್ರದೊಂದಿಗೆ ಉತ್ತಮ ಸಂಪರ್ಕ ಹಾಗೂ ಸಂಬಂಧ ಹೊಂದಿಲ್ಲ. ಜಿಎಸ್ಟಿ ಪಾಲು, ಸೂಕ್ತ ಅನುದಾನ ಬರುತ್ತಿಲ್ಲ ಎಂದು ಹಿಂದಿನ ಸಿಎಂ ಸಿದ್ದರಾಮಯ್ಯ ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದರು. ಆದರೆ, ಕೇಂದ್ರ ಸರ್ಕಾರ ಯಾವುದೇ ತಾರತಮ್ಯ ಮಾಡಿಲ್ಲ. ಬೇರೆ ರಾಜ್ಯಗಳು ರಾಜಕೀಯ ಬದಿಗೊತ್ತಿ ಕೇಂದ್ರದೊಂದಿಗೆ ಉತ್ತಮ ಸಂಬಂಧ ಹೊಂದಿವೆ. ರಾಜ್ಯ ಸರ್ಕಾರ ಕೇವಲ ರಾಜಕೀಯ ಮಾಡುತ್ತಿದೆ. ಅವರಿಗೆ ರಾಜ್ಯದ ಹಿತರಕ್ಷಣೆ ಬೇಕಿಲ್ಲ. ತಮಿಳುನಾಡಿನ ಸಿಎಂ ವಿಜಯ್ ಮೇಕೆದಾಟಿಗೆ ಅನುಮತಿ ನೀಡದಂತೆ ಕೇಂದ್ರಕ್ಕೆ ಪತ್ರ ಬರೆದಿದ್ದಾರೆ. ಇದಕ್ಕೆ ರಾಜ್ಯದಿಂದ ಯಾವುದೇ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ. ಹೊಸ ಸಿಎಂ ಬಂದಿದ್ದು ಇನ್ನಾದರೂ ಉತ್ತಮ ಸಂಪರ್ಕ ಸಾಧಿಸಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಾರೆ ಎಂಬ ನಿರೀಕ್ಷೆ ಇದೆ ಎಂದು ಯದುವೀರ್ ತಿಳಿಸಿದರು**

# ದೇವನೂರು ಅಪರೂಪದ ಸಾಹಿತಿ

## ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ, ಸಂಸ್ಕೃತಿ ಚಿಂತಕ ಸುರೇಶ್ ಎನ್.ಋಗ್ವೇದಿ ಬಣ್ಣನೆ

ಚಾಮರಾಜನಗರ: "ದೇವನೂರು ಮಹಾದೇವ ರವರು ಕನ್ನಡ ಸಾಹಿತ್ಯ ಲೋಕದ ಅಪರೂಪದ ಹಾಗೂ ಅತ್ಯಂತ ಸರಳ ವ್ಯಕ್ತಿತ್ವದ ಶ್ರೇಷ್ಠ ಸಾಹಿತಿ ಯಾಗಿದ್ದಾರೆ," ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರು ಹಾಗೂ ಸಂಸ್ಕೃತಿ ಚಿಂತಕರಾದ ಸುರೇಶ್ ಎನ್. ಋಗ್ವೇದಿ ಅವರು ಬಣ್ಣಿಸಿದರು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 'ದೇವನೂರು ಮಹಾದೇವ ಅವರ ಸಾಹಿತ್ಯ ಕೊಡುಗೆಗಳು ಮತ್ತು ಚಿಂತನೆ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಾಥಮಿಕ ಶಿಕ್ಷಣವನ್ನು ಕಡ್ಡಾಯವಾಗಿ ಮಾತೃಭಾಷೆಯಲ್ಲೇ ನೀಡಬೇಕು ಎಂದು ಪ್ರಬಲವಾಗಿ ಒತ್ತಾಯಿಸಿ, ತಮ್ಮದೇ ಆದ ಗಟ್ಟಿಯಾದ ಸಾಂವಿಧಾನಿಕ ನಿಲುವು ದಾಖಲಿಸಿರುವ ದೇವನೂರು ಮಹಾದೇವ ಅವರು ಪ್ರತಿಯೊಬ್ಬರಿಗೂ ಮಾದರಿ ಸಾಹಿತಿಯಾಗಿದ್ದಾರೆ. ತಮಗೆ ಬಂದ ಪ್ರಶಸ್ತಿ ಮತ್ತು ಸ್ಥಾನಮಾನಗಳನ್ನು ಅತ್ಯಂತ ನಯ ಹಾಗೂ ಗೌರವದಿಂದಲೇ ಸ್ವೀಕರಿಸಲು ನಿರಾಕರಿಸಿದ ಅಪೂರ್ವ ವ್ಯಕ್ತಿತ್ವ ಅವರದ್ದಾಗಿದೆ ಎಂದು ಶ್ಲಾಘಿಸಿದರು.

### ಸಾಹಿತ್ಯ ಲೋಕದಲ್ಲಿ ಹೊಸ ಹೊಸ ಅನುಭವ ನೀಡಿದ ಕೃತಿಗಳು

ದೇವನೂರು ಮಹಾದೇವ ಅವರ ಸೃಜನಶೀಲ ಸಾಹಿತ್ಯದ ಅತ್ಯುತ್ತಮ ಕೊಡುಗೆಯಾದ 'ಒಡಲಾಳ' ಕೃತಿಯು ಈ ದೇಶದಲ್ಲೇ ವಿಶೇಷ ಸ್ಥಾನ ಪಡೆದಿದೆ. ಭಾರತೀಯ ಪರಿಷತ್ 1984ರಲ್ಲೇ ಒಡಲಾಳ ಕೃತಿಗೆ ಸೃಜನಶೀಲ ಸಾಹಿತ್ಯ ಕ್ಷೇತ್ರದ ಗೌರವವನ್ನು ನೀಡಿದೆ ಎಂದು ಸುರೇಶ್ ಋಗ್ವೇದಿ ಸ್ಮರಿಸಿದರು. ಇನ್ನು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ 'ಕುಸುಮಬಾಲೆ' ಕೃತಿಯು ಸಾಹಿತ್ಯ ಕ್ಷೇತ್ರದಲ್ಲಿ ಹೊಸದೊಂದು ಅನುಭವವನ್ನು ನೀಡಿದ್ದಲ್ಲದೆ, ಅಪಾರ ಸಂಖ್ಯೆಯ ಓದುಗರನ್ನು ಸೃಷ್ಟಿಸಿದೆ. ಸಂಪೂರ್ಣ ಗ್ರಾಮೀಣ ಭಾಗದ ಹಳ್ಳಿ ನುಡಿಗಟ್ಟುಗಳ ಸೊಗಡಿನಲ್ಲಿ ಮೂಡಿಬಂದಿರುವ, ಪದ್ಯ ಹಾಗೂ ಗದ್ಯ ಎರಡರ ಶೈಲಿಯನ್ನೂ ಒಳಗೊಂಡಿರುವ ಕುಸುಮಬಾಲೆ ಕೃತಿಯು ಗ್ರಾಮೀಣ ಜನತೆಯ ನೈಜ ಬದುಕನ್ನು ಜಗತ್ತಿಗೆ ಪರಿಚಯಿಸಿದೆ ಎಂದರು.

### ಗಾಯನ ಹಾಗೂ ಗಣ್ಯರ ಉಪಸ್ಥಿತಿ

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕರೂ ಆದ ಗಾಯಕ ಎಲ್. ಶಿವಲಿಂಗ 'ಮೂರ್ತಿ ಅವರು ದೇವನೂರು ಮಹಾದೇವ ಅವರ ಕೃತಿಗಳ ಪ್ರಮುಖ ಸಾಲುಗಳನ್ನು ಗಾಯನದ ಮೂಲಕ ಪ್ರಸ್ತುತಪಡಿಸಿ ಸಭಿಕರ ಗಮನ ಸೆಳೆದರು. ಈ ಸಾಹಿತ್ಯಿಕ ಸಂಭ್ರಮದಲ್ಲಿ ಕಸಪ ಪ್ರಮುಖರಾದ ಬಿ.ಕೆ. ಆರಾಧ್ಯ, ಸರಸ್ವತಿ ಪದ್ಮಾಪುರುಷೋತ್ತಮ್, ಮಹಮ್ಮದ್, ಡಾ. ಪದ್ಮಾ ಹಾಗೂ ಯಡಿಯೂರು ನಾಗರಾಜು ಸೇರಿದಂತೆ ಸಾಹಿತ್ಯಾಸಕ್ತರು ಭಾಗವಹಿಸಿದ್ದರು.



### ಜನ್ಮದಿನದ ಸವಿನೆನಪಿನಲ್ಲಿ ಸಾಹಿತ್ಯಿಕ ಚಿಂತನೆ

ಜನಪದ ಕಲಾವಿದ ಹಾಗೂ ಮುಖಂಡ ರವಿಚಂದ್ರ ಪ್ರಸಾದ್ ಕಹಳೆ ಮಾತನಾಡಿ, ಬಂಡಾಯ ಸಾಹಿತಿ, ಭ್ರಷ್ಟತೆಯ ವಿರುದ್ಧದ ಧ್ವನಿ ಹಾಗೂ ದಲಿತ ಸಂಘರ್ಷ ಸಮಿತಿಯ ಮಹಾನ್ ಹೋರಾಟಗಾರರಾದ ದೇವನೂರು ಮಹಾದೇವ ಅವರ ಜನ್ಮದಿನವಾದ ಜೂನ್ 10 ರಂದೇ ಈ ಚಿಂತನೆ ಕಾರ್ಯಕ್ರಮ ರೂಪಿಸಿರುವುದು ವಿಶೇಷವಾಗಿದೆ. ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ 'ದೇವನೂರು' ಗ್ರಾಮದ ನಂಜಯ್ಯ ಮತ್ತು ನಂಜಮ್ಮ ದಂಪತಿಯ ಪುತ್ರರಾದ ಇವರು, ಸಾಮಾಜಿಕ ಸಮಾನತೆ ಮತ್ತು ಏಕತೆಯನ್ನು ತಮ್ಮ ಬದುಕಿನುದ್ದಕ್ಕೂ ಅಳವಡಿಸಿಕೊಂಡಿದ್ದಾರೆ. ಯಾವುದೇ ಅಪೇಕ್ಷೆ ಇಲ್ಲದೆ ಬದುಕುತ್ತಿರುವ ಅವರ ಬದುಕು ಎಲ್ಲರಿಗೂ ಮಾದರಿ ಎಂದರು. ಅಖಿಲ ಕರ್ನಾಟಕ ಕನ್ನಡ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಶ್ರೀನಿವಾಸಗೌಡ ಮಾತನಾಡಿ, ದೇವನೂರು ಅವರು ಕನ್ನಡದ ಸಾಕ್ಷಿಪ್ರಜ್ಞೆಯಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

### ಜನಸಾಮಾನ್ಯರ ಬವಣೆಗೆ ಧ್ವನಿಯಾದ ಸಾಕ್ಷಿಪ್ರಜ್ಞೆ

'ದ್ಯಾವನೂರು', 'ಎದೆಗೆ ಬಿದ್ದ ಅಕ್ಷರ', 'ನೋಡು ಮತ್ತು ಕೂಡು' ನಂತಹ ಕೃತಿಗಳ ಜೊತೆಗೆ ವೈಚಾರಿಕ ಬರಹಗಳಾದ 'ಗಾಂಧಿ ಮತ್ತು ಮಾವೋ' ಅನುವಾದ ಗ್ರಂಥಗಳನ್ನು ರಚಿಸಿರುವ ದೇವನೂರು ಅವರು ಶ್ರೇಷ್ಠ ಲೇಖಕರು ಮಾತ್ರವಲ್ಲದೆ ಸಮಾಜವಾದಿ ಚಿಂತಕರೂ ಆಗಿದ್ದಾರೆ. ರೈತ ಚಳವಳಿ ಹಾಗೂ ದಲಿತ ಸಂಘರ್ಷ ಸಮಿತಿಯ ಹೋರಾಟಗಳ ಮೂಲಕ ಜನಸಾಮಾನ್ಯರ ಬದುಕಿನ ಬವಣೆಗಳನ್ನು ಸಾಹಿತ್ಯದ ಮೂಲಕ ಜಗತ್ತಿಗೆ ಸಾರಿದ ಇವರು ನಮ್ಮ ಮೈಸೂರು ಭಾಗದವರು ಎಂಬುದು ನಮಗೆ ಹೆಮ್ಮೆಯ ವಿಚಾರ ಎಂದು ಸುರೇಶ್ ಋಗ್ವೇದಿ ಹೇಳಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಕಸಪ ಸದಸ್ಯ ಹಾಗೂ ಪ್ರಾಚಾರ್ಯ ರಂಗಸ್ವಾಮಿ ಅವರು, ದೇವನೂರು ಅವರ ಕೃತಿಗಳ ಕುರಿತು ಇಂತಹ ಅರ್ಥಪೂರ್ಣ ಚಿಂತನಾ ಸಭೆ ನಡೆಸಿರುವುದು ಶ್ಲಾಘನೀಯ ಎಂದರು.

---

# ಫುಡ್ ಫ್ಯಾಕ್ಟರಿ ವಿರುದ್ಧ ಗ್ರಾಮಸ್ಥರ ಪ್ರತಿಭಟನೆ

**ಶಾಸಕ ಹೆಚ್.ಟಿ. ಮಂಜು ಮಧ್ಯಸ್ಥಿಕೆಯಿಂದ ರಸ್ತೆ ವಿವಾದ ಸುಖಾಂತ್ಯ**



ಕೆ.ಆರ್.ಪೇಟೆ: ತಾಲೂಕಿನ ಬೂಕನಕೆರೆ ಹೋಬಳಿಯ ಬಣ್ಣೇನಹಳ್ಳಿ ಗ್ರಾಮದಲ್ಲಿ ಫುಡ್ ಫ್ಯಾಕ್ಟರಿ ಆಡಳಿತ ಮಂಡಳಿಯ ವಿರುದ್ಧ ಗ್ರಾಮಸ್ಥರು ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಕ್ಷೇತ್ರದ ಶಾಸಕ ಹೆಚ್.ಟಿ. ಮಂಜು ಅವರು ಭೇಟಿ ನೀಡಿ ಸೌಹಾರ್ದಯುತವಾಗಿ ಸಮಸ್ಯೆ ಬಗೆಹರಿಸಿದ್ದಾರೆ. ಫ್ಯಾಕ್ಟರಿಯವರು ಕಾಂಪೌಂಡ್ ತಡೆಗೋಡೆ ನಿರ್ಮಿಸಿ ರಸ್ತೆ ಬಂದ್ ಮಾಡುತ್ತಿರುವುದನ್ನು ವಿರೋಧಿಸಿ ಗ್ರಾಮಸ್ಥರು ಹಮ್ಮಿಕೊಂಡಿದ್ದ ಹೋರಾಟವು ಶಾಸಕರ ಯಶಸ್ವಿ ಮಾತುಕತೆಯಿಂದಾಗಿ ಸುಖಾಂತ್ಯ ಕಂಡಿದೆ.

### ತಡೆಗೋಡೆ ನಿರ್ಮಾಣಕ್ಕೆ ಗ್ರಾಮಸ್ಥರ ತೀವ್ರ ಆಕ್ರೋಶ

ಬಣ್ಣೇನಹಳ್ಳಿ ಗ್ರಾಮದಿಂದ ಅಶೋಕನಗರ ಮುಖ್ಯ ರಸ್ತೆಗೆ ಹಾದುಹೋಗುವ ಕೆಐಎಡಿಬಿ ಚತುಷ್ಪಥ ರಸ್ತೆ ಹಾಗೂ ಪಾದಚಾರಿ (ಸರ್ವೀಸ್) ರಸ್ತೆಗೆ ಅಡ್ಡಲಾಗಿ ಫುಡ್ ಫ್ಯಾಕ್ಟರಿ ಆಡಳಿತ ಮಂಡಳಿಯವರು ಕಾಂಪೌಂಡ್ ತಡೆಗೋಡೆ ನಿರ್ಮಿಸಲು ಮುಂದಾಗಿದ್ದರು. ಈ ಜಾಗದ ವಿಚಾರವಾಗಿ ಫ್ಯಾಕ್ಟರಿಯವರು ತಕರಾರು ತೆಗೆದಿದ್ದರಿಂದ ಆಕ್ರೋಶ ಗೊಂಡ ಗ್ರಾಮಸ್ಥರು, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಬಣ್ಣೇನಹಳ್ಳಿ ಧನಂಜಯ ಅವರ ನೇತೃತ್ವದಲ್ಲಿ ರಸ್ತೆಗಿಳಿದು ಬೃಹತ್ ಹೋರಾಟ ಮಾಡಲು ಸಜ್ಜಾಗಿದ್ದರು. ರೈತರ ಹಾಗೂ ಫುಡ್ ಫ್ಯಾಕ್ಟರಿ ನಡುವಿನ ಈ ರಸ್ತೆ ವಿವಾದದ ಮಾಹಿತಿ ತಿಳಿಯುತ್ತಿದ್ದಂತೆಯೇ ಶಾಸಕ ಹೆಚ್.ಟಿ. ಮಂಜು ಅವರು ಅಧಿಕಾರಿಗಳೊಂದಿಗೆ ತಕ್ಷಣವೇ ಸ್ಥಳಕ್ಕೆ ಧಾವಿಸಿದರು.

### ರೈತರ ಪರ ನಿಂತು ಶಾಸಕರಿಂದ ಖಡಕ್ ಎಚ್ಚರಿಕೆ

ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಹೆಚ್.ಟಿ. ಮಂಜು ಅವರು ತಾಲೂಕು ದಂಡಾಧಿಕಾರಿ ಅಶೋಕ್ ಮತ್ತು ರಾಜಸ್ವ ನಿರೀಕ್ಷಕಿ ಚಂದ್ರಕಲಾ ಸಮ್ಮುಖದಲ್ಲೇ ಫುಡ್ ಫ್ಯಾಕ್ಟರಿ ಆಡಳಿತ ಮಂಡಳಿಯ ಪ್ರಮುಖರಾದ ವಿಶಾಲ್ ಅವರೊಂದಿಗೆ ದೂರವಾಣಿ ಮೂಲಕ ನೇರ ಮಾತುಕತೆ ನಡೆಸಿದರು. ಯಾವುದೇ ಕಾರಣಕ್ಕೂ ರಸ್ತೆಯ ವಿಚಾರದಲ್ಲಿ ಬಡ ರೈತರಿಗೆ ತೊಂದರೆ ನೀಡಿದರೆ ಸಹಿಸಲು ಸಾಧ್ಯವಿಲ್ಲ. ಬಣ್ಣೇನಹಳ್ಳಿ ಗ್ರಾಮಸ್ಥರ ಜೊತೆಗೂಡಿ ನಾನು ಕೂಡ ನ್ಯಾಯಯುತವಾಗಿ ಹೋರಾಟಕ್ಕೆ ಕೂರಬೇಕಾಗುತ್ತದೆ ಎಂದು ಖಡಕ್ ಎಚ್ಚರಿಕೆ ನೀಡಿದರು. ಶಾಸಕರ ಈ ಕರೆಗೆ ಸ್ಪಂದಿಸಿದ ಫ್ಯಾಕ್ಟರಿ ಆಡಳಿತ ಮಂಡಳಿಯು ರಸ್ತೆ ನೀಡಲು ಒಪ್ಪಿಗೆ ಸೂಚಿಸಿತು. ಇದರ ಬೆನ್ನಲ್ಲೇ, ರಾಮ ಲಕ್ಷ್ಮಣ ಗುಡಿಯ ಮುಂಭಾಗ ಹಾದುಹೋಗುತ್ತಿದ್ದ ಹಳೆಯ ರಸ್ತೆಯ ಬದಲಾಗಿ, ಗುಡಿಯ ಹಿಂಭಾಗದ ಮೂಲಕ ಅಶೋಕನಗರ ಮುಖ್ಯ ರಸ್ತೆಗೆ ಸಂಪರ್ಕ ಕಲ್ಪಿಸುವ ಪರ್ಯಾಯ ರಸ್ತೆ ನಿರ್ಮಾಣಕ್ಕೆ ಸಮ್ಮತಿಸಲಾಯಿತು.

### ಶಾಸಕರ ತ್ವರಿತ ನಡೆಗೆ ಗ್ರಾಮಸ್ಥರ ಕೃತಜ್ಞತೆ

ಫುಡ್ ಫ್ಯಾಕ್ಟರಿ ಆಡಳಿತ ಮಂಡಳಿಯ ಒಪ್ಪಿಗೆಯ ನಂತರ ಬಣ್ಣೇನಹಳ್ಳಿ ಹಾಗೂ ಅಕ್ಕಪಕ್ಕದ ಗ್ರಾಮಸ್ಥರು ಪ್ರತಿಭಟನೆಯನ್ನು ಸಂಪೂರ್ಣವಾಗಿ ಕೈಬಿಟ್ಟರು. ಈ ವೇಳೆ ಮಾತನಾಡಿದ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಧನಂಜಯ ಅವರು, ನಮ್ಮ ಒಂದು ಫೋನ್ ಕರೆಗೆ ಗೌರವ ನೀಡಿ ಶಾಸಕರು ನೇರವಾಗಿ ಸ್ಥಳಕ್ಕೆ ಆಗಮಿಸಿ ಸಮಸ್ಯೆಯನ್ನು ಪ್ರಾಮಾಣಿಕವಾಗಿ ಬಗೆಹರಿಸಿದ್ದಾರೆ. ಫ್ಯಾಕ್ಟರಿಯವರು ತಪ್ಪು ಮಾಹಿತಿ ನೀಡಿ ಗೊಂದಲ ಸೃಷ್ಟಿಸಿ ನಮಗೆ ಅನ್ಯಾಯ ಮಾಡಲು ಹೊರಟಿದ್ದರು. ಈಗ ಶಾಸಕರ ಸೌಹಾರ್ದಯುತ ಮಧ್ಯಸ್ಥಿಕೆಯಿಂದ ನಮಗೆ ನ್ಯಾಯ ಸಿಕ್ಕಿರುವುದು ಇಡೀ ಗ್ರಾಮಕ್ಕೆ ಹರ್ಷ ತಂದಿದೆ ಎಂದು ಹೇಳುತ್ತಾ ಶಾಸಕರಿಗೆ ಗ್ರಾಮದ ಪರವಾಗಿ ಕೃತಜ್ಞತೆ ಸಲ್ಲಿಸಿದರು.

### ಸ್ಥಳದಲ್ಲಿ ಉಪಸ್ಥಿತರಿದ್ದ ಪ್ರಮುಖರು

ರಸ್ತೆ ವಿವಾದ ಬಗೆಹರಿದ ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಹಾಗೂ ಜೆಡಿಎಸ್ ಮುಖಂಡ ಹುಲ್ಲೇಗೌಡ, ಮಂಜಣ್ಣ, ಆಟೋ ವಾಸಣ್ಣ, ನ್ಯಾಯಬೆಲೆ ಶಿವಣ್ಣ, ಫಾಲ್ಕನ್ ಆನಂದ್, ಹೋಟೆಲ್ ದಿನೇಶ್, ಚಂದ್ರಯ್ಯ, ನಟೇಶ್, ಹೊನ್ನಯ್ಯ, ಮಿಲ್ ವೆಂಕಟೇಶ್, ಹೊನ್ನೇಗೌಡ, ಅಂಗಡಿ ಬಾಲು, ಪ್ರದೀಪ್, ಜಯರಾಂ, ಜವರಾಯಿ, ಸೋಮಣ್ಣ, ಸುರೇಶ್, ಮಹೇಶ್, ವಾಟಾಳ್ ನಾಗರಾಜು ಸೇರಿದಂತೆ ಬಣ್ಣೇನಹಳ್ಳಿ ಮತ್ತು ಸುತ್ತಮುತ್ತಲಿನ ಹಳ್ಳಿಯ ನೂರಾರು ಗ್ರಾಮಸ್ಥರು ಉಪಸ್ಥಿತರಿದ್ದರು.

---

# ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಚಾಮರಾಜನಗರ: ಗ್ರಾಮೀಣ ರಸ್ತೆಗಳು ಗ್ರಾಮೀಣಾಭಿವೃದ್ದಿಯ ಪ್ರತೀಕವಾಗಿದ್ದು, ಗ್ರಾಮ ಸಂಪರ್ಕ ರಸ್ತೆಗಳ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದೇನೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದರು.

ಚಾಮರಾಜನಗರ ವಿಧಾನಸಭೆ ಕ್ಷೇತ್ರದ ಕೂಡ್ಲೂರು, ಆಲೂರು, ಸರಗೂರುಮೋಳೆ ಗ್ರಾಮದ ಉಪ್ಪಾರ ಬಡಾವಣೆ ಗಳಲ್ಲಿ ಮಳೆಹಾನಿಪರಿಹಾರ ಯೋಜನೆ ಅನುದಾನ 1.80 ಕೋಟಿ ರೂ.ವೆಚ್ಚದಲ್ಲಿ ಕೈಗೊಳ್ಳಲಾಗುವ ರಸ್ತೆ ಹಾಗೂ ಚರಂಡಿ ಅಭಿವೃದ್ದಿಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.

ಕೂಡ್ಲೂರು ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗೆ 80 ಲಕ್ಷ, ಆಲೂರು ಗ್ರಾಮದ ಉಪ್ಪಾರ ಬಡಾವಣೆಯಲ್ಲಿ ರಸ್ತೆ ಅಭಿವೃದ್ಧಿಗೆ 50ಲಕ್ಷ, ಸರಗೂರುಮೋಳೆ ಗ್ರಾಮಕ್ಕೆ 50 ಲಕ್ಷ ರೂ ಸೇರಿದಂತೆ 1.80 ಕೋಟಿ ರೂ.ವೆಚ್ಚದಲ್ಲಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಮಾಡಲಾಗುವುದು. ಗ್ರಾಮಸ್ಥರು ಮುಂದೆ ನಿಂತು ಗುಣಮಟ್ಟದ ಚರಂಡಿ ಹಾಗೂ ರಸ್ತೆ ಕಾಮಗಾರಿ ಮಾಡಿಸಿಕೊಳ್ಳುವಂತೆ ಶಾಸಕರು ಸೂಚಿಸಿದರು. ನಿಗಧಿತ ಅವ ಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ, ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸೂಚನೆ ನೀಡಿದರು. ಇದೇವೇಳೆ ನಗರದ ರೇಷ್ಮೆ ಗೂಡು ಮಾರುಕಟ್ಟೆ ಯಿಂದ ಚನ್ನೀಪುರಮೋಳೆ, ಜಾಲಹಳ್ಳಿಹುಂಡಿಯಲ್ಲಿ ನಡೆಯುತ್ತಿ ರುವ ರಸ್ತೆ ಕಾಮಗಾರಿಯನ್ನು ಶಾಸಕರು ಪರಿಶೀಲಿಸಿದರು.

ಎಪಿಎಂಸಿ ಸದಸ್ಯ ಎ.ಎಸ್. ಆಲೂರು ಪ್ರದೀಪ್, ಗ್ರಾ.ಪಂ ಮಾಜಿ ಸದಸ್ಯೆ ಯೋಗೇಶ್ವರಿ ಮುಖಂಡರಾದ ಮಂಜುನಾಥ್, ಗಿರೀಶ್, ನಾರಾಯಣ್, ಕೃಷ್ಣ, ಮಹದೇವ ಸ್ವಾಮಿ, ಶಿವಕುಮಾರ್, ಗೋವಿಂದರಾಜು, ಚಿನ್ನಸ್ವಾಮಿ, ರಮೇಶ್, ಮಲ್ಲು, ಸಚ್ಚಿನ್, ಪುಟ್ಟಸ್ವಾಮಿ, ಎಸಿ,ಮಹದೇವಸ್ವಾಮಿ, ಕುಮಾರ್, ಶೇಷಣ್ಣ, ಚಿಕ್ಕಮಾದು, ಚಂದ್ರು, ಕೆಆರ್ಐಡಿಎಲ್ ಎಂಜಿನಿಯರ್, ಮಧು ಸೇರಿದಂತೆ ಆಯಾ ಗ್ರಾಮದ ಬಡಾವಣೆಗಳ ನಿವಾಸಿಗಳು, ಮುಖಂಡರು ಹಾಜರಿದ್ದರು.

---

# 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ರಾಮನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ (ರಿ), ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026 ಕಾರ್ಯಕ್ರಮವನ್ನು ಇದೇ ಜೂ. 12ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಪಂಚಾಯತ್ ಭವನದ ವರೆಗೆ ಜಾಗೃತಿ ಜಾಥಾ ಮತ್ತು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ನಂತರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಯಶವಂತ್ ವಿ. ಗುರುಕರ್ ಅವರು ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಅಧ್ಯಕ್ಷತೆ ವಹಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಪ್ರತಿಜ್ಞಾ ವಿಧಿ ಬೋಧಿಸುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್‌ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಉಪ ವಿಭಾಗಾಧಿಕಾರಿ ಬಿನೋಯ್, ರಾಮನಗರ ತಾಲ್ಲೂಕು ತಹಶೀಲ್ದಾರರಾದ ತೇಜಸ್ವಿನಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಸ್ವಾಮಿ ಎಂ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ದಿನೇಶ್ ಜೆ.ಆರ್., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ನಾಗರತ್ನ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜಿನಿ, ಕಾರ್ಮಿಕ ನಿರೀಕ್ಷರಾದ ಪ್ರದೀಪ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

---

# ಕೆ.ಆರ್.ಕ್ಷೇತ್ರದಲ್ಲಿ 90 ಲಕ್ಷ ರೂ ಗಳ ಕಾಮಗಾರಿಗೆ ಶ್ರೀವತ್ಸ ಚಾಲನೆ

ಮೈಸೂರು: ನಗರ ಪಾಲಿಕೆ ಅನುದಾನ ಅಡಿ ಕೆ.ಆರ್. ಕ್ಷೇತ್ರದ ವಲಯ ಕಚೇರಿ ಒಂದು ಎರಡು ಹಾಗೂ ಮೂರರ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂಬರ್ 52. 57.64.65 ರಲ್ಲಿ ಒಳಚರಂಡಿ ಬಾಕ್ಸ್ ಡ್ರೈನ್ ಮತ್ತು ರಸ್ತೆ ಡಾಂಬರೀಕರಣ ಸುಮಾರು 90 ಲಕ್ಷ ರೂಗಳ ಕಾಮಗಾರಿಗೆ ಶಾಸಕ ಟಿ. ಎಸ್.ಶ್ರೀವತ್ಸ ಗುದ್ದಲಿ ಪೂಜೆ ಮಾಡಿದರು.

ಈ ಸಂದರ್ಭದಲ್ಲಿ ಕ್ಷೇತ್ರದ ಅಧ್ಯಕ್ಷ ಗೋಪಾಲ್ ರಾಜೇ ಅರಸ್ , ನಗರಪಾಲಿಕೆ ಮಾಜಿ ಸದಸ್ಯರಾದ ಚಂಪಕ, ಜಗದೀಶ್, ಗೀತಾಯೋಗನಂದ್, ಮುಖಂಡರಾದ ಪ್ರಸನ್ನ, ನವೀನ್, ಹೋಯ್ಸಳ, ಹರ್ಷ, ಪ್ರದೀಪ್ ಕುಮಾರ್, ರಾಜೇಶ್, ಹರೀಶ್, ಅಂಕಿತ್ ಮಂಜುನಾಥ್, ರವಿ, ಸತೀಶ, ಗಿರೀಶ್, ಮನೋಜ್ ಗಿರೀಶ್ ಗೌಡ ಇ ಇ ಶ್ರೀನಿವಾಸಮೂರ್ತಿ ಎಇಇ ಧನುಷ್, ಇಂಜಿನಿಯರ್ ಪ್ರಶಾಂತ್, ಪ್ರಸನ್ನ. ಸೌಮ್ಯ, ದೀಪಕ್ ಇದ್ದರು.



---

# ಸ್ವಯಂ ರಕ್ತದಾನದ ಮೂಲಕ ಅರಿವು

ಮೈಸೂರು: ಸ್ವಯಂ ರಕ್ತದಾನ ಮಾಡಿದ ಶಾಸಕ ಅನಿಲ್ ಚಿಕ್ಕಮಾದು ರಕ್ತದಾನ ಮಾಡು ವುದರಿಂದ ಆರೋಗ್ಯ ಮತ್ತಷ್ಟು ಉತ್ತಮವಾಗುತ್ತದೆ ಎಂಬ ಸಂದೇಶ ಸಾರಿದರು.

ನಗರದ ನ್ಯೂ ಸಯಾಜಿರಾವ್ ರಸ್ತೆಯಲ್ಲಿರುವ ಜೀವದಾರ ರಕ್ತ ನಿಧಿ ಕೇಂದ್ರಕ್ಕೆ ಭೇಟಿ ನೀಡಿ ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ರಕ್ತದಾನ ಜಾಗೃತಿಗೆ ಚಾಲನೆ ನೀಡಿದರು. ದಾನಗಳಲ್ಲಿ ಶ್ರೇಷ್ಠ ದಾನ ಎಂದರೆ ಅದು ರಕ್ತದಾನ, ರಕ್ತದಾನಕ್ಕೆ ಯಾರು ಬೆಲೆ ಕಟ್ಟಲು ಸಾಧ್ಯವಿಲ್ಲ, ರಕ್ತದಾನ ಮಾಡಿದರೆ ಆರೋಗ್ಯ ಲಾಭಗಳಿವೆ. ಹಾಗಾಗಿ ಯುವಕರು ಹಾಗೂ ಆರೋಗ್ಯವಂತರು ಹೆಚ್ಚಾಗಿ ರಕ್ತದಾನ ಮಾಡುವ ಮೂಲಕ ಇತರರ ಪ್ರಾಣವನ್ನು ಕಾಪಾಡಬೇಕು, ಎಂದು ರಕ್ತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರು ಇದೇ ಸಂದರ್ಭದಲ್ಲಿ ಜೀವದಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಪನಿಶ್ ಆಸ್ಪತ್ರೆಯ ನಿರ್ದೇಶಕ ಲೋಕೇಶ್, ಸುದರ್ಶನ್, ಚಿಕ್ಕಣ್ಣ, ಸುರೇಶ್, ಎಸ್.ಎನ್.ರಾಜೇಶ್ ಹಾಗೂ ಇನ್ನಿತರರು ಹಾಜರಿದ್ದರು.




---

# ಲೋಕಾ ಅಧಿಕಾರಿ ಮುಂದೆ ಸರಮಾಲೆ



ಗುಂಡ್ಲುಪೇಟೆ: ಸಾರ್ವಜನಿಕರ ಅಹವಾಲು ಸ್ವೀಕರಿಸಲು ಪಟ್ಟಣದ ಹೊಸಪ್ರವಾಸಿ ಮಂದಿರಕ್ಕೆ ಅಗಮಿಸಿದ ಲೋಕಾಯುಕ್ತ ಅದಿಕಾರಿಗಳ ಮುಂದೆ ದೂರುಗಳ ಸರಮಾಳೆ ಹೊತ್ತು ಸಾರ್ವಜನಿಕರು ಅಗಮಿಸಿದ್ದರು.

ತಾಲ್ಲೂಕಿನಲ್ಲಿ ಅಕ್ರಮಗಣಿಗಾರಿಕೆ ನಡೆಯುತ್ತಿದೆ ಟಿಪ್ಪರ್‌ಗಳಿಂದ ಸಾವು ನೋವು ಸಂಭವಿಸಿದೆ ಇದರ ಬಗ್ಗೆ ಕ್ರಮ ಯಾಕಿಲ್ಲ ಸಾರಿಗೆ ಅರ್ ಟಿಓ, ಮತ್ತು ಪೊಲೀಸರು ಗಣಿ ಇಲಾಖೆ ಕ್ರಮ ಯಾಕೆ ಕೈಗೊಳ್ಳುತಿಲ್ಲ ಇದರ ಬಗ್ಗೆ ಲೋಕಾಯುಕ್ತ ತನಿಖೆ ನಡೆಸಬೇಕು ಎಂದು ಸಾರ್ವಜನಿಕರಾದ ಸದಾನಂದ ಹಾಗೂ ಮಹದೇವಪ್ಪ ನವರು ದೂರು ನೀಡಿದರು. ಬರಗಿ ಗ್ರಾಮದಲ್ಲಿ ಸರ್ವೆ ನಂಬರ್ 205 ರಲ್ಲಿ 608 ಎಕರೆ 21 ಗುಂಟೆ ಗೋಮಾಳ ಒತ್ತೂವರಿಯಾಗಿದ್ದು ತೆರವು ಮಾಡಬೇಕು ಎಂದು ರೈತ ಮುಖಂಡ ಮಹೇಶ್ ಮನವಿ ಮಾಡಿದರು, ಗೋಮಾಳದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತಿದ್ದು ಬೆಳಿಗ್ಗೆಯಿಂದ ರಾತ್ರಿಪೂರ್ತಿ ಎಂ ಸ್ಯಾಂಡ್ ನೆರೆ ರಾಜ್ಯಕ್ಕೆ ಸಾಗಾಣೆಯಾಗುತಿದ್ದು ನಾಳೆ ನಮ್ಮ ಜನಕ್ಕೆ ಸಿಗದಂತಾಗಿದೆ ನಿಯಮ ಮೀರಿ ಅತಿಯಾದ ಗಣಿಗಾರಿಕೆ ನಡೆಯುತಿದ್ದು ಇದರ ಬಗ್ಗೆ ಲೋಕಾಯುಕ್ತ ಗಮನಹರಿಸಬೇಕು ಎಂದು ಷಣ್ಮುಖಸ್ವಾಮಿ ಬೆಟ್ಟದಮಾದಳ್ಳಿ ಒತ್ತಾಯಿಸಿದರು.

ಬಂಡೀಪುರದಲ್ಲಿ ಸಫಾರಿ ನಡೆಯುತ್ತಿದ್ದು ಅದರ ಹಣ ದುರುಪಯೋಗವಾಗುತ್ತಿದೆ ಯಾವುದಕ್ಕೆ ಖರ್ಚು ಮಾಡುತಿದ್ದಾರೆ ಎಂಬ ಬಗ್ಗೆ ಮಾಹಿತಿ ನೀಡಬೇಕು ಅಲ್ಲದೆ ಸಫಾರಿಯಿಂದ ಜನರಿಗೆ ಯಾವ ಉಪಯೋಗವಿಲ್ಲ ಕಾಡು ಪ್ರಾಣಿಗಳ ಹಾವಳಿ ಹೆಚ್ಚಿದೆ ಎಂದರು. ಇದಕ್ಕೆ ಲೋಕಾಯುಕ್ತ ಇನ್ಸ್ ಪೆಕ್ಟರ್ ಗಳಾದ ಲೋಹಿತ್ ಕುಮಾರ್,ಸುಧಾಕರ್ ಕೆ ಎನ್ ಮಾತನಾಡಿ ಸಾರ್ವಜನಿಕರ ದೂರು ಗಳನ್ನು ಸ್ವೀಕರಿಸಿದರು, ಲಿಖಿತ ರುಪದಲ್ಲಿ ದಾಖಲೆ ರೂಪದಲ್ಲಿ ದೂರು ಸಲ್ಲಿಸಲು ಸೂಚಿಸಿದರು.

---

**ಬಂಡೀಪುರದಲ್ಲಿ ಅಕ್ರಮ ಕಾಡುಪ್ರಾಣಿ ಬೇಟೆ:**

# ಇಬ್ಬರು ಆರೋಪಿಗಳ ಬಂಧನ, ನಾಡಬಂದೂಕು ಜಪ್ತಿ

ಗುಂಡ್ಲುಪೇಟೆ: ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಅಕ್ರಮವಾಗಿ ಕಾಡುಪ್ರಾಣಿಗಳನ್ನು ಬೇಟೆ ಯಾಡುತ್ತಿದ್ದ ಇಬ್ಬರು ಬೇಟೆಗಾರರನ್ನು ಅರಣ್ಯ ಇಲಾ ಖೆಯ ವಿಶೇಷ ಹುಲಿ ಸಂರಕ್ಷಣಾ ದಳ (ಎಸ್‌ಟಿಪಿಎಫ್) ಸಿಬ್ಬಂದಿ ಯಶಸ್ವಿ ಕಾರ್ಯಾಚರಣೆ ನಡೆಸಿ ಬಂಧಿಸಿ ದ್ದಾರೆ. ಬಂಧಿತರಿಂದ ನಾಡಬಂದೂಕು, ಜೀವಂತ ಕಾಡುಮೊಲಗಳು ಹಾಗೂ ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

### ಗಸ್ತು ತಿರುಗುತ್ತಿದ್ದ ವೇಳೆ ಸಿಕ್ಕಿಬಿದ್ದ ಬೇಟೆಗಾರರು

ಜೂನ್ 11ರಂದು ಮುಂಜಾನೆ ಸುಮಾರು 2 ಗಂಟೆಯ ವೇಳೆಗೆ ವಡ್ಡರಹಳ್ಳಿ ಗ್ರಾಮದ ಸಮೀಪ ಎಸ್‌ಟಿಪಿಎಫ್ ಪ್ಲಟೂನ್-1ರ ಸಿಬ್ಬಂದಿ ವಾಡಿಕೆಯಂತೆ ಗಸ್ತು ತಿರುಗುತ್ತಿದ್ದರು. ಈ ಸಂದರ್ಭದಲ್ಲಿ ಕಾಡುಪ್ರಾಣಿಗಳ ಬೇಟೆಯಲ್ಲಿ ತೊಡಗಿದ್ದ ಬನ್ನಿತಾಲಾಪುರ ಗ್ರಾಮದ ಶಿವಕುಮಾರ್ (25) ಹಾಗೂ ಮನೋಜ್ ಕುಮಾರ್ (25) ಎಂಬ ಇಬ್ಬರು ಆರೋಪಿಗಳನ್ನು ಸಿಬ್ಬಂದಿ ರೆಡ್‌ಹ್ಯಾಂಡ್ ಆಗಿ ಹಿಡಿದು ಬಂಧಿಸುವಲ್ಲಿ ಯಶಸ್ವಿ ಯಾಗಿದ್ದಾರೆ. ಆದರೆ, ಈ ಬೇಟೆ ಜಾಲದಲ್ಲಿ ಭಾಗಿಯಾ ಗಿದ್ದ ಇನ್ನುಳಿದ ಮೂವರು ಆರೋಪಿಗಳು ಕತ್ತಲ ಲಾಭ ಪಡೆದು ಸ್ಥಳದಿಂದ ತಲೆಮರೆಸಿಕೊಂಡಿದ್ದು, ಅವರಿಗಾಗಿ ಶೋಧ ಕಾರ್ಯ ತೀವ್ರಗೊಂಡಿದೆ.




### ಜೀವಂತ ಮೊಲಗಳು ಹಾಗೂ ಮಾರಕಾಸ್ತ್ರಗಳ ಜಪ್ತಿ

ಕಾರ್ಯಾಚರಣೆಯ ವೇಳೆ ಆರೋಪಿಗಳಿಂದ ಮರದ ಹಿಡಿಯುಳ್ಳ ಒಂಟಿ ನಳಿಕೆಯ ಅಕ್ರಮ ನಾಡಬಂದೂಕು, ಬೇಟೆಯಾಡಿದ್ದ ಎರಡು ಜೀವಂತ ಕಾಡುಮೊಲಗಳು, ಹೆಡ್ ಟಾರ್ಚ್ ಹಾಗೂ ಕೃತ್ಯಕ್ಕೆ ಬಳಸಿದ್ದ ಟಿವಿಎಸ್ ಎಕ್ಸ್‌ಎಲ್ 100 ದ್ವಿಚಕ್ರ ವಾಹನವನ್ನು ಜಪ್ತಿ ಮಾಡಲಾಗಿದೆ. ಸದ್ಯ ಬಂಧಿತ ಆರೋಪಿಗಳು ಮತ್ತು ವಶಪಡಿಸಿಕೊಳ್ಳಲಾದ ಸಾಕ್ಷ್ಯ ವಸ್ತುಗಳನ್ನು ಮುಂದಿನ ಕಠಿಣ ಕಾನೂನು ಕ್ರಮಗಳಿಗಾಗಿ ಗುಂಡ್ಲುಪೇಟೆ ಬಫರ್ ವಲಯದ ಅರಣ್ಯಾಧಿಕಾರಿಗಳ ವಶಕ್ಕೆ ಒಪ್ಪಿಸಲಾಗಿದೆ.

ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಕ್ಷೇತ್ರ ನಿರ್ದೇಶಕರಾದ ನಂದೀಶ್ ಅವರ ಮಾರ್ಗದರ್ಶನ ದಲ್ಲಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಎಸ್‌ಟಿ ಪಿಎಫ್) ಮಂಜುನಾಥ್ ಅವರ ಉಸ್ತುವಾರಿಯಲ್ಲಿ ಮತ್ತು ವಲಯ ಅರಣ್ಯಾಧಿಕಾರಿ ವೆಂಕಟೇಶ್ ಅವರ ನೇರ ನೇತೃತ್ವದಲ್ಲಿ ಈ ಯಶಸ್ವಿ ಕಾರ್ಯಾಚರಣೆ ಜರು ಗಿತು. ದಾಳಿಯಲ್ಲಿ ಎಸ್‌ಟಿಪಿಎಫ್ ಮೇಲುಕಾಮನಹಳ್ಳಿ ಪ್ಲಟೂನ್-1ರ ಉಪ ವಲಯ ಅರಣ್ಯಾಧಿಕಾರಿಗಳಾದ ಜ್ಞಾನಶೇಖರ್ ಎಂ., ಕಾರ್ತಿಕ್ ಯಾದವ್ ಹಾಗೂ ಸಿಬ್ಬಂದಿಗಳಾದ ಅಮರ್, ಆನಂದ್, ರವಿಕುಮಾರ್, ವಿನಯ್, ಚಂದ್ರಶೇಖರ್, ಯಾಸೀನ್ ಮತ್ತು ನಾರಾಯಣ್ ಮುತುವರ್ಜಿ ವಹಿಸಿದ್ದರು.

---

# ನಂಜುಂಡೇಶ್ವರ ದೇವಸ್ಥಾನ ಗೋಲಕಕ್ಕೆ ಕನ್ನ

ಗುಂಡ್ಲುಪೇಟೆ: ತಾಲೂಕಿನ ಹೆಗ್ಗಡಹಳ್ಳಿ ಗ್ರಾಮದ ಶ್ರೀ ನಂಜುಂಡೇಶ್ವರ ದೇವಸ್ಥಾನದಲ್ಲಿ ಕಳ್ಳರ ಕೈಚಳಕ, ಗೋಲಕ ದೋಚಿರುವ ಘಟನೆ ಬುಧವಾರ ತಡರಾತ್ರಿ ನಡೆದಿದೆ.



ತಾಲೂಕಿನ ಹೆಗ್ಗಡಹಳ್ಳಿ ಗ್ರಾಮದ ಮಧ್ಯಭಾಗದಲ್ಲಿ ಶ್ರೀ ನಂಜುಂಡೇಶ್ವರ ದೇವಸ್ಥಾನದ ಬೀಗ ಒಡೆದು ಗರ್ಭಗುಡಿಗೆ ನುಗ್ಗಲು ಪ್ರಯತ್ನಿಸಿ ವಿಫಲವಾದ ಕಳ್ಳರು, ದೇವಸ್ಥಾನದ ಆವರಣದಲ್ಲಿದ್ದ ಒಂದು ಗೋಲಕವನ್ನು ದೋಚಿ ಅದರಲ್ಲಿದ್ದ ನಾಲ್ಕು ಸಾವಿರ ರೂ. ಹಣವನ್ನು ಕದ್ದು ಪರಾರಿಯಾಗಿದ್ದಾರೆ. ನಂತರ ಗ್ರಾಮದ ಹೊರವಲಯದಲ್ಲಿ ಗೋಲಕ ಬೀಸಿಕಿ ಹೋಗಿದ್ದಾರೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಮಾಹಿತಿ ತಿಳಿದ ತಕ್ಷಣ ಬೇಗೂರು ಪೊಲೀಸ್ ಠಾಣೆ ಅಪರಾಧ ವಿಭಾಗದ ಸಬ್ ಇನ್ಸ್ ಪೆಕ್ಟರ್ ಲೋಕೇಶ್ ಹಾಗೂ ಪೊಲೀಸ್ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಮಾಹಿತಿ ಕಲೆ ಹಾಕಿದ್ದಾರೆ. ಈ ಸಂಬಂಧ ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಸರ್ಕಾರಿ ಶಾಲೆಯ ಶೌಚಾಲಯ ಸ್ವಚ್ಛತೆಗಾಗಿ ಪೋಷಕರಿಂದ ಹಣ ವಸೂಲಿಗೆ ವಿರೋಧ**

# ಭಿಕ್ಷಾಟನೆ ನಡೆಸಲು ಸಂಘಟನೆಗಳ ತೀರ್ಮಾನ



ಕೆ.ಆರ್.ಪೇಟೆ: ಪಟ್ಟಣದ ಶತಮಾನೋತ್ತರ ಇತಿಹಾಸವಿರುವ ಸರ್ಕಾರಿ ಶಾಲೆಯಲ್ಲಿ ಶೌಚಾಲಯ ಸ್ವಚ್ಛತೆಯ ನೆಪದಲ್ಲಿ ಪೋಷಕರಿಂದ ತಲಾ ಒಂದು ಸಾವಿರ ರೂಪಾಯಿ ಹಣ ಸಂಗ್ರಹಿಸುತ್ತಿರುವುದನ್ನು ಖಂಡಿಸಿರುವ ವಿವಿಧ ಕನ್ನಡಪರ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು, ಬಡ ಪೋಷಕರಿಗೆ ಹೊರೆಯಾಗುವುದನ್ನು ತಪ್ಪಿಸಲು ತಾವೇ ಪಟ್ಟಣದಲ್ಲಿ ಭಿಕ್ಷಾಟನೆ ಮತ್ತು ದೇಣಿಗೆ ಸಂಗ್ರಹದ ಮೂಲಕ ಹಣ ಕ್ರೋಡೀಕರಿಸಿ ಶಾಲೆಗೆ ನೀಡುವುದಾಗಿ ಘೋಷಿಸಿದ್ದಾರೆ.

### ಬಡ ಪೋಷಕರಿಂದ ಹಣ ಪಡೆಯುವ ಪದ್ಧತಿ ಕೈಬಿಡಲು ಆಗ್ರಹ

ಈ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿ ಮಾತನಾಡಿದ ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಸೋಮಶೇಖರ್ ಅವರು, ದೇಶದ ಯಾವುದೇ ಸರ್ಕಾರಿ ಶಾಲೆಯಲ್ಲೂ ಶೌಚಾಲಯ ಸ್ವಚ್ಛತೆಗಾಗಿ ಮಕ್ಕಳಿಂದ ಅಥವಾ ಪೋಷಕರಿಂದ ಈ ರೀತಿ ಕಡ್ಡಾಯವಾಗಿ ಹಣ ಸಂಗ್ರಹ ಮಾಡುತ್ತಿಲ್ಲ. ಗದಗ ಜಿಲ್ಲೆಯ ಕೆಲವು ಸರ್ಕಾರಿ ಶಾಲೆಗಳಲ್ಲಿ ಶಾಲೆಗೆ ಸೇರುವ ಬಡ ಮಕ್ಕಳ ಹೆಸರಿನಲ್ಲಿ ತಲಾ ಒಂದು ಸಾವಿರ ರೂಪಾಯಿಗಳ ಠೇವಣಿ ಇಡುತ್ತಿರುವ ಸಾರಸ್ವತ ಉದಾಹರಣೆಗಳು ನಮ್ಮ ಕಣ್ಣ ಮುಂದಿವೆ. ಅಲ್ಲದೆ, ನಮ್ಮದೇ ಪಟ್ಟಣದ ಸರ್ಕಾರಿ ಹೈಸ್ಕೂಲ್‌ನಲ್ಲಿ ಮಕ್ಕಳಿಗೆ ಉಚಿತವಾಗಿ ನೋಟ್‌ಬುಕ್, ಬ್ಯಾಗ್‌ಗಳನ್ನು ವಿತರಿಸಿ ಪ್ರೋತ್ಸಾಹಿಸಲಾಗುತ್ತಿದೆ. ಪರಿಸ್ಥಿತಿ ಹೀಗಿರುವಾಗ, ಇಲ್ಲಿನ ಕೆ.ಪಿ.ಎಸ್ (ಕರ್ನಾಟಕ ಪಬ್ಲಿಕ್ ಸ್ಕೂಲ್) ಶಾಲೆಯಲ್ಲಿ ಮಾತ್ರ ಪೋಷಕರಿಂದ ಈ ರೀತಿ ಹಣ ವಸೂಲಿ ಮಾಡುತ್ತಿರುವುದು ಏಕೆ ಎಂದು ಅವರು ಶಿಕ್ಷಣ ಇಲಾಖೆಯನ್ನು ಪ್ರಶ್ನಿಸಿದರು. ಬಡ ಪೋಷಕರಿಗೆ ತೊಂದರೆ ಕೊಡುವ ಈ ಪದ್ಧತಿಯನ್ನು ತಕ್ಷಣವೇ ಕೈಬಿಡಬೇಕು ಎಂದು ಅವರು ಒತ್ತಾಯಿಸಿದರು.

### ಶೂ ಪಾಲಿಶ್ ಮಾಡಿ ಹಣ ನೀಡಲು ಮುಂದಾದ ಕರವೇ ಮುಖಂಡರು

ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನ ಸೇನೆ) ಜಿಲ್ಲಾ ಅಧ್ಯಕ್ಷ ಕಾಂತರಾಜ್ ಮಾತನಾಡಿ, 150 ವರ್ಷಗಳ ಸುದೀರ್ಘ ಇತಿಹಾಸವಿರುವ ಹೆಮ್ಮೆಯ ಸರ್ಕಾರಿ ಶಾಲೆಯಲ್ಲಿ ಈ ರೀತಿಯ ನಡವಳಿಕೆಗಳು ಶೋಭೆ ತರುವುದಿಲ್ಲ. ಪೋಷಕರಿಂದ ಬಲವಂತವಾಗಿ ಹಣ ವಸೂಲಿ ಮಾಡುವುದನ್ನು ಶಾಲಾ ಆಡಳಿತ ಮಂಡಳಿ ನಿಲ್ಲಿಸಬೇಕು. ಒಂದು ವೇಳೆ ಶಾಲೆಯ ನಿರ್ವಹಣೆಗೆ ಹಣದ ಅಗತ್ಯವಿದ್ದರೆ, ನಾವೇ ರಸ್ತೆ ಬದಿಯಲ್ಲಿ ಕುಳಿತು ಸಾರ್ವಜನಿಕರ ಶೂ ಪಾಲಿಶ್ ಮಾಡಿ, ಭಿಕ್ಷಾಟನೆ ನಡೆಸಿ ಹಣ ಸಂಗ್ರಹಿಸಿಕೊಡಲು ಸಿದ್ಧರಿದ್ದೇವೆ. ಯಾವುದೇ ಕಾರಣಕ್ಕೂ ಬಡ ವಿದ್ಯಾರ್ಥಿಗಳ ಪೋಷಕರಿಗೆ ಕಿರುಕುಳ ನೀಡಬಾರದು ಎಂದು ಎಚ್ಚರಿಸಿದರು. ಈ ಹಿನ್ನೆಲೆಯಲ್ಲಿ ಬರುವ ಶನಿವಾರ ಪಟ್ಟಣದಲ್ಲಿ ಸಾಂಕೇತಿಕವಾಗಿ ಭಿಕ್ಷಾಟನೆ ನಡೆಸಿ ದೇಣಿಗೆ ಸಂಗ್ರಹಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

### ಪ್ರತಿಭಟನಾ ಸಭೆಯಲ್ಲಿ ಉಪಸ್ಥಿತರಿದ್ದ ಪ್ರಮುಖರು

ಬಡ ಪೋಷಕರ ಪರವಾಗಿ ಧ್ವನಿ ಎತ್ತಿದ ಈ ಸಭೆಯಲ್ಲಿ ಜಯಕರ್ನಾಟಕ ಸಂಘಟನೆಯ ತಾಲೂಕು ಯೂತ್ ವಿಭಾಗದ ಅಧ್ಯಕ್ಷ ಮಹೇಶ್, ಮಹಿಳಾ ಘಟಕದ ಅಧ್ಯಕ್ಷರಾದ ಜಯಲಕ್ಷ್ಮಮ್ಮ, ಕರವೇ ಸ್ವಾಭಿಮಾನ ಸೇನೆಯ ತಾಲೂಕು ಅಧ್ಯಕ್ಷ ಕಿರಣ್ ವಿ. ಹಾಗೂ ಪ್ರಮುಖ ಮುಖಂಡರಾದ ದಯಾನಂದ್ ರಾವ್ ಸೇರಿದಂತೆ ಹಲವು ಶಿಕ್ಷಣಾಭಿಮಾನಿಗಳು ಮತ್ತು ಪೋಷಕರು ಉಪಸ್ಥಿತರಿದ್ದರು.

# ನನ್ನ ಮರ ನನ್ನ ನೆರಳು ಆಂದೋಲನಕ್ಕೆ ಕೈ ಜೋಡಿಸಿ

ಗುಂಡ್ಲುಪೇಟೆ: ಪಟ್ಟಣದಲ್ಲಿ ನನ್ನ ಮರ ನನ್ನ ನೆರಳು? ಆಂದೋಲನಕ್ಕೆ ಕೈಜೋಡಿಸಲು ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪುರಸಭೆ ಮುಖ್ಯಾಧಿಕಾರಿ ಸರವಣ ಕರೆ ನೀಡಿದ್ದಾರೆ

ಪಟ್ಟಣವನ್ನು ಹಸಿರಾಗಿಸುವ ನಿಟ್ಟಿನಲ್ಲಿ ಪುರಸಭೆಯು ಹಮ್ಮಿಕೊಂಡಿರುವ ?ನನ್ನ ಮರ ನನ್ನ ನೆರಳು? ವಿನೂತನ ಅಭಿಯಾನಕ್ಕೆ ಸಾರ್ವಜನಿಕರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ ಸಾರ್ವಜನಿಕರಿಗೆ ಮಾದರಿಯಾಗಿ ನಿಲ್ಲುವುದು ಮತ್ತು ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವುದು ಪ್ರತಿಯೊಬ್ಬ ಜವಾಬ್ದಾರಿಯುತ ಸರ್ಕಾರಿ ಅಧಿಕಾರಿಯ ಮತ್ತು ಸಿಬ್ಬಂದಿಯ ಕರ್ತವ್ಯವಾಗಿದೆ

ನಾವು ನೀಡುವ ಸಣ್ಣ ಕೊಡುಗೆ, ನಾಳಿನ ಪೀಳಿಗೆಗೆ ದೊಡ್ಡ ಆಸರೆಯಾಗಬಲ್ಲದು. ಆದ್ದರಿಂದ, ತಾಲೂಕಿನ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಪುರಸಭೆ ಮುಖ್ಯ ಅಧಿಕಾರಿ ಮನವಿ ಮಾಡಿದ್ದಾರೆ ಪ್ರತಿಯೊಬ್ಬ ಸರ್ಕಾರಿ ಅಧಿಕಾರಿಯು ಕಡ್ಡಾಯವಾಗಿ ಒಂದೊಂದು ಸಸಿ ನಾಟಿ ಮಾಡಬೇಕು ತಮ್ಮ ಮನೆಯ ಮುಂದೆ ಅಥವಾ ಕಚೇರಿ ಆವರಣದಲ್ಲಿ ಕನಿಷ್ಠ ಒಂದು ಸಸಿಯನ್ನು ನೆಡಬೇಕು.

**ಗಿಡ ನೆಡುವ ಕ್ಷಣವನ್ನು ಸೆರೆಹಿಡಿಯಿರಿ**

ನೀವೂ ಗಿಡ ನೆಡುವಾಗ ನಿಮ್ಮ ಸುಂದರವಾದ ಸೆಲ್ಫಿ ಫೋಟೋವನ್ನು ತೆಗೆದುಕೊಳ್ಳಿ ಆ ಮಾಹಿತಿಯನ್ನು ಹಾಗೂ ಫೋಟೋವನ್ನು ಪುರಸಭೆಯ ಅಧಿಕೃತ ವಾಟ್ಸಾಪ್ ಸಂಖ್ಯೆ 94802 29054 ಕ್ಕೆ ಕಳುಹಿಸಬಹುದು

**ನಮ್ಮಿಂದಲೇ ಬದಲಾವಣೆ ಆರಂಭವಾಗಲಿ**

ಸರಕಾರಿ ಅಧಿಕಾರದ ಜವಾಬ್ದಾರಿಯ ಜೊತೆಗೆ, ಪ್ರಕೃತಿಯ ಮೇಲಿನ ನಮ್ಮ ಜವಾಬ್ದಾರಿಯನ್ನೂ ನಿಭಾಯಿಸೋಣ. ಬನ್ನಿ, ನಾವೆಲ್ಲರೂ ಒಂದೊಂದು ಗಿಡ ನೆಟ್ಟು ಸಾರ್ವಜನಿಕರಿಗೆ ಪ್ರೇರಣೆಯಾಗೋಣ ಈ ಹಸಿರು ಕ್ರಾಂತಿಯಲ್ಲಿ ಹೆಮ್ಮೆಯಿಂದ ಭಾಗವಹಿಸ ಬೇಕು ಎಂದು ಮನವಿ ಮಾಡಿದರು


# ಮಹದೇವಪ್ಪಗೆ ಸಚಿವ ಸ್ಥಾನ ನೀಡಿ



ಚಾಮರಾಜನಗರ, ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಡಾ. ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ರಾಮಸಮುದ್ರ ದಲಿತ ಮುಖಂಡರು ಒತ್ತಾಯಿಸಿದರು.

ಹೆಚ್.ಸಿ.ಮಹದೇವಪ್ಪಗೆ ಸಚಿವಸ್ಥಾನ ನೀಡಬೇಕು ಎಂದು ಒತ್ತಾಯಿಸಿ ಇಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುವ ಶೋಷಿತರ ಸ್ವಾಭಿಮಾನದ ಸಮಾವೇಶಕ್ಕೆ ರಾಮಸಮುದ್ರದಿಂದ ಒಂದು ಬಸ್‌ನಲ್ಲಿ ದಲಿತ ಮುಖಂಡರು ತೆರಳಿದರು. ಶೋಷಿತರ ಸ್ವಾಭಿಮಾನದ ಸಮಾವೇಶಕ್ಕೆ ಜಯವಾಗಲಿ, ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವಸ್ಥಾನ ಸಿಗಲಿ ಎಂದು ಘೋಷಣೆ ಕೂಗಿದರು. ಈ ವೇಳೆ ದಲಿತ ಮುಖಂಡ ಪ್ರಸನ್ನ ಮಾತನಾಡಿ, ಡಾ.ಹೆಚ್.ಸಿ.ಮಹದೇವಪ್ಪ ರಾಜ್ಯ ಕಂಡಂತಹ ಅಪ್ರತಿಮ ಅಪ್ಪಟ ಅಂಬೇಡ್ಕರ್‌ವಾದಿ, ಅವರು ಸಮಾಜ ಕಲ್ಯಾಣ ಸಚಿವರಾಗಿ ರಾಜ್ಯದಲ್ಲಿ ಸಂವಿಧಾನ ಬಗ್ಗೆ ಜಾಗೃತಿ ಮೂಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಹೆಚ್.ಸಿ.ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಯ.ರಾಯಣ್ಣ,ದಲಿತ ಮುಖಂಡರಾದ ರಾಮು, ಮೋಹನ್ ಉಪ್ಪಿ. ಸಿದ್ದರಾಜು ಇತರರು ಸಮಾವೇಶಕ್ಕೆ ತೆರಳಿದರು.

# ರಸಗೊಬ್ಬರ ಮಿತ ಬಳಕೆ ಕಾರ್ಯಗಾರ



ಮೈಸೂರು:– ಜಿಲ್ಲಾ ಕೃಷಿ ತರಬೇತಿ ಕೇಂದ್ರ, ನಾಗನಹಳ್ಳಿ ವತಿಯಿಂದ 2026–27ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ನಂಜನಗೂಡು ತಾಲ್ಲೂಕು ಕಸಬಾ ಹೋಬಳಿಯ ಕಸುವಿನಹಳ್ಳಿ ಗ್ರಾಮದಲ್ಲಿ ಕೃಷಿ ಬೆಳೆಗಳಲ್ಲಿ ಬೀಜೋಪಚಾರದ ಮಹತ್ವ ಮತ್ತು ಶಿಫಾರಸ್ಸಿನನ್ವಯ ರಸಗೊಬ್ಬರಗಳ ಮಿತ ಬಳಕೆ ಕುರಿತು ಇಂದು ಒಂದು ದಿನದ ಹೊರಾಂಗಣ ತರಬೇತಿಗೆ ಕಾರ್ಯಕ್ರಮವನ್ನು ಆಯೋಜಿಸಿಲಾಗಿದೆ.

ನಿವೃತ್ತ ವಿಜ್ಞಾನಿಗಳಾದ (ಮಣ್ಣು) ಡಾ. ಜಿ.ಜಿ. ರಾಜಣ್ಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಮಣ್ಣಿನ ಆರೋಗ್ಯ ಮತ್ತು ಶಿಫಾರಸ್ಸಿನನ್ವಯ ರಸಗೊಬ್ಬರಗಳ ಮಿತ ಬಳಕೆ ಬಗ್ಗೆ ಮಾಹಿತಿ ನೀಡಿದರು. ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಕೃಷಿ ಅಧಿಕಾರಿಯಾದ ಮಂಜುಳ ಎಂ.ಬಿ. ಅವರು ಮಾತನಾಡಿ ರೈತರು ರಸಗೊಬ್ಬರಗಳನ್ನು ಬೆಳೆಗಳಿಗೆ ವೈಜ್ಞಾನಿಕವಾಗಿ ಶಿಫಾರಿತ ಪ್ರಮಾಣದಲ್ಲಿ ನೀಡಬೇಕು ಹಾಗೂ ಅತಿಯಾದ ರಾಸಾಯನಿಕಗಳನ್ನು ಬಳಸುವುದರಿಂದ ಮಣ್ಣಿನ ಫಲವತ್ತತೆ ಕುಂಟಿತವಾಗುವುದನ್ನು ತಪ್ಪಿಸಲು ಹೆಚ್ಚು ಪ್ರಮಾಣದಲ್ಲಿ ಸಾವಯವ ಗೊಬ್ಬರ ಹಾಗೂ ಹಸಿರೆಲೆ ಗೊಬ್ಬರಗಳನ್ನು ಬಳಸುವಂತೆ ತಿಳಿಸಿದರು.

ಸುತ್ತೂರಿನ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ. ದಿವ್ಯ. ಮಾತನಾಡಿ ಕೃಷಿ ಬೆಳೆಗಳಲ್ಲಿ ಬೀಜೋಪಚಾರದ ಮಹತ್ವ ಬಗ್ಗೆ ತಿಳಿಸಿದರು. ಡಾ. ಪುಷ್ಪ ಆರ್. ಎನ್. ಸಸ್ಯ ರೋಗ ಶಾಸ್ತ್ರಜ್ಞರು, ಮೈಸೂರು ರವರು ಕೃಷಿ ಬೆಳೆಗಳಲ್ಲಿ ಕಂಡುಬರುವ ಪ್ರಮುಖ ಕೀಟಗಳು ಮತ್ತು ರೋಗಗಳ ಹತೋಟಿ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಕಸಬಾ ಹೋಬಳಿ ಕೃಷಿ ಅಧಿಕಾರಿ ಮಾಧುರಿ ರವರು ಕೃಷಿ ಇಲಾಖೆ ಯೋಜನೆಗಳ ಸಹಾಯಧನದ ಬಗ್ಗೆ, ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ರೈತರು ಮತ್ತು ರೈತಮಹಿಳೆಯರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳೊಂದಿಗೆ ಊಟ ಸವಿದ ಡಿಸಿ

## ವಿವಿಧ ಇಲಾಖೆಗಳಿಗೆ ದಿಢೀರ್ ಜಿಲ್ಲಾಧಿಕಾರಿ ಶ್ರೀರೂಪ ಭೇಟಿ, ಪರಿಶೀಲನೆ

ಚಾಮರಾಜನಗರ: ಜಿಲ್ಲಾಧಿಕಾರಿ ಶ್ರೀರೂಪ ಅವರು ಜಿಲ್ಲೆಯ ವಿವಿಧ ತಾಲೂಕುಗಳ ಹಾಸ್ಟೆಲ್, ವಸತಿ ಶಾಲೆ, ಆಸ್ಪತ್ರೆ, ಇಂದಿರಾ ಕ್ಯಾಂಟಿನ್ ಹಾಗೂ ವಿವಿಧ ಘಟಕಗಳಿಗೆ ಅಧಿಕಾರಿಗಳ ತಂಡದೊಂದಿಗೆ ವ್ಯಾಪಕವಾಗಿ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದರು. ಈ ವೇಳೆ ಸಾರ್ವಜನಿಕ ಸೌಲಭ್ಯಗಳ ಗುಣಮಟ್ಟ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

### ಇಕೋ ಇಂಟರ್ ಪ್ರೈಸಸ್ ಭೇಟಿ ಹಾಗೂ 'ಚಾಮರಸಿ' ಕಾರ್ಯಕ್ರಮದ ಪ್ರಸ್ತಾಪ

ಜಿಲ್ಲಾಧಿಕಾರಿ ಮೊದಲಿಗೆ ಉಮ್ಮತ್ತೂರಿನಲ್ಲಿರುವ ವರ್ಷ ಶ್ರೀಕಂಠಸ್ವಾಮಿ ಅವರ 'ಆಕೃತಿ ಇಕೋ ಫ್ರೆಂಡ್ಲಿ ಎಂಟರ್ ಪ್ರೈಸಸ್' ಘಟಕಕ್ಕೆ ಭೇಟಿ ನೀಡಿ, ಬಾಳೆ ದಿಂಡಿನಿಂದ ತಯಾರಿಸಲಾಗುತ್ತಿರುವ ಚಾಪೆ, ಬುಟ್ಟಿ, ಕೈಚೀಲ, ಹಪ್ಪಳ ಹಾಗೂ ಉಪ್ಪಿನಕಾಯಿ ಸೇರಿದಂತೆ ವಿವಿಧ ಪರಿಸರಸ್ನೇಹಿ ಉತ್ಪನ್ನಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ, ಮಹಿಳೆಯರು ತಯಾರಿಸುವ ಕರಕುಶಲ ವಸ್ತುಗಳ ಮಾರಾಟ ಮತ್ತು ಮಾರುಕಟ್ಟೆ ಉತ್ತೇಜನಕ್ಕಾಗಿ ಜಿಲ್ಲಾಡಳಿತ ಅನುಷ್ಠಾನಗೊಳಿಸುತ್ತಿರುವ 'ಚಾಮರಸಿ' ಕಾರ್ಯಕ್ರಮದಡಿ ಇಲ್ಲಿನ ಮಹಿಳೆಯರಿಗೆ ವಿಶೇಷ ತರಬೇತಿ ನೀಡುವಂತೆ ಪ್ರಸ್ತಾಪಿಸಿ, ಕಾರ್ಯಕ್ರಮಕ್ಕೆ ಸಹಕರಿಸಲು ಆಡಳಿತ ಮಂಡಳಿಯೊಂದಿಗೆ ಸಮಾಲೋಚನೆ ನಡೆಸಿದರು.

### ಬಳೆಮಂಟಪ ವೀಕ್ಷಣೆ ಹಾಗೂ ಇಂದಿರಾ ಕ್ಯಾಂಟಿನ್ ದೂರುಗಳಿಗೆ ಖಡಕ್ ಎಚ್ಚರಿಕೆ

ಬಳಿಕ ಯಳಂದೂರು ಪಟ್ಟಣದ ಐತಿಹಾಸಿಕ ಬಳೆ ಮಂಟಪಕ್ಕೆ ಭೇಟಿ ನೀಡಿ ಅದರ ನಿರ್ವಹಣೆಯನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಸ್ಥಳೀಯರು ನೀಡಿದ ಸಲಹೆಗಳನ್ನು ಸ್ವೀಕರಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ನಂತರ ಅಲ್ಲಿನ ಇಂದಿರಾ ಕ್ಯಾಂಟಿನ್ ಪರಿಶೀಲಿಸಿದ ಅವರು, ಗ್ರಾಹಕರ ಸಂಖ್ಯೆಗೆ ಅನುಗುಣವಾಗಿ ಆಹಾರ ಪೂರೈಕೆಯಾಗುತ್ತಿಲ್ಲ ಎಂಬ ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ



ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಇನ್ನು ಮುಂದೆ ಇಂತಹ ಲೋಪಗಳು ಮರುಕಳಿಸಬಾರದು, ಗ್ರಾಹಕರ ಬೇಡಿಕೆಗೆ ತಕ್ಕಂತೆ ಶುಚಿ ಹಾಗೂ ಗುಣಮಟ್ಟದ ಆಹಾರವನ್ನು ನಿಯಮಿತವಾಗಿ ಪೂರೈಸಬೇಕು ಎಂದು ಕಟ್ಟುನಿಟ್ಟಾಗಿ ಆದೇಶಿಸಿದರು. ಇದೇ ವೇಳೆ ಯಳಂದೂರಿನಲ್ಲಿ ನಿರ್ಮಾಣ ಹಂತದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ಹಾಸ್ಟೆಲ್ ಕಟ್ಟಡ ಕಾಮಗಾರಿಯನ್ನು ತ್ವರಿತವಾಗಿ ಮುಗಿಸಿ ವಿದ್ಯಾರ್ಥಿಗಳ ವಾಸ್ತವ್ಯಕ್ಕೆ ಅನುಕೂಲ ಮಾಡಿಕೊಡುವಂತೆ ಸೂಚಿಸಿದರಲ್ಲದೆ, ಘನತ್ಯಾಜ್ಯ ವಿಂಗಡಣಾ ಘಟಕಕ್ಕೆ ಭೇಟಿ ನೀಡಿ ಸ್ವಚ್ಛತೆಗೆ ಆದ್ಯತೆ ನೀಡುವಂತೆ ತಿಳಿಸಿದರು.

### ಉಪವಿಭಾಗ ಆಸ್ಪತ್ರೆ ಪರಿಶೀಲನೆ ಹಾಗೂ ಹೆಚ್.ಐ.ವಿ ಜಾಗೃತಿಗೆ ಸಲಹೆ

ಕೊಳ್ಳೇಗಾಲ ಪಟ್ಟಣದ ಉಪವಿಭಾಗ ಆಸ್ಪತ್ರೆಯ ಎ.ಆರ್.ಟಿ ಕೇಂದ್ರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಶ್ರೀರೂಪ ಅವರು, ಹೆಚ್.ಐ.ವಿ ಸೋಂಕಿತರಿಗೆ ನೀಡಲಾಗುತ್ತಿರುವ ಚಿಕಿತ್ಸೆ ಹಾಗೂ ಔಷಧಗಳ ದಾಸ್ತಾನನ್ನು ಕೂಲಂಕಷವಾಗಿ ಪರಿಶೀಲಿಸಿದರು. ಚಿಕಿತ್ಸೆ ಪಡೆದಿರುವ ಸೋಂಕಿತರ ಮಾಹಿತಿ ಪಡೆದ ಅವರು, ಪ್ರಸ್ತುತ ದಿನಗಳಲ್ಲಿ ಯುವಜನರಲ್ಲಿ ಹೆಚ್.ಐ.ವಿ ಮತ್ತು ಏಡ್ಸ್ ಮುನ್ನೆಚ್ಚರಿಕೆ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ. ಇದಕ್ಕಾಗಿ ಎಲ್.ಇ.ಡಿ ದೃಶ್ಯಾವಳಿಗಳಂತಹ ಆಧುನಿಕ ಮಾಧ್ಯಮಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಿ ಎಂದರು.

ಜಿಲ್ಲಾಧಿಕಾರಿಗಳ ಈ ವ್ಯಾಪಕ ಭೇಟಿಯ ಸಂದರ್ಭದಲ್ಲಿ ತಹಶೀಲ್ದಾರ್‌ಗಳಾದ ಗಿರಿಜಾ, ಬಸವರಾಜು, ಚೈತ್ರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮುನಿರಾಜು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವಿಶ್ವನಾಥ್ ಉಪಸ್ಥಿತರಿದ್ದರು. ಇವರೊಂದಿಗೆ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ರಮೇಶ್ ಕುಮಾರ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ವೆಂಕಟೇಶ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ್ ಹಾಗೂ ಕೊಳ್ಳೇಗಾಲ ತಾಲೂಕು ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಕೆ.ಎಲ್. ಲೋಕೇಶ್ವರಿ ಸೇರಿದಂತೆ ಆಯಾ ತಾಲೂಕುಗಳ ವಿವಿಧ ಇಲಾಖೆಗಳ ಪ್ರಮುಖ ಅಧಿಕಾರಿಗಳು ಹಾಜರಿದ್ದರು.

### ಸರತಿ ಸಾಲಿನಲ್ಲಿ ನಿಂತು ಭೋಜನ, ಸಂವಾದ

**ತಮ್ಮ ಭೇಟಿಯ ಅತ್ಯಂತ ವಿಶೇಷ ಭಾಗವಾಗಿ ತಿಮ್ಮರಾಜಿಪುರದಲ್ಲಿರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಅಲ್ಲಿನ ಭೋಜನಾಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ಸ್ವತಃ ಸರತಿ ಸಾಲಿನಲ್ಲಿ ನಿಂತು ಊಟ ಹಾಕಿಸಿಕೊಂಡು, ಅವರೊಂದಿಗೇ ನೆಲದ ಮೇಲೆ ಕುಳಿತು ಮಧ್ಯಾಹ್ನದ ಭೋಜನ ಸವಿದರು. ಬಳಿಕ ಮಕ್ಕಳೊಂದಿಗೆ ಆಪ್ತವಾಗಿ ಸಂವಾದ ನಡೆಸಿ, ವಸತಿ ಶಾಲೆಯಲ್ಲಿ ಎಲ್ಲಾ ಸೌಲಭ್ಯಗಳಿದ್ದು, ಓದಿಗೆ ಯಾವುದೇ ತೊಂದರೆಯಿಲ್ಲ. ಯಾವುದೇ ಒತ್ತಡವಿಲ್ಲದೆ ಏಕಾಗ್ರತೆಯಿಂದ ವ್ಯಾಸಂಗ ಮಾಡಿ ಮುಂಬರುವ ಪರೀಕ್ಷೆಗಳಲ್ಲಿ ಅತ್ಯುತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾಗಬೇಕು ಎಂದು ಹುರಿದುಂಬಿಸಿದರು. ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳೂ ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಮುಖ್ಯವಾಗಿದ್ದು, ಕ್ರೀಡಾ ಸಾಧಕರಿಗೆ ಉದ್ಯೋಗಗಳಲ್ಲೂ ಪ್ರತ್ಯೇಕ ಆದ್ಯತೆ ಸಿಗಲಿದೆ ಎಂದು ತಿಳಿಸಿದರು. ಇದೇ ವೇಳೆ ವಸತಿ ಶಾಲೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು. ತದನಂತರ ಮಂಗಲದ ಏಕಲವ್ಯ ಮಾದರಿ ವಸತಿ ಶಾಲೆಗೂ ಭೇಟಿ ಕೊಟ್ಟು ಅಲ್ಲಿನ ಶಿಕ್ಷಣ ಮತ್ತು ಕೌಶಲ್ಯ ತರಬೇತಿ ಚಟುವಟಿಕೆಗಳನ್ನು ವೀಕ್ಷಿಸಿದರು.**

# ಚಿನ್ನತಂಬಿ ವಿರುದ್ಧ ಕ್ರಮಕ್ಕೆ ದೂರು

ಮೈಸೂರು: ನಗರದಲ್ಲಿ ಸುಮಾರು 500 ಕೋಟಿ ರೂ.ಗಳ ಬಂಗಾರದ ಅವ್ಯವಹಾರಕ್ಕೆ ಸಂಬಂಧಿಸಿದ ಆರೋಪಿ ಸೌಂದರ್ ರಾಜ್ ಅಲಿಯಾಸ್ ಚಿನ್ನತಂಬಿ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ಇಡಿಗೆ ಕರ್ನಾಟಕ ರಾಷ್ಟ್ರ ಸಮಿತ ಪಕ್ಷ ದೂರು ಸಲ್ಲಿಸಿದೆ ಎಂದು ರಾಜ್ಯ ಸಂಘಟನಾ ಕಾರ್ಯದರ್ಶಿ ರವಿಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈತ 310ಕ್ಕೂ ಹೆಚ್ಚು ಮಂದಿಗೆ ವಂಚಿಸಿದ್ದು, ತಮಗೆ ನ್ಯಾಯ ದೊರಕಿಸಿಕೊಡಬೇಕೆಂದು ಇವರೆಲ್ಲ ದೂರು ನೀಡಿದ್ದರೂ ಪೊಲೀಸರು ಕೇವಲ ನಾಲ್ಕು ದುರ್ಬಲ ಎಫ್‌ಆರ್‌ಗಳನ್ನು ದಾಖಲಿಸಿ, ಕೇವಲ ಸಿವಿಲ್ ವಿವಾದವನ್ನಾಗಿ ಬಿಂಬಿಸಲು ಯತ್ನಿಸುತ್ತಿದ್ದಾರೆ. ಅಲ್ಲದೆ, ದೂರು ಸ್ವೀಕರಿಸುವ ಬದಲು ಸಂತ್ರಸ್ತರ ಮೇಲೆ ಒತ್ತಡ ಹೇರಿ ರಾಜಿ ಪಂಚಾಯಿತಿ ಮಾಡಿಸಿ ಹಣ ವರ್ಗಾವಣೆ ಮಾಡುವ ಮಧ್ಯವರ್ತಿ ಕೆಲಸ ಮಾಡುತ್ತಿದ್ದಾರೆಂದು ದೂರಿದರು. ಹೀಗಾಗಿ ಚಿನ್ನತಂಬಿ ವಿರುದ್ಧ ಪೊಲೀಸ್ ಆಯುಕ್ತರು ಹಾಗೂ ಸಿಸಿಬಿ ತಂಡ ನಡೆಸುತ್ತಿರುವ ತನಿಖಾ ವೈಖರಿ ಬಗ್ಗೆ ಅಸಮಾಧಾನವಿದೆ. ಹೀಗಾಗಿ ಇಡಿಗೆ ಅಧಿಕೃತ ದೂರು ಸಲ್ಲಿಸಲಾಗಿದೆ. ಈ ಹಗರಣದ ಸೂತ್ರಧಾರ ಚಿನ್ನತಂಬಿ ನಾಯಕತ್ವದ ಸಂಸ್ಥೆಗಳು, ಸಾರ್ವಜನಿಕರ ಚಿನ್ನವನ್ನು ಅಕ್ರಮವಾಗಿ ಕರಗಿಸಿ ಹಣ ಸಂಪಾದಿಸಿವೆ. ಈ ಕಪ್ಪು ಹಣದ ವ್ಯವಹಾರ ಹಾಗೂ ಭ್ರಷ್ಟಾಚಾರದ ಜಾಲವನ್ನು ಭೇದಿಸಲು ತನಿಖೆಯನ್ನು ಇಡಿ ವಹಿಸಿಕೊಳ್ಳಬೇಕೆಂದು ಕೋರಲಾಗಿದೆ ಎಂದು ವಿವರಿಸಿದರು.

ನಾಗರಾಜ್, ಚಂದ್ರಕಲಾ, ನಾಗಲಕ್ಷ ?ಮಮ್ಮ, ಆರ್. ರವೀಂದ್ರ, ಜಯಮ್ಮ ಇದ್ದರು.

# ಅನಿರ್ದಿಷ್ಟವಧಿ ಧರಣಿ 4ನೇ ದಿನಕ್ಕೆ ಮುಕ್ತಾಯ

ಕೊಳ್ಳೇಗಾಲ. ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಾಲ್ಲೂಕು ಗುಂಡಾಲ್ ಜಲಾಶಯದ ಹಳೇ ಸ್ಥಿರ ಅಚ್ಚುಕಟ್ಟು ವ್ಯಾಪ್ತಿಯ ರೈತರ ಹಿತರಕ್ಷಣಾ ಸಂಘದ ಅನಿರ್ದಿಷ್ಟವದಿ ಧರಣಿ ನಾಲ್ಕನೇ ದಿನಕ್ಕೆ ಮುಕ್ತಾಯಗೊಂಡಿತ್ತು.

ಪಟ್ಟಣದ ಉಪವಿಭಾಗ ಕಚೇರಿಯ ಮುಂದೆ ರೈತರ ಹಿತರಕ್ಷಣಾ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಟಗರಪುರದಿಂದ ಗೋಪಿನಾಥಂವರೆಗೂ ಗ್ರಾಮಠಾಣಾ ಗುರುತು ಮಾಡಿ ಇ ಸ್ವತ್ತು ನೀಡುವುದು, ಕಾಲುವೆಗಳಿಗೆ ಗಲೀಜು ನೀರು ಹಾಗೂ ಯುಜಿಡಿ ನೀರು ಹರಿಸುವುದನ್ನು ತಡೆಯುವುದು ಸೇರಿದಂತೆ ಹಲವು ಸಮಸ್ಯೆಗಳ ಬಗೆಹರಿಸುವಂತೆ ನಡೆಸುತ್ತಿದ್ದ ಪ್ರತಿಭಟನೆಯನ್ನು ಕೈಬಿಡಲಾಯಿತು.

ಸ್ಥಳಕ್ಕೆ ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ ಹಾಗೂ ತಹಶಿಲ್ದಾರ್ ಬಸವರಾಜು ರವರು ಆಗಮಿಸಿ, ಕಾಲುವೆಗಳ ಕಾಮಗಾರಿಗಳ ಅಭಿವೃದ್ಧಿ ಪಡಿಸುವುದು ಹಾಗೂ ಟಗರಪುರದಿಂದ ಗೋಪಿನಾಥ್ ರವರಿಗೆ ಗ್ರಾಮಾಠಾಣಾ ಗುರುತು ಮಾಡಿ ಇ ಸ್ವತ್ತು ಮಾಡಿಸಿಕೊಡುವ ವಿಚಾರವಾಗಿ ಇತರೆ ಸಮಸ್ಯೆಗಳ ಕುರಿತು ಇನ್ನೂ ಹದಿನೈದು ದಿನಗಳೊಳಗೆ ಜಿಲ್ಲಾಧಿಕಾರಿಗಳ ಸಭೆ ಕರೆದು ಹಂತಹಂತವಾಗಿ ಬಗೆಹರಿಸಲು ಚರ್ಚಿಸಲಾಗುವುದು ಎಂದು ಪ್ರತಿಭಟನಾಕಾರರಿಗೆ ನೀಡಿದ್ದ ಭರವಸೆ ಮೇರೆಗೆ ಪ್ರತಿಭಟನೆ ಕೈಬಿಡಲಾಯಿತು.




ಪ್ರತಿಭಟನೆಯಲ್ಲಿ ಹಿತರಕ್ಷಣಾ ಸಂಘದ ಅಧ್ಯಕ್ಷ ದಶರಥ, ಕಾರ್ಯದರ್ಶಿ ರಾಮಕೃಷ್ಣ ರೈತ ಸಂಘದ ಅಧ್ಯಕ್ಷ ಸರಗೂರು ನಾಗರಾಜು ಮೋಳೆ ರಾಜು, ಸರಗೂರು ವೀರಭದ್ರ ಸ್ವಾಮಿ, ಅಣಗಳ್ಳಿ ಬಸವರಾಜು, ಹಿತ್ತಲದೊಡ್ಡಿ ನಾಗರಾಜು, ರೈತ ಮುಖಂಡರು ಚಲುವನಹಳ್ಳಿ ಮಲ್ಲಿಕಾರ್ಜುನಸ್ವಾಮಿ, ಕರ್ನಾಟಕ ರಕ್ಷಣಾ ಸೇನೆ ಅಧ್ಯಕ್ಷರು ಮೇಘರಾಜು ಎಂ. ಪಾಲಾಕ್ಷ, ಭೀಮನಗರ ಬಸವರಾಜು, ತೇರಂಬಳ್ಳಿ ಶಿವಮೂರ್ತಿ ಹಾಗೂ ಇತರರು ಇದ್ದರು.

**ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗ ಕಾರ್ಯಕ್ರಮ**

# ಜೂ.15ರಂದು ಪ್ರೈಡ್ ಫೆಸ್ಟಿವಲ್ ಸಂಜೆ ಕಾರ್ಯಕ್ರಮ

ಚಾಮರಾಜನಗರ: ಕರ್ನಾಟಕ ಸ್ವಾಭಿಮಾನ ಹಬ್ಬದ ಅಂಗವಾಗಿ ಲೈಂಗಿಕ ಕಾರ್ಮಿಕರು, ಲೈಂಗಿಕ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳ ಒಕ್ಕೂಟ ಮತ್ತು ಸಮತಾ ಸೊಸೈಟಿಯ ಸಹಯೋಗದಲ್ಲಿ ಚಾಮರಾಜನಗರದಲ್ಲಿ ಮೊಟ್ಟ ಮೊದಲ ಬಾರಿಗೆ ಜೂ.15 ರಂದು ಪ್ರೈಡ್ ಫೆಸ್ಟಿವಲ್ ಮತ್ತು ನಮ್ಮ ಅಸ್ತಿತ್ವ ಸಂಜೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮತಾ ಸೊಸೈಟಿಯ ಅಧ್ಯಕ್ಷರಾದ ದೀಪಾ ಬುದ್ಧೆ ತಿಳಿಸಿದರು.




ನಗರದ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮೂಂಭಾಗ ಅಂದು ಬೆಳಗ್ಗೆ 11 ಗಂಟೆಗೆ ಪ್ರಾರಂಭವಾಗುವ ಮೆರವಣಿಗೆಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ.ಪ್ರಭಾವತಿ ಅವರು ಚಾಲನೆ ನೀಡುವರು. ಬಳಿಕ ಶ್ರೀ ಭುವನೇಶ್ವರಿ ವೃತ್ತ, ಡಿವಿಯೇಷನ್ ರಸ್ತೆ, ಕೆಎಸ್ ಆರ್ ಟಿಸಿ ಬಸ್ ನಿಲ್ದಾಣದ ರಸ್ತೆ, ಗುಂಡ್ಲುಪೇಟೆ ವೃತ್ತ, ದೊಡ್ಡಂಗಡಿ, ಚಿಕ್ಕಂಗಡಿ ಬೀದಿ, ಸಂತೇಮರಹಳ್ಳಿ ವೃತ್ತ, ಶ್ರೀ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮೂಲಕ ಸಾಗಿ ವೇದಿಕೆ ಕಾರ್ಯಕ್ರಮ ನಡೆಯುವ ಡಾ.ರಾಜ್ ಕುಮಾರ್ ಜಿಲ್ಲಾ ರಂಗ ಮಂದಿರದಲ್ಲಿ ಅಂತ್ಯವಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ನಮ್ಮ ಪ್ರೈಡ್ ಮೆರವಣಿಗೆಯ ನಂತರ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ನಮ್ಮ ಅಸ್ತಿತ್ವದ ಸಂಜೆ ಕಾರ್ಯಕ್ರಮ ನಡೆಯಲಿದೆ. ಬಳಿಕ ರಾಜ್ಯಮಟ್ಟದ ಕವಿಗೋಷ್ಠಿಯನ್ನು ಆಯೋಜಿಸಲಾಗಿದೆ. ಲೈಂಗಿಕ ಅಲ್ಪಸಂಖ್ಯಾತರು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯಾದ್ಯಂತ 250–300 ಲೈಂಗಿಕ ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು. ಲೈಂಗಿಕ ಅಲ್ಪಸಂಖ್ಯಾತ ಸಮುದಾಯದ ಸದಸ್ಯ ಯಶ್ ಮಾತನಾಡಿ, ಪ್ರತಿಯೊಂದು ಸಮುದಾಯದವರಿಗೂ ಇತಿಹಾಸ ಇರುವಂತೆ ನಮ್ಮ ಸಮುದಾಯಕ್ಕೂ ಒಂದು ಇತಿಹಾಸವಿದೆ. ಅದರಂತೆ ಜೂನ್ ತಿಂಗಳಲ್ಲಿ ನಮ್ಮ ಹಕ್ಕುಗಳಿಗಾಗಿ ಬೇರೆ ಬೇರೆ ಕಾರ್ಯಕ್ರಮಗಳನ್ನು ವಿಶ್ವದಾದ್ಯಂತ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. 10–15 ವರ್ಷಗಳಿಂದ ರಾಜ್ಯದಲ್ಲಿ ಸ್ವಾಭಿಮಾನ ಹಬ್ಬ ಎಂಬ ಕಾರ್ಯಕ್ರಮವನ್ನು ಮಾಡಿಕೊಂಡು ಬರುತ್ತಿದ್ದೇವೆ. ಪ್ರತಿಯೊಂದು ಜಿಲ್ಲೆಯಲ್ಲೂ ಮಾಡುವ ಉದ್ದೇಶದಿಂದ ಚಾಮರಾಜನಗರದಲ್ಲಿ ಶುರು ಮಾಡುತ್ತಿದ್ದೇವೆ. ರಾಷ್ಟ್ರ ಮಟ್ಟದಲ್ಲಿ ಬೆಂಗಳೂರು ಪ್ರೈಡ್ ಎಂದು ಆಚರಣೆ ಮಾಡುತ್ತಿದ್ದೇವೆ ಎಂದರು. ಕೇಂದ್ರ ಸರ್ಕಾರ ಲೈಂಗಿಕ ಅಲ್ಪಸಂಖ್ಯಾತರ–2026 ರ ಕಾಯ್ದೆಗೆ ತಿದ್ದುಪಡಿ ತಂದಿದ್ದು, ಸಮುದಾಯದವರ ಜೊತೆ ಚರ್ಚಿಸದೇ ತರಾತುರಿಯಲ್ಲಿ ಬಿಲ್ ತಂದಿದ್ದಾರೆ. ಇದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ. ನಾವು ಮೆಡಿಕಲ್ ಬೋರ್ಡ್ ಮುಂದೆ ನಮ್ಮ ಜೆಂಡರ್ ಗುರುತಿಸುವುದು ಎಷ್ಟು ಸರಿ? ಕರ್ನಾಟಕದಲ್ಲಿ ಯಾವುದೇ ಕಾರಣಕ್ಕೂ ಈ ಕಾನೂನನ್ನು ಜಾರಿ ಮಾಡಬಾರದು ಎಂದು ಮನವಿ ಮಾಡಿದರು.ಗೋಷ್ಠಿಯಲ್ಲಿ ಸಮತಾ ಸೊಸೈಟಿಯ ಸದಸ್ಯರಾದ ಸುಮಾ, ದೊಡ್ಡಸ್ವಾಮಿ, ಮೈಕಲ್ ಮದನ್ ಕಾಮರಾಜು, ವೆಂಕಟೇಶ್ ಹಾಜರಿದ್ದರು.

# ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ

ಗುಂಡ್ಲುಪೇಟೆ: ಕೆಆರ್ ಐ ಡಿ ಎಲ್ ಹಾಗೂ ಪೌರಾಡಳಿತ ಇಲಾಖೆಯ ವತಿಯಿಂದ 2025–25 ಸಾಲಿನಲ್ಲಿ ಪಟ್ಟಣದ ಅಭಿವೃದ್ಧಿಗೆ ?5ಕೋಟಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆಳಿಗೆ ಗುದ್ದಲಿ ಪೂಜೆ ನೆರವೇರಿಸಿದರು

ಪಟ್ಟಣದ ಎನ್ ಎಪಿ ಕ್ವಾಟ್ರಸ್ ಸರ್ಕಲ್ ನಿಂದ ಕ್ಯಾಲಿಕಟ್ ರಸ್ತೆ ಊಟಿ ವೃತ್ತದವರೆಗೆ ಎರಡೂ ಕಡೆ ಆಯ್ದು ಭಾಗಗಳಲ್ಲಿ ಎರಡು ಕೋಟಿ ವೆಚ್ಚದಲ್ಲಿ ಚರಂಡಿ ಹಾಗೂ ಫುಟ್ ಪಾತ್ ಅಭಿವೃದ್ಧಿ ಪಡಿಸುವ ಕಾಮಗಾರಿಗೆ, ಹಾಗೂ 23 ನೇ ವಾರ್ಡ್ ಕೆಇಬಿ ಪಕ್ಕದ ಓಂಕಾರ್ ಮನೆಯಿಂದ ಒಂದು ಕೋಟಿ ಎಪ್ಪತ್ತೈದು ಲಕ್ಷ ವೆಚ್ಚದಲ್ಲಿ ದುಂದಾಸನಪುರ ರಸ್ತೆಯವರಿಗೆ ದೊಡ್ಡಮಳೆನೀರು ಚರಂಡಿ ಕಾಮಗಾರಿ, ಹಾಗೂ ಕೆಇಬಿ ಪಕ್ಕದ ರಸ್ತೆಯಿಂದ ದುಂದಾಸನಪುರ ರಸ್ತೆ ವರೆಗೆ 75 ಲಕ್ಷ ವೆಚ್ಚದಲ್ಲಿ ಡಾಂಬಾರಿಕರಣ, ಸಾರ್ವಜನಿಕ ಶೌಚಾಲಯದಿಂದ 50 ಲಕ್ಷ ವೆಚ್ಚದಲ್ಲಿ ದರ್ಶನ್ ಬಡಾವಣೆ ಯಿಂದ ದುಂದಾಸನಪುರ ಬರೆಗೆ ಸಿಸಿ ಚರಂಡಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ. ನಂತರ ಮಾತನಾಡಿದ ಶಾಸಕ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ಮಖ್ಯಮಂತ್ರಿಯಾಗಿದಾಗ ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ವಿಶೇಷ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ ವಿರೋಧ ಪಕ್ಷದಿಂದ ಅಭಿವೃದ್ಧಿ ಕಾಮಗಾರಿ ನಡೆಯುತ್ತಿಲ್ಲ ಎಂದು ಆರೋಪ ಮಾಡುತ್ತಿದ್ದಾರೆ ಯುಜಿಡಿ ಅಭಿವೃದ್ಧಿ ಗೆ ಬಜೆಟ್ ನಲ್ಲಿಯೇ ನೀಡಿದ್ದು ಸುಂದರ ಗುಂಡ್ಲುಪೇಟೆ ನಿರ್ಮಾಣಕ್ಕೆ ನಮ್ಮನಡೆ ಎಂದರುಗುಂಡ್ಲುಪೇಟೆ ಯಲ್ಲಿ ಸಂಚಾರಿ ಪೊಲೀಸ್ ಠಾಣೆ ನೀಡಿದ್ದು ಇದರಿಂದ ಸಂಚಾರ ಸಮಸ್ಯೆ ಹಾಗೂ ಅಪಘಾತ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ ಪಟ್ಟಣದ ಅಭಿವೃದ್ಧಿ ಗೆ ನಮ್ಮ ಸರ್ಕಾರದಿಂದ ಹೆಚ್ಚಿನ ಅನುದಾನ ತರುವ ನಿಟ್ಟಿನಲ್ಲಿ ಕೆಲಸ ಮಾಡುವುದಾಗಿ ತಿಳಿಸಿದರು. ಚಾಮುಲ್ ನಿರ್ದೇಶಕ ನಂಜುಂಡಪ್ರಸಾದ್, ಪಿ ಬಿ ರಾಜಶೇಖರ್, ಕೆಎಂ ಮಹದೇವಸ್ವಾಮಿ, ಬಸವಣ್ಣ ಕೊಡಸೋಗೆ, ಮಧುಶಂಕರ್, ಮಧುಸೂದನ್, ಅಣ್ಣಯ್ಯಸ್ವಾಮಿ,ಎಚ್ ಎನ್ ಬಸವರಾಜು, ಶ್ರೀನಿವಾಸ್ ಕಣ್ಣಪ್ಪ ಹಿಂದೂಸ್ತಾನ್ ಮಧು, ಪುರಸಭೆ ಮುಖ್ಯಾಧಿಕಾರಿ ಸರವಣ, ಎಇಇ ಪ್ರಸನ್ನಕುಮಾರ್, ಮತ್ತಿತರರಿದ್ದರು

## ಸಂಕ್ಷಿಪ್ತ ಸುದ್ದಿ

### 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ (ರಿ), ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ–2026 ಕಾರ್ಯಕ್ರಮವನ್ನು ಇದೇ ಜೂ. 12ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಪಂಚಾಯತ್ ಭವನದ ವರೆಗೆ ಜಾಗೃತಿ ಜಾಥಾ ಮತ್ತು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ನಂತರ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಯಶವಂತ್ ವಿ. ಗುರುಕರ್ ಅವರು ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಅಧ್ಯಕ್ಷತೆ ವಹಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಪ್ರತಿಜ್ಞಾ ವಿಧಿ ಬೋಧಿಸುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್‌ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಉಪ ವಿಭಾಗಾಧಿಕಾರಿ ಬಿನೋಯ್, ರಾಮನಗರ ತಾಲ್ಲೂಕು ತಹಶೀಲ್ದಾರರಾದ ತೇಜಸ್ವಿನಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಾದ ಸ್ವಾಮಿ ಎಂ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ದಿನೇಶ್ ಜೆ.ಆರ್., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ನಾಗರತ್ನ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜಿನಿ, ಕಾರ್ಮಿಕ ನಿರೀಕ್ಷರಾದ ಪ್ರದೀಪ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

### ಅರ್ಜಿ ಆಹ್ವಾನ

**ರಾಮನಗರ:** ಮೈಸೂರು ವಿಶ್ವವಿದ್ಯಾನಿಲಯದ ಪ್ರವೇಶಾತಿ ಅಧಿಸೂಚನೆಯನ್ವಯ ಬ್ಯಾಚುಲರ್ ಆಫ್ ವಿಜುಯಲ್ ಆರ್ಟ್ಸ್ (ಬಿ.ವಿ.ಎ.) ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ರಾಜ್ಯ ಶಿಕ್ಷಣ ಪದ್ಧತಿ (ಸ್ಟೇಟ್ ಎಜುಕೇಶನ್ ಪಾಲಿಸಿ) ಯಂತೆ 2026–27 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಬಿ.ವಿ.ಎ. ದೃಶ್ಯ ಕಲೆಯಲ್ಲಿ ಸ್ನಾತಕ ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿ.ಯು.ಸಿ./ಸಮಾನಾಂತರ ಕೋರ್ಸುಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ (ಯುಯುಸಿಎಂಎಸ್) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆನ್‌ಲೈನ್ https://uucms.karnataka.gov.in ಮೂಲಕ ಜೂ.12ರೊಳಗೆ ಅರ್ಜಿ ಸಲ್ಲಿಸಬೇಕು. ಈ ಪದವಿಯಲ್ಲಿ ಚಿತ್ರಕಲೆ (painting), ²⁰àPÀ¯É (Sculpture), ಗ್ರಾಫಿಕ್ಸ್ (ಅಚ್ಚುಕಲೆ) (Graphics), ಅನ್ವಯಕಲೆ (Applied Art), ಕಲಾ ಇತಿಹಾಸ (Art History)ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ (Photography & Photojournalism)ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಪ್ರವೇಶಾತಿ ಕೋರಿ ಅರ್ಜಿಸಲ್ಲಿಸಿದ ಅಭ್ಯರ್ಥಿಗಳನ್ನು ಆಯ್ಕೆಮಾಡಲು ಅರ್ಹತಾ ಪರೀಕ್ಷೆ ಮತ್ತು ವೈಯಕ್ತಿಕ ಸಂದರ್ಶನವನ್ನು ಜೂ. 15ರಂದು ನಡೆಸಲಾಗುವುದು.

ಹೆಚ್ಚಿನ ಮಾಹಿತಿಗೆ ಮೈಸೂರಿನ ಸಿದ್ಧಾರ್ಥನಗರದ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಅಥವಾ ದೂ. ಸಂಖ್ಯೆ 0821–2438931 ಅನ್ನು ಸಂಪರ್ಕಿಸುವಂತೆ ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಯನಗರದಲ್ಲಿ ಸೂರ್ಯಗಾಯತ್ರಿ ಸಂಗೀತ ಕಾರ್ಯಾಗಾರ


**ಸೂರ್ಯಗಾಯತ್ರಿ ಅವರಿಂದ ನೇರ ಸಂಗೀತ ಕಲಿಕೆ**

**ಜೂನ್ 14ರಂದು ವೇದಿಕೆ ಹಂಚಿಕೊಳ್ಳುವ ಅವಕಾಶ**

**ಪರಮ್ ಕಲ್ಚರ್ ಹಾಗೂ ಹರಿವಂಶ ಗ್ರೂಪ್ ಸಹಯೋಗ**

**ಪ್ರವೇಶ ದರದಲ್ಲಿ ಉಚಿತ ಕನ್ಸರ್ಟ್ ಪಾಸ್**

ಬೆಂಗಳೂರು: ಕಲಾಭಿಮಾನಿಗಳಿಗೆ ಮತ್ತು ಉದಯೋನ್ಮುಖ ಗಾಯಕರಿಗೆ ಇಲ್ಲೊಂದು ಸುವರ್ಣಾವಕಾಶ ಎದುರಾಗಿದೆ. 'ಪರಮ್ ಕಲ್ಚರ್' ಹಾಗೂ 'ಹರಿವಂಶ ಗ್ರೂಪ್' ಸಹಯೋಗದೊಂದಿಗೆ ಜಯನಗರದ ಯುವಕ ಸಂಘದಲ್ಲಿ ಜೂನ್ 12 ಮತ್ತು 13ರಂದು ಸಂಜೆ 6 ರಿಂದ 8 ಗಂಟೆಯವರೆಗೆ ಎರಡು ದಿನಗಳ ವಿಶೇಷ ಪ್ರಿ–ಕನ್ಸರ್ಟ್ ಸಂಗೀತ ಕಾರ್ಯಾಗಾರ ?ಭಜ ಮನ?ವನ್ನು (ಕಡಿಜ– ಅಂಟಿಛಿಜಡಿಣ ತಿಂಡಿಞ್ಚಂಠಿ) ಹಮ್ಮಿಕೊಳ್ಳಲಾಗಿದೆ. ಜಾಗತಿಕ ಮಟ್ಟದಲ್ಲಿ ಭಕ್ತಿ ಸಂಗೀತದ ಮೂಲಕ ಸನ್ಸೇಷನ್ ಸೃಷ್ಟಿಸಿರುವ ಖ್ಯಾತ ಯುವ ಶಾಸ್ತ್ರೀಯ ಗಾಯಕಿ ಸೂರ್ಯಗಾಯತ್ರಿ ಅವರು ಈ ಕಾರ್ಯಾಗಾರವನ್ನು ಮುನ್ನಡೆಸಲಿದ್ದಾರೆ.



ಈ ಕಾರ್ಯಾಗಾರದಲ್ಲಿ ಭಾಗವಹಿಸುವ ಆಸಕ್ತರಿಗೆ ಸೂರ್ಯಗಾಯತ್ರಿ ಅವರಿಂದ ನೇರವಾಗಿ ಭಜನೆಗಳು, ದಾಸರಪದಗಳು ಮತ್ತು ಅಭಂಗ್‌ಗಳನ್ನು ಕಲಿಯುವ ಅಪೂರ್ವ ಅವಕಾಶ ಸಿಗಲಿದೆ. ಜೊತೆಗೆ, ಅವರ ಕಲಾ ಜರ್ನಿ ಮತ್ತು ಭಕ್ತಿ ಸಂಗೀತದ ಅನುಭವಗಳನ್ನು ನೇರವಾಗಿ ಅವರಿಂದಲೇ ಕೇಳಿ ತಿಳಿಯಬಹುದು. ಒಟ್ಟು 4 ಗಂಟೆಗಳ ಕಾಲ ನೇರ ಕಲಿಕೆ ಇರಲಿದ್ದು, ಕಲಿಕೆಗೆ ಅಗತ್ಯವಿರುವ ವಿಶೇಷ ಸಾಹಿತ್ಯ ಹಾಗೂ ನೋಟ್ಸ್‌ಗಳನ್ನೂ ಇಲ್ಲಿ ಪಡೆಯಬಹುದಾಗಿದೆ.

**ವೇದಿಕೆ ಹಂಚಿಕೊಳ್ಳುವ ಸುವರ್ಣಾವಕಾಶ:** ಕಾರ್ಯಾಗಾರವು ಕೇವಲ ಕಲಿಕೆಗೆ ಸೀಮಿತವಾಗಿರದೆ, ಪ್ರದರ್ಶನಕ್ಕೂ ದಾರಿ ಮಾಡಿಕೊಡಲಿದೆ. ಇಲ್ಲಿ ಭಾಗವಹಿಸುವ ಪ್ರತಿಭಾವಂತ ಕಲಾಭಿಮಾನಿಗಳನ್ನು ಜೂನ್ 14ರಂದು ಸಂಜೆ 5 ಗಂಟೆಯಿಂದ ಮೀನಾಕ್ಷಿ ರಂಗಮಂಚದಲ್ಲಿ ನಡೆಯಲಿರುವ ಭವ್ಯ ಲೈವ್ ಕನ್ಸರ್ಟ್‌ನಲ್ಲಿ ಸೂರ್ಯಗಾಯತ್ರಿ ಅವರೊಂದಿಗೆ ವೇದಿಕೆ ಹಂಚಿಕೊಂಡು ಹಾಡಲು ಪರಿಗಣಿಸುವ ಬಂಪರ್ ಚಾನ್ಸ್ ಇರಲಿದೆ.

**ಉಚಿತ ಕನ್ಸರ್ಟ್ ಪಾಸ್ ಲಭ್ಯ:** ಈ ಕಾರ್ಯಾಗಾರದಲ್ಲಿ ಕೇವಲ ಕಲಿಕೆ ಮಾತ್ರವಲ್ಲದೆ ಹೆಚ್ಚುವರಿ ಸೌಲಭ್ಯಗಳೂ ಸೇರಿವೆ. ಭಾಗವಹಿಸುವ ಪ್ರತಿಯೊಬ್ಬರಿಗೂ ಉಚಿತ ಕಲಿಕಾ ಸಾಮಗ್ರಿಗಳ ಜೊತೆಗೆ ಜೂನ್ 14ರಂದು ನಡೆಯಲಿರುವ ಸೂರ್ಯಗಾಯತ್ರಿ ಅವರ ಭವ್ಯ ಲೈವ್ ಕನ್ಸರ್ಟ್‌ನ ಕಂಪ್ಲಿಮೆಂಟರಿ ಪಾಸ್ ಅನ್ನು ಸಂಪೂರ್ಣ ಉಚಿತವಾಗಿ ನೀಡಲಾಗುವುದು.



**ಜಾಗತಿಕ ತಾರೆಯ ಮಾರ್ಗದರ್ಶನ:** ಸೂರ್ಯಗಾಯತ್ರಿ ಅವರು ಮುಂಬೈನ ಷಣ್ಮುಖಾನಂದ ಸಭಾದಿಂದ ಕಿರಿಯ ವಯಸ್ಸಿನಲ್ಲೇ ಪ್ರತಿಷ್ಠಿತ ಎಂ.ಎಸ್. ಸುಬ್ಬುಲಕ್ಷ್ಮಿ ಫೆಲೋಶಿಪ್ ಪುರಸ್ಕೃತರಾಗಿದ್ದಾರೆ. ಇತ್ತೀಚೆಗಷ್ಟೇ ಅಮೆರಿಕದ 29 ನಗರಗಳ ಯಶಸ್ವಿ ಪ್ರವಾಸ ಮುಗಿಸಿ ಬಂದಿರುವ ಹಾಗೂ ದೇಶ–ವಿದೇಶಗಳಲ್ಲಿ 500ಕ್ಕೂ ಹೆಚ್ಚು ಲೈವ್ ಪ್ರದರ್ಶನಗಳನ್ನು ನೀಡಿದ್ದಾರೆ.

# ರೋಗಮುಕ್ತ ಸಮಾಜಕ್ಕಾಗಿ ಘನತ್ಯಾಜ್ಯದ ಸಮರ್ಪಕ ವಿಲೇವಾರಿ ಮುಖ್ಯ: ಡೀಸಿ

**ಮಂಡ್ಯ:** ರಾಜ್ಯಾದ್ಯಂತ ಸರ್ಕಾರವು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026 ಅನ್ನು ಅನುಷ್ಠಾನಗೊಳಿಸಿದ್ದು, ಎಲ್ಲ ನಗರ ಸ್ಥಳೀಯ ಸಂಸ್ಥೆಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುವುದರಿಂದ ಸ್ವಚ್ಛ ಹಾಗೂ ಸುಂದರ ವಾತಾವರಣ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ

ಜಿಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆರೋಗ್ಯಕರ ವಾತಾವರಣ ಮತ್ತು ರೋಗಮುಕ್ತ ಸಮಾಜಕ್ಕಾಗಿ ಘನತ್ಯಾಜ್ಯದ ಸಮರ್ಪಕ ವಿಲೇವಾರಿ ಅತ್ಯಂತ ಅಗತ್ಯ. ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುವುದರಿಂದ ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು ಎಂದು ಅವರು ತಿಳಿಸಿದರು. ಪ್ರತಿ ಸ್ಥಳೀಯ ಸಂಸ್ಥೆಗಳಲ್ಲಿ 4 ವಿಧಗಳ ತ್ಯಾಜ್ಯ ವಿಂಗಡಣೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಕಸ, ಒಣ ಕಸ, ಸ್ಯಾನಿಟರಿ ಮತ್ತು ಸ್ಪೆಷಲ್ ಕೇರ್ ತ್ಯಾಜ್ಯಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸಬೇಕು. ಇವುಗಳ ಸಂಗ್ರಹಣೆ, ಸಾಗಾಣಿಕೆ ಹಾಗೂ ಸಂಸ್ಕರಣೆ, ವಿಲೇವಾರಿಯನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸಿ, ಪ್ರತಿಯೊಂದು ಮನೆ ಹಂತದಿಂದ ತ್ಯಾಜ್ಯ ನಿರ್ವಹಣೆ ಆಗುವಂತೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಸ್ವಚ್ಛತೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಮತ್ತು ಅವರ ನಡವಳಿಕೆಯಲ್ಲಿ ಬದಲಾವಣೆ ತರುವುದು ಮುಖ್ಯ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು ಕುಡಿಯುವ ನೀರಿನ ಮೂಲಗಳನ್ನು (ಬೋರ್‌ವೆಲ್‌ಗಳು, ಓವರ್‌ಹೆಡ್ ಟ್ಯಾಂಕ್‌ಗಳು) ನಿಯಮಿತವಾಗಿ ಪರಿಶೀಲಿಸಬೇಕು ಹಾಗೂ ಪೂರೈಕೆಯಾಗುವ ಕುಡಿಯುವ ನೀರಿನ ಮೂಲಗಳ ಗುಣಮಟ್ಟ ಪರೀಕ್ಷೆಯನ್ನು ನಡೆಸಬೇಕು ಎಂದು ಅವರು ತಿಳಿಸಿದರು.

ಆಸ್ತಿ ತೆರಿಗೆ ಬಾಕಿ ವಸೂಲಾತಿಗೆ ಸಂಬಂಧಿಸಿದಂತೆ ಇಲಾಖಾ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. ತೆರಿಗೆ ವಸೂಲಾತಿಯನ್ನು ಚುರುಕುಗೊಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದರು.

ಇಂದಿರಾ ಕ್ಯಾಂಟೀನ್‌ಗಳಲ್ಲಿ ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ಸಾರ್ವಜನಿಕರಿಗೆ ಪೂರೈಸಲಾಗುವ ಉಪಹಾರ ಮತ್ತು ಊಟದ ಗುಣಮಟ್ಟ ಹಾಗೂ ಪ್ರಮಾಣವನ್ನು ಕಟ್ಟುನಿಟ್ಟಾಗಿ ಕಾಯ್ದುಕೊಳ್ಳಬೇಕು ಎಂದು ತಿಳಿಸಿದರು.

ಪೌರಕಾರ್ಮಿಕರಿಗೆ ಆರೋಗ್ಯ ವಿಮೆ, ಸಕಾಲಕ್ಕೆ ವೇತನ ಪಾವತಿ ಹಾಗೂ ಸೌಲಭ್ಯಗಳನ್ನು ಕಲ್ಪಿಸಲು ಆದ್ಯತೆ ನೀಡಬೇಕು ಕಾರ್ಮಿಕರ ಸುರಕ್ಷತೆಗಾಗಿ ಸುರಕ್ಷತಾ ಪರಿಕರಗಳನ್ನು ನೀಡಲು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಟಿ. ಎನ್. ನರಸಿಂಹಮೂರ್ತಿ, ನಗರಾಭಿವೃದ್ಧಿಕೋಶದ ಕಾರ್ಯಪಾಲಕ ಅಭಿಯಂತರಾದ ಪ್ರತಾಪ್, ನಗರಸಭೆ ಆಯುಕ್ತೆ ಪಂಪಾಶ್ರೀ ಹಾಗೂ ಎಲ್ಲಾ ಪುರಸಭೆ ಮುಖ್ಯಾಧಿಕಾರಿಗಳು ಹಾಜರಿದ್ದರು.

# ಪದೋನ್ನತಿ ಪಡೆದ ಅಧಿಕಾರಿಗೆ ಸನ್ಮಾನ

**ಮಂಡ್ಯ:** ಪದೋನ್ನತಿ ನೌಕರರ ಸೇವೆಗೆ ಸಂದ ಪ್ರೋತ್ಸಾಹವಾಗಿದ್ದು, ಮತ್ತಷ್ಟು ಜವಾಬ್ದಾರಿಯಿಂದ ಸೇವೆ ಸಲ್ಲಿಸಲು ಪ್ರೇರೇಪಣೆಯಾಗುತ್ತದೆ ಎಂದು ಮಂಡ್ಯ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ವಿ. ಎಸ್. ಅಶೋಕ್ ಅಭಿಪ್ರಾಯಪಟ್ಟರು.

ಮಂಡ್ಯ ಜಿಲ್ಲಾ ಕೃಷಿ ಇಲಾಖೆಯ ಉಪ ನಿರ್ದೇಶಕರು ಕಚೇರಿಗೆ ಸಹಾಯಕ ಆಡಳಿತ ಅಧಿಕಾರಿಯಾಗಿ ಪದೋನ್ನತಿ ಪಡೆದ ಲಿನ್ ರಘುನಂದನ್ ರವರನ್ನು ಮಂಡ್ಯ ಜಿಲ್ಲಾ ಕೃಷಿಕ ಸಮಾಜದ ವತಿಯಿಂದ, ಕೃಷಿ ಇಲಾಖೆಯ ಎಲ್. ಸಿ. ಕೊಲ್ಮನ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ, ಅಭಿನಂದಿಸಿದ ಜಂಟಿ ನಿರ್ದೇಶಕರು ವಿ. ಎಸ್. ಅಶೋಕ್ ರವರು ಮಾತನಾಡುತ್ತಾ, ನೌಕರರಿಗೆ ಅವರ ಸೇವೆಯನ್ನು ಪರಿಗಣಿಸಿ ನಿಯಮಾನುಸಾರ ಸವಲತ್ತು ಹಾಗೂ ಮುಂಬಡ್ತಿಗಳನ್ನು ನೀಡುವ ಮೂಲಕ ತಮಗೆ ವಹಿಸಿರುವ ಜವಾಬ್ದಾರಿಗಳನ್ನು ಮಗದಷ್ಟು ಪ್ರಾಮಾಣಿಕತೆ ಹಾಗೂ ನಿಸ್ವಾರ್ಥತೆಯಿಂದ ಸೇವೆ ಸಲ್ಲಿಸಲು ಸಹಕಾರಿಯಾಗುತ್ತದೆ ಎಂದರು.

ಅಭಿನಂದನೆ ಸ್ವೀಕರಿಸಿದ ಲಿನ್ ರಘುನಂದನ್ ಮಾತನಾಡುತ್ತಾ, ನನಗೆ ದೊರೆತ ಪದೋನ್ನತಿ ಗುರುತಿಸಿ ಸನ್ಮಾನಿಸಿದ ಕೃಷಿಕ ಸಮಾಜದ ಪದಾಧಿಕಾರಿಗಳಿಗೆ ಚಿರಋಣಿ ಎಂದು ಭಾವುಕರಾದರು.

ಈ ಸಂದರ್ಭದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ. ಸಿ. ಎಂ. ನಾಗರಾಜು, ಉಪಾಧ್ಯಕ್ಷ ಜಿ. ಧನಂಜಯ ದರಸಗುಪ್ಪೆ, ಪ್ರಧಾನ ಕಾರ್ಯದರ್ಶಿ ಜಿ. ಡಿ.ಚಂದ್ರಶೇಖರ, ಖಜಾಂಚಿ ಬಿ. ಎಂ.ಪ್ರಕಾಶ್, ನಿರ್ದೇಶಕರುಗಳಾದ ಜಿ. ಎಸ್.ವೆಂಕಟೇಶ್, ಪಿ. ಬಾಲಕೃಷ್ಣ, ಕೆ. ಎನ್.ಚಂದ್ರಶೇಖರ, ಕೆ. ಬಿ.ನಾಗರಾಜು, ನಾಗೇಶ್, ಹೆಚ್ ಜೆ. ನಾರಾಯಣ ಗೌಡ,ಎನ್. ಎಸ್. ಗಂಗಾಧರ ಉಪಸ್ಥಿತರಿದ್ದರು.



# ಮೈಶುಗರ್ ವಿಚಾರದಲ್ಲಿ ದಾಖಲೆ ಸಮೇತ ಉತ್ತರಕ್ಕೆ ಒತ್ತಾಯ

**ಮಂಡ್ಯ:** ಮೈಶುಗರ್ ಅಧ್ಯಕ್ಷರು ಕಾರ್ಖಾನೆಯ ಸಂಬಂಧ ಬಹಿರಂಗ ಚರ್ಚೆಗೆ ಪ್ರಶ್ನೆಗಳನ್ನು ಲಿಖಿತ ರೂಪದಲ್ಲಿ ನೀಡುವಂತೆ ತಿಳಿಸಿದ್ದು, ತಮ್ಮೆಲ್ಲ ಪ್ರಶ್ನೆಗಳಿಗೆ ದಾಖಲೆ ಸಮೇತ ಚರ್ಚೆಯಲ್ಲಿ ಉತ್ತರ ನೀಡುವಂತೆ ನಗರಸಭೆ ಮಾಜಿ ಸದಸ್ಯ ಶಿವಕುಮಾರ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಶುಗರ್ ಕಾರ್ಖಾನೆ ಸಂಬಂಧ ಜೂ.12ರೊಳಗೆ ಪ್ರಶ್ನೆಗಳನ್ನು ಲಿಖಿತ ರೂಪದಲ್ಲಿ ನೀಡುವಂತೆ ತಿಳಿಸಿದ್ದು, 20 ಅಂಶಗಳ ಪ್ರಶ್ನೆಗಳನ್ನು ಲಿಖಿತ ರೂಪದಲ್ಲಿ ನೀಡುತ್ತಿರುವುದಾಗಿ ತಿಳಿಸಿದರು. ಅಧ್ಯಕ್ಷ



ಸಿ.ಡಿ.ಗಂಗಾಧರ್ ಅವರು ಅಧಿಕಾರ ವಹಿಸಿಕೊಂಡಾಗಿನಿಂದ ಕಾರ್ಖಾನೆಯಿಂದ ಪಡೆದ ಸರಕಾರಿ ಸೌಲಭ್ಯಗಳು, ಬ್ಯಾಂಕ್ನ ಹಣಕಾಸಿನ ವ್ಯವಹಾರದ ಮಾಹಿತಿ, ಕಬ್ಬು ಅರೆಯುವುದ ನಿಲ್ಲಲ್ಲು ದಿನನಿತ್ಯದ ಕಾರಣಗಳು, ಲಾಭ–ನಷ್ಟದ ಪ್ರತ್ಯೇಕ ಮಾಹಿತಿ, ಕೈಗೊಂಡ ಕಾಮಗಾರಿಗಳ ಮೊದಲು, ನಂತರದ ಜಿಪಿಆರ್‌ಎಸ್ ಭಾವಚಿತ್ರಗಳು, ಆರ್ಬಿ ಟೆಕ್ ಕಂಪನಿಗೆ ನೀಡಿದ ಹಣದ ಮೊತ್ತದ ದಾಖಲೆ, ಆರ್ಬಿ ಟೆಕ್ ಕಂಪನಿಗೆ ನಿಯಮ ಮೀರಿ ಮೊತ್ತ ವಸೂಲಾತಿ ಬಗ್ಗೆ ದಾಖಲೆ ಸಮೇತ ಮಾಹಿತಿ ನೀಡಬೇಕು ಎಂದು ಒತ್ತಾಯಿಸಿದರು. ಪ್ರಸ್ತುತ 5.95 ಲಕ್ಷ ಟನ್ ಕಬ್ಬು ನುರಿಯುವುದಾಗಿ ಹೇಳಿಕೆ ನೀಡಿದ್ದು, ಕಡಾಕಂಡಿತವಾಗಿ ಎಷ್ಟು ನುರಿಯುವಿರಿ. ಕಾರ್ಖಾನೆಯ ಮುಖ್ಯ ಅಭಿಯಂತರ ಮತ್ತು ಪ್ರಧಾನ ವ್ಯವಸ್ಥಾಪಕ ಕೆ.ವಿ.ವೀರೇಶ್ ನೇಮಕ ಸಂಬಂಧ ಆದೇಶ ಪ್ರತಿಗಳು, ಹಿಂದಿನ ಮಹಿಳಾ ಆಡಳಿತಾಧಿಕಾರಿ ಅಧ್ಯಕ್ಷರ ಮೇಲೆ ಮಹಿಳಾ ಆಯೋಗಕ್ಕೆ ಮತ್ತು ಕಬ್ಬು ಅಭಿವೃದ್ಧಿ ನಿರ್ದೇಶಕರಿಗೆ ನೀಡಿದ ದೂರಿನ ಕ್ರಮದ ಮಾಹಿತಿ. ಅನುಪಯುಕ್ತ ವಸ್ತುಗಳ ಸಂಬಂಧ ಯಾವುದೇ ಕ್ರಮ ವಹಿಸಿಲ್ಲ ಎಂಬ ನಿವೃತ್ತ ಹೆಚ್ಚುವರಿ ಆಡಳಿತಾಧಿಕಾರಿ ಸ್ವಾಮಿಗೌಡ ಅವರ ಮಾಹಿತಿಯ ಸ್ಪಷ್ಟನೆ, ಪ್ರಭಾರಿ ವ್ಯವಸ್ಥಾಪಕರಿಗೆ ಕಾರು ಖರೀದಿ, ಕಚೇರಿ ನವೀಕರಣದ ಸಮರ್ಥನೆ, ಮಲಾಸಿಸ್ ಸೋರಿಕೆಯ ಸಂಬಂಧ ತಿದ್ದುಪಡಿಯ ವಿವರಣೆ ಸಂಬಂಧ ದಾಖಲೆ ನೀಡುವಂತೆ ಆಗ್ರಹಿಸಿದರು.

## ರೇವತಿ ನಕ್ಷತ್ರದ ಶುಭದಿನ: ಭೂವರಹನಾಥ ಕ್ಷೇತ್ರಕ್ಕೆ ಹರಿದು ಬಂದ ಭಕ್ತ ಸಾಗರ

# ಲೋಕ ಕಲ್ಯಾಣಾರ್ಥವಾಗಿ ನಡೆದ ಶ್ರೀನಿವಾಸ ಕಲ್ಯಾಣ ಮಹೋತ್ಸವ

**ಕೆ ಆರ್ ಪೇಟೆ:** ತಾಲೂಕಿನ ಪುರಾಣ ಪ್ರಸಿದ್ಧ ಪುಣ್ಯಕ್ಷೇತ್ರ ಭೂ ವೈಕುಂಟ ವೆಂದೇ ಪ್ರಖ್ಯಾತವಾಗಿರುವ ಭೂದೇವಿ ಸಮೇತ ಶ್ರೀ ಲಕ್ಷ್ಮಿ ವರಹನಾಥ ಕಲ್ಲಹಳ್ಳಿಗೆ ರೇವತಿ ನಕ್ಷತ್ರದ ಶುಭ ದಿನವಾದ ಇಂದು ಭಕ್ತ ಸಾಗರವೇ ಹರಿದು ಬಂದಿತ್ತು.

ವಿಶ್ವದಲ್ಲಿಯೇ ಅಪರೂಪದ್ದಾಗಿರುವ 17 ಅಡಿ ಎತ್ತರದ ಸಾಲಿಗ್ರಾಮ ಶ್ರೀ ಕೃಷ್ಣ ಶಿಲೆಯಲ್ಲಿ ನಿರ್ಮಿಸಿರುವ ಭೂವರಹನಾಥ ಸ್ವಾಮಿ ಮೂರ್ತಿಯನ್ನು 1000 ಲೀಟರ್ ಹಾಲು 500 ಲೀಟರ್ ಎಳನೀರು ಐನೂರು ಲೀಟರ್ ಕಬ್ಬಿನ ಹಾಲು ಪವಿತ್ರ ಗಂಗಾಜಲ ಅರಿಶಿಣ ಸುಗಂಧ ದ್ರವ್ಯಗಳು ಜೇನುತುಪ್ಪ ಹಸುವಿನ ತುಪ್ಪದಿಂದ ಅಭಿಷೇಕ ಮಾಡಿ ಮಲ್ಲಿಗೆ, ಜಾಜಿ, ಸಂಪಿಗೆ, ಸೇವಂತಿಗೆ, ಧವನ, ಪವಿತ್ರ ಪತ್ರೆಗಳು, ಕಮಲ, ಗುಲಾಬಿ ಸೇರಿದಂತೆ 58 ಬಗೆಯ ಅಪರೂಪದ ಹೂವುಗಳಿಂದ ಪುಷ್ಪಾಭಿಷೇಕ ನಡೆಸಿ, ಪಟ್ಟಾಭಿಷೇಕ ಮಾಡಿ, ಲೋಕಕಲ್ಯಾಣಾರ್ಥವಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಭೂ ವರಹನಾಥ ದೇವಾಲಯದ ವ್ಯವಸ್ಥಾಪನ ಸಮಿತಿಯ ಸಂಚಾಲಕರಾದ ಡಾ.ಶ್ರೀನಿವಾಸ ರಾಘವನ್ ನಡೆದಿದ್ದ ಅಪಾರ ಭಕ್ತ ಸ್ತೋಮವನ್ನು ಉದ್ದೇಶಿಸಿ ಮಾತನಾಡಿ ಬೇಡಿ ಬಂದ ಭಕ್ತರ ಕೋರಿಕೆಗಳು ಹಾಗೂ ಅಭಿಷ್ಟಗಳನ್ನು ಈಡೇರಿಸಿ ಕರುಣಿಸಿ ಆಶೀರ್ವದಿಸುತ್ತಿರುವ ಭೂವರಹನಾಥ ಸ್ವಾಮಿ



ಕ್ಷೇತ್ರಕ್ಕೆ ದಿನದಿಂದ ದಿನಕ್ಕೆ ಭಕ್ತರ ದಂಡೇ ಹರಿದು ಬರುತ್ತಿದೆ. ದುಷ್ಟ ಹಿರಣ್ಯಾಕ್ಷನನ್ನು ಸಂಹರಿಸಿ ಭೂದೇವಿಯನ್ನು ಸಂರಕ್ಷಿಸಿದ ಶುಭಗಳಿಗೆಯೇ ರೇವತಿ ನಕ್ಷತ್ರವಾದ್ದರಿಂದ ಇಂದು ಹೊರಹನಾಥ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಅಭಿಷೇಕ ಮಾಡಿ ಪಟ್ಟಾಭಿಷೇಕ ನಡೆಸಿ ಲೋಕ ಕಲ್ಯಾಣಾರ್ಥವಾಗಿ ವಿಶೇಷ ಪ್ರಾರ್ಥನೆಯನ್ನು ಸಲ್ಲಿಸಲಾಯಿತು ಎಂದು ಶ್ರೀನಿವಾಸ ರಾಘವನ್ ತಿಳಿಸಿದರು.

ಭೂವರಹನಾಥ ದೇವಾಲಯವನ್ನು ತಿರುಮಲ ತಿರುಪತಿಯ ಮಾದರಿಯಲ್ಲಿ ಮೂರು ಪ್ರಕಾರಗಳ ದೇವಾಲಯವನ್ನಾಗಿ, ಸಂಪೂರ್ಣವಾಗಿ ಗ್ರಾನೈಟ್ ಕಲ್ಲಿನಿಂದಲೇ ಹೊಯ್ಸಳ ವಾಸ್ತು ಶಿಲ್ಪಕಲಾ ವಾಸ್ತು ವೈಭವದಲ್ಲಿ ನಿರ್ಮಿಸಲಾಗುತ್ತಿದೆ. ಎರಡನೇ ಪ್ರಕಾರದಲ್ಲಿ ನಾಲ್ಕು ದಿಕ್ಕುಗಳಲ್ಲಿಯೂ 56 ಅಡಿ ಎತ್ತರದ ರಾಜಗೋಪುರಗಳು ನಿರ್ಮಾಣವಾಗುತ್ತಿದ್ದು ಮೂರನೇ ಪ್ರಕಾರದಲ್ಲಿ 176 ಕಾಲುಗಳ ಮುಖಮಂಟಪ ಹಾಗೂ 186 ಅಡಿ ಎತ್ತರದ ಬೃಹತ್ ರಾಜಗೋಪುರವನ್ನು ನಿರ್ಮಾಣ ಮಾಡಿ ಇನ್ನು ಮೂರು ವರ್ಷಗಳಲ್ಲಿ ದೇವಾಲಯವನ್ನು ಲೋಕಾರ್ಪಣೆ ಮಾಡಲು ಪರಕಾಲ ಸ್ವಾಮಿಗಳು ಸಂಕಲ್ಪ ಮಾಡಿದ್ದು ಶ್ರೀ ಕ್ಷೇತ್ರದಲ್ಲಿ ಕಲ್ಲು ಕತ್ತರಿಸುವ ಯಂತ್ರಗಳು ಸೇರಿದಂತೆ ಸಿ.ಎನ್.ಸಿ ತಂತ್ರಜ್ಞಾನದ ಯಂತ್ರೋಪಕರಣಗಳನ್ನು ಅಳವಡಿಸಿ ದೇವಾಲಯವನ್ನು ಆದಷ್ಟು ಜಾಗ್ರತೆ ನಿರ್ಮಿಸಲು ಕೆಲಸ ಕಾರ್ಯಗಳನ್ನು ಚುರುಕುಗೊಳಿಸಲಾಗಿದೆ. ದೇವಾಲಯದ ನಿರ್ಮಾಣಕ್ಕಾಗಿ ರಾಜಸ್ಥಾನ, ತಮಿಳುನಾಡು ಸೇರಿದಂತೆ ನಮ್ಮ ರಾಜ್ಯದ ವಿವಿಧ ಶಿಲ್ಪಕಲಾ ತಜ್ಞರನ್ನು ಕರೆಸಿ ಸಮಾಲೋಚನೆ ನಡೆಸಿ ಬೃಹತ್ ಕಂಬಗಳು ಹಾಗೂ ಗೋಪುರಗಳನ್ನು ನಿರ್ಮಿಸಲಾಗುತ್ತಿದೆ. ಈ ದೇವಾಲಯವು ಸಂಪೂರ್ಣವಾಗಿ ಭಕ್ತರ ಸಹಕಾರದಿಂದ ನಿರ್ಮಾಣವಾಗುತ್ತಿದ್ದು ಭೂವರಹನಾಥ ಕಲ್ಲಹಳ್ಳಿಯಲ್ಲಿ ಶೀಘ್ರದಲ್ಲಿಯೇ ಒಂದು ಸಂಸ್ಕೃತ ವೇದ ಪಾಠಶಾಲೆಯನ್ನು ಆರಂಭಿಸಲು ಸಿದ್ಧತೆಯನ್ನು ನಡೆಸಲಾಗುತ್ತಿದೆ ಎಂದು ಶ್ರೀನಿವಾಸರಾಘವನ್ ಮಾಹಿತಿ ನೀಡಿದರು. ರೇವತಿ ನಕ್ಷತ್ರದ ಶುಭ ದಿನವಾದ ಎಂದು ಭೂವರಹನಾಥ ಕ್ಷೇತ್ರಕ್ಕೆ ಆಗಮಿಸಿದ ಭಕ್ತಾದಿಗಳಿಗೆ ಸಿಹಿ ಪೊಂಗಲ್ ಬಿಸಿಬೇಳೆ ಬಾತ್ ಮೊಸರನ್ನ ಹಾಗೂ ಉಪ್ಪಿಟ್ಟು ಪ್ರಸಾದವನ್ನು ವಿತರಿಸಲಾಯಿತು. ತಮಿಳುನಾಡು ಕೇರಳ ಮಹಾರಾಷ್ಟ್ರ ಸೇರಿದಂತೆ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ 20000ಕ್ಕೂ ಹೆಚ್ಚಿನ ಭಕ್ತಾದಿಗಳು ರೇವತಿ ನಕ್ಷತ್ರದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅಭಿಷೇಕ, ಪುಷ್ಪಾಭಿಷೇಕ ಹಾಗೂ ಪಟ್ಟಾಭಿಷೇಕ ಕಾರ್ಯಕ್ರಮಗಳನ್ನು ಕಣ್ತುಂಬಿಕೊಂಡು ಕೃತಾರ್ಥರಾದರು.

# ಗೆದ್ದವನಿಗಿರಲಿ ಛಲದ ಹಸಿವು!"



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 42

ಯಶಸ್ಸಿನ ಶಿಖರದಲ್ಲಿ ನಿಂತಾಗ ಸ್ತುತಿಯ ಮಹಾಪೂರದ ಜೊತೆ ನಿಂದೆಯ ಕಲ್ಲುಮಳೆಯೂ ಸುರಿಯುತ್ತದೆ.ಆದರೆ ಆ ಕಲ್ಲುಗಳನ್ನೇ ಸೋಪಾನವಾಗಿಸಿ ತನ್ನ ಸಾಮರ್ಥ್ಯವನ್ನು ಮತ್ತೆ ಜಗಕ್ಕೆ ಸಾಬೀತುಪಡಿಸುವವನೇ ನಿಜವಾದ ಕರ್ಮವೀರ.ಇಂತಹ ಅದಮ್ಯ ಛಲಕ್ಕೆ ಸಾಕ್ಷಿ ಮೋಟಾರ್ ಕೂಟದ ದಂತಕಥೆ ವ್ಯಾಲೆಂಟಿನೋ ರೋಸ್ಸಿ. 2003ರ ಹೊತ್ತಿಗೆ ರೋಸ್ಸಿ ವೇಗದ ಅಧಿಪತಿ.ಹೋಂಡಾ ತಂಡದ ನವೀನ ಯಂತ್ರದೊಂದಿಗೆ ಸತತ ವಿಶ್ವಕಿರೀಟ ಧರಿಸಿದ್ದರು.ಆಗ ಕ್ರೀಡಾಜಗತ್ತಿನಲ್ಲಿ ಅಪಸ್ವರ ಎದ್ದಿತು ರೋಸ್ಸಿಯ ಗೆಲುವು ಚಾಲಕನ ಕೈಚಳಕದಿಂದಲ್ಲ, ಹೋಂಡಾದ ಯಾಂತ್ರಿಕ ಶಕ್ತಿಯಿಂದ! ಈ ಕುಹಕ ಅವರ ಸ್ವಾಭಿಮಾನವನ್ನು ಕೆಣಕಿತು.

ತನ್ನ ಶ್ರಮಕ್ಕಿಂತ ತನ್ನ ಬೈಕಿಗೆ ಗೌರವ ಸಿಕ್ಕಾಗ ರೋಸ್ಸಿ ಜಗ್ಗಲಿಲ್ಲ.ಯಂತ್ರಕ್ಕಿಂತ ಮಂತ್ರವೇ ಮುಖ್ಯವೆಂದು ತೋರಿಸಲು ಬೆರಗಿನ ನಿರ್ಧಾರ ಕೈಗೊಂಡರು.ಶಿಖರದಲ್ಲಿದ್ದ ಹೋಂಡಾವನ್ನು ತ್ಯಜಿಸಿ,ಸೋಲಿನ ಕೂಪದಲ್ಲಿದ್ದ,ತಾಂತ್ರಿಕವಾಗಿ ಕೊರತೆಯಿದ್ದ ಯಾಮಾಹಾ ತಂಡವನ್ನು ಸೇರಿದರು. ಟೀಕಾಕಾರರು ಅವರ ವೃತ್ತಿ ಮುಗಿಯಿತೆಂದು ಪರಿಹಾಸ್ಯ ಮಾಡಿದರು. ಆದರೆ 2004ರ ಮೊದಲ ಕೂಟದಲ್ಲಿ ಸಾಮಾನ್ಯ ಯಂತ್ರವನ್ನೇ ಮಿಂಚಿನಂತೆ



ಓಡಿಸಿ ವಿಜಯಮಾಲೆ ಧರಿಸಿ ರೋಸ್ಸಿ ಹೊಸ ಇತಿಹಾಸ ಸೃಷ್ಟಿಸಿದರು.

ಲೋಕ ನಿಮ್ಮ ತಾಕತ್ತನ್ನು ಪ್ರಶ್ನಿಸಿದಾಗ ವಾದ ಬೇಡ; ನಿಮ್ಮ ಮೌನದ ಸಾಧನೆಯೇ ಅವರಿಗೆ ಬಿರುಗಾಳಿಯ ಉತ್ತರ. ಸುಲಭದ ಯಶಸ್ಸಿಗಿಂತ ಸವಾಲಿನ ಗೆಲುವೇ ಸಾರ್ಥಕ. ತನ್ನ ಮೇಲೆ ಅಚಲ ನಂಬಿಕೆ, ಗೆಲುವಿನ ಹಸಿವಿದ್ದರೆ ಎಡವಿದ ಕುದುರೆಯೂ ವಿಜಯಪಥದಲ್ಲಿ ಧಾವಿಸುತ್ತದೆ. ಗೆಲ್ಲುವವನಿಗೆ ವೇಗದ ಜೊತೆ ಅಡ್ಡಿಗಳನ್ನು ದಾಟುವ ಧೈರ್ಯವೂ ಬೇಕು.



# ಹೊಸ ಪ್ರತಿಭೆಗಳ ಪ್ರಯತ್ನದಲ್ಲಿ ಕ್ಷೇತ್ರಪಾಲ ತೆರೆಗೆ

ಕರ್ನಾಟಕದ ಕರಾವಳಿಯ ಸೊಗಡು, ಅಲ್ಲಿನ ವಿಚಾರ-ಆಚಾರ, ಆಚರಣೆಗಳ ಸುತ್ತ ಈಗಾಗಲೇ ಹಲವು ಸಿನಿಮಾಗಳು ತೆರೆಗೆ ಬಂದು ಯಶಸ್ವಿಯಾಗಿವೆ. ಈಗ ಕರಾವಳಿ ಸೊಗಡಿನ ಅಂಥದ್ದೇ ಮತ್ತೊಂದು ಚಿತ್ರ ತೆರೆಗೆ ಬರಲು ತಯಾರಾಗುತ್ತಿದೆ. ಅಂದಹಾಗೆ, ಆ ಚಿತ್ರದ ಹೆಸರು ಕ್ಷೇತ್ರಪಾಲ .

ಕರಾವಳಿಯ ಪ್ರತೀತಿಯಂತೆ, ಪ್ರತಿ ಕ್ಷೇತ್ರದಲ್ಲೂ ಆ ಕ್ಷೇತ್ರದ ರಕ್ಷಣೆಗೆ ಕ್ಷೇತ್ರಪಾಲನಾಗಿ ದೈವವೊಂದು ಇರುತ್ತದೆ. ಆಯಾಯ ಕ್ಷೇತ್ರದಲ್ಲಿ ನ್ಯಾಯ, ನೀತಿ, ಧರ್ಮವನ್ನು ಪಾಲನೆ-ಪೋಷಣೆ ಮಾಡಿ ಜನರನ್ನು ಕ್ಷೇತ್ರಪಾಲ ಕಾಪಾಡುತ್ತಾನೆ ಎಂಬುದು ಕರಾವಳಿ ಜನರ ಬಲವಾದ ನಂಬಿಕೆ. ಅಂಥದ್ದೇ ಒಂದು ನಂಬಿಕೆಯ ಕಥೆಯನ್ನು ಇಟ್ಟುಕೊಂಡು ಕ್ಷೇತ್ರಪಾಲ ಚಿತ್ರ ತೆರೆಗೆ ಬರುತ್ತಿದೆ.

ಇನ್ನು ಈ ಸಿನಿಮಾದ ಹೆಸರು ಕ್ಷೇತ್ರಪಾಲ ಅಂತಿದ್ದರೂ, ಇದು ಕೇವಲ ಕರಾವಳಿಯ ಯಾವುದೇ ದೈವದ ಕುರಿತಾದ ಸಿನಿಮಾವಲ್ಲ. ಆದರೆ, ಧಾರ್ಮಿಕ ಹಿನ್ನೆಲೆಯಲ್ಲಿ ಊರನ್ನು ರಕ್ಷಣೆ ಮಾಡುವ ವ್ಯಕ್ತಿಯೊಬ್ಬನ ಕಥೆ ಈ ಸಿನಿಮಾದಲ್ಲಿ ಇರಲಿದೆಯಂತೆ. ನ್ಯಾಯ, ನೀತಿ, ಧರ್ಮ, ನಂಬಿಕೆ, ಜೀವನ, ಹೋರಾಟ ಎಲ್ಲವೂ ಕ್ಷೇತ್ರಪಾಲ ಸಿನಿಮಾದಲ್ಲಿ ಕಾಣಬಹುದು ಎಂಬುದು ಚಿತ್ರತಂಡದ ಒಕ್ಕೊರಲ ಮಾತು.

ಈಗಾಗಲೇ ಸದ್ದಿಲ್ಲದೆ ಕ್ಷೇತ್ರಪಾಲ ಚಿತ್ರದ ಮೊದಲ ಹಂತದ ಚಿತ್ರೀಕರಣ ಪೂರ್ಣಗೊಳಿಸಿರುವ ಚಿತ್ರತಂಡ, ಇದೀಗ ಕ್ಷೇತ್ರಪಾಲ ಚಿತ್ರದ ಶೀರ್ಷಿಕೆ ಮತ್ತು ಮೋಶನ್ ಪೋಸ್ಟರ್ ಅನ್ನು ಬಿಡುಗಡೆಗೊಳಿಸಿದೆ.

ಸುಮಾರು ಒಂದೂವರೆ ದಶಕಗಳ ಕಾಲ ಮಾಧ್ಯಮ ಲೋಕದಲ್ಲಿ ಕೆಲಸ ಮಾಡಿದ ಅನುಭವವಿರುವ ಜಗದೀಶ್ ಮಂಜಣ್ಣ ಕ್ಷೇತ್ರಪಾಲ ಚಿತ್ರಕ್ಕೆ ನಿರ್ದೇಶನ ಮಾಡುತ್ತಿದ್ದಾರೆ. ಕನ್ನಡದಲ್ಲಿ ಈಗಾಗಲೇ ಕೆಲ ಸಿನಿಮಾಗಳಲ್ಲಿ ಸಹ ನಟನಾಗಿ ಕಾಣಿಸಿಕೊಂಡಿರುವ ರಾಘವ ಪೂಜಾರಿ ಕ್ಷೇತ್ರಪಾಲ ಚಿತ್ರದ ಮೂಲಕ ಪೂರ್ಣ ಪ್ರಮಾಣದ ನಾಯಕ ನಟನಾಗಿ ಬೆಳ್ಳಿತೆರೆಗೆ ಪರಿಚಯವಾಗುತ್ತಿದ್ದಾರೆ.



ಉಳಿದಂತೆ ಬಲರಾಜ್ ವಾಡಿ, ಗೋಪಾಲಕೃಷ್ಣ ದೇಶಪಾಂಡೆ, ಸುಚೇಂದ್ರ ಪ್ರಸಾದ್, ಅದ್ವಿಕಾ ಶೆಟ್ಟಿ, ರಾಘು ರಾಮನಕೊಪ್ಪ, ಗೌತಮಿ ಗೌಡ, ನಮಿತಾ ಕಿರಣ್ ಮೊದಲಾದ ಕಲಾವಿದರು ಕ್ಷೇತ್ರಪಾಲ ಚಿತ್ರದ ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ.


ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಕನ್ನಡಪರ ಹೋರಾಟಗಾರ ನಿಂಗೇಗೌಡ, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ ದ ಅಧ್ಯಕ್ಷ ಎನ್ನಾರ್ಕೆ ವಿಶ್ವನಾಥ್, ನಟ ರಾಘು ರಾಮನಕೊಪ್ಪ ಮೊದಲಾದ ಗಣ್ಯರ ಸಮ್ಮುಖದಲ್ಲಿ ಕ್ಷೇತ್ರಪಾಲ ಚಿತ್ರದ ಶೀರ್ಷಿಕೆ ಮತ್ತು ಮೋಶನ್ ಪೋಸ್ಟರ್ ಬಿಡುಗಡೆಯಾಯಿತು.

ಇದೇ ವೇಳೆ ಮಾತನಾಡಿದ ಕ್ಷೇತ್ರಪಾಲ ನ ನಿರ್ದೇಶಕ ಜಗದೀಶ್ ಮಂಜಣ್ಣ, ಇದೊಂದು ಕರಾವಳಿ ಸೊಗಡಿನ ಕಥೆಯ ಸಿನಿಮಾ. ಇದರಲ್ಲಿ ಸಸ್ಪೆನ್ಸ್, ಆ ಯಕ್ಷನ್, ಥ್ರಿಲ್ಲರ್ ಹೀಗೆ ಎಲ್ಲಾ ಥರದ ಎಂಟರ್ಟೈನ್ಮೆಂಟ್ ಅಂಶಗಳಿವೆ. ಎರಡು ಎಳೆಯಲ್ಲಿ ಈ ಸಿನಿಮಾದ ಕಥೆ ಸಾಗುತ್ತದೆ. ಕರಾವಳಿಯ ಸಂಪ್ರದಾಯ, ಸೌಂದರ್ಯದ ಜೊತೆಗೆ ಊಹಿಸಲಾಗದ ರೋಚಕ ಅಂಶಗಳು ಈ ಸಿನಿಮಾದ ಹೈಲೈಟ್ಸ್. ಆದಷ್ಟು ಬೇಗ ಹೊಸರೂಪದಲ್ಲಿ ಕ್ಷೇತ್ರಪಾಲ ನನ್ನು ಪ್ರೇಕ್ಷಕರ ಮುಂದೆ ತರಲಿದ್ದೇವೆ ಎಂದರು.

ಕ್ಷೇತ್ರಪಾಲ ನ ಬಗ್ಗೆ ಮಾತನಾಡಿದ ಕುಂದಾಪುರ ಮೂಲದ ನಾಯಕ ನಟ ರಾಘವ ಪೂಜಾರಿ, ಈಗಾಗಲೇ ಕನ್ನಡದಲ್ಲಿ ಕೆಲವು ಸಿನಿಮಾಗಳಲ್ಲಿ ಅಭಿನಯಿಸಿದ್ದೇನೆ. ಈಗ ಕರಾವಳಿಯ ಕಥೆಯೊಂದರ ಮೂಲಕ ಪ್ರೇಕ್ಷಕರ ಮುಂದೆ ಬರುತ್ತಿದ್ದೇವೆ. ನಮ್ಮ ಊರಿನ ಕಥೆಯೊಂದನ್ನು ಈ ಸಿನಿಮಾದ ಮೂಲಕ ಪ್ರೇಕ್ಷಕರ ಮುಂದೆ ತರಲು ಖುಷಿಯಾಗುತ್ತಿದೆ. ಇದರಲ್ಲಿ ನಮ್ಮ ಆಚರಣೆ, ಸಂಸ್ಕೃತಿಯ ಜೊತೆಗೆ ಒಂದು ಸಂದೇಶ ಕೂಡ ಇದೆ. ಸದ್ಯ ಸಿನಿಮಾದ ಕೆಲಸಗಳು ನಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಸಿನಿಮಾದ ಬಗ್ಗೆ ಹೆಚ್ಚಿನ ಮಾಹಿತಿ ನೀಡಲಿದ್ದೇವೆ ಎಂದರು.

ಮುತ್ತಮ್ಮ ಪ್ರೊಡಕ್ಷನ್ಸ್ ಬ್ಯಾನರಿನಲ್ಲಿ ನಿರ್ಮಾಣವಾಗುತ್ತಿರುವ ಕ್ಷೇತ್ರಪಾಲ ಚಿತ್ರಕ್ಕೆ ಕೆ. ನವೀನ್ ಸುವರ್ಣ ಛಾಯಾಗ್ರಣ, ಗಿರೀಶ್ ಕುಮಾರ್ ಸಂಕಲನ ಕಾರ್ಯವಿದೆ. ಚಿತ್ರದ ಹಾಡುಗಳಿಗೆ ಯತೀಶ್ ರಾಜ್ ಸಂಗೀತ ಸಂಯೋಜಿಸುತ್ತಿದ್ದಾರೆ. ಉಡುಪಿ, ಕುಂದಾಪುರ ಸುತ್ತಮುತ್ತ ಕ್ಷೇತ್ರಪಾಲ ಚಿತ್ರದ ಬಹುತೇಕ ಚಿತ್ರೀಕರಣ ನಡೆಯಲಿದೆ. ಈಗಾಗಲೇ ಸುಮಾರು 10 ದಿನಗಳ ಕಾಲ ಕ್ಷೇತ್ರಪಾಲ ಚಿತ್ರದ ಮೊದಲ ಹಂತದ ಚಿತ್ರೀಕರಣ ಪೂರ್ಣಗೊಳಿಸಿರುವ ಚಿತ್ರತಂಡ, ಇದೇ ಜುಲೈ ಅಂತ್ಯದಿಂದ ಸುಮಾರು 40 ದಿನಗಳ ಕಾಲ ಎರಡನೇ ಹಂತದ ಚಿತ್ರೀಕರಣ ನಡೆಸುವ ಯೋಜನೆ ಹಾಕಿಕೊಂಡಿದೆ.

# ಸ್ಲಮ್ ಡಾಗ್: 33 ಟೆಂಪಲ್ ರೋಡ್ ಟೀಸರ್ ರಿಲೀಸ್



ಪುರಿ ಜಗನ್ನಾಥ್ ಸಾರಥ್ಯದಲ್ಲಿ ಮೂಡಿಬರ್ತಿರುವ ಸ್ಲಮ್ ಡಾಗ್: 33 ಟೆಂಪಲ್ ರೋಡ್. ವಿಜಯ್ ಸೇತುಪತಿ ನಾಯಕನಾಗಿ ನಟಿಸುತ್ತಿರುವ ಈ ಚಿತ್ರದ ಟೀಸರ್ ಬಿಡುಗಡೆ ಇತ್ತೀಚಿಗೆ ನಡೆದಿದೆ.

ಕಣ್ಣು ಕಾಣದ ಭಿಕ್ಷುಕನ ರೀತಿ ವಿಜಯ್ ಸೇತುಪತಿ ಕಾಣಿಸಿಕೊಂಡಿದ್ದಾರೆ. ಅವರ ಪಾತ್ರವು ನಿಜವಾಗಿಯೂ ಕುರುಡಾಗಿದೆಯೇ ಅಥವಾ ಅವರ ನೋಟದ ಹಿಂದೆ ಆಳವಾದ ರಹಸ್ಯವಿದೆಯೇ ಅನ್ನೋದು ಚಿತ್ರದಲ್ಲಿಯೇ ನೋಡಬೇಕು.

ವಿಜಯ್ ಸೇತುಪತಿ ಎದುರು ಕನ್ನಡದ ದುನಿಯಾ ವಿಜಯ್ ಕುಮಾರ್ ಅಬ್ಬರಿಸಿದ್ದಾರೆ. ಖಡಕ್ ಖಳನಾಯಕನಾಗಿ ಅವರು ಕಾಣಿಸಿಕೊಂಡಿದ್ದಾರೆ. ಬಾಲಿವುಡ್ ನಟಿ ಟಬು ಪೊಲೀಸ್ ಅಧಿಕಾರಿಯಾಗಿ ಅಭಿನಯಿಸಿದ್ದಾರೆ. ಸಂಯುಕ್ತಾ ಮೆನನ್, ಜರೀನಾ ವಹಾಬ್, ವಿಟಿವಿ ಗಣೇಶ್ ಮತ್ತು ಬ್ರಹ್ಮಾಜಿ ಚಿತ್ರದ ಪ್ರಮುಖ ಪಾತ್ರಗಳಲ್ಲಿದ್ದಾರೆ.

5 ಭಾಷೆಗಳಲ್ಲಿ ಸಿನಿಮಾ ತೆರೆಗೆ ಬರ್ತಿದ್ದು ಕನ್ನಡದಲ್ಲಿ ಕೂಡ ಟೀಸರ್ ರಿಲೀಸ್ ಆಗಿದೆ. ಪುರಿ ಕನೆಕ್ಟ್ಸ್ ಬ್ಯಾನರ್ ನಡಿ

ಪುರಿ ಜಗನ್ನಾಥ್, ಚಾರ್ಮಿ ಕೌರ್, ಜೆಬಿ ನಾರಾಯಣ ರಾವ್ ಕೊಂಡ್ರೋಲಾ ಚಿತ್ರ ನಿರ್ಮಾಣ ಮಾಡಿದ್ದಾರೆ. ಹರ್ಷವರ್ಧನ್ ರಾಮೇಶ್ವರ್ ಸಂಗೀತ, ಸ್ಯಾಮ್ ಕೆ ನಾಯ್ಡು ಛಾಯಾಗ್ರಹಣ, ಸಂತೋಷ್ ನೂಜಿಲ್ಲಾ ಸಂಕಲನ ಚಿತ್ರಕ್ಕಿದೆ.

# "ಪಂಚಮುಖಿ" ಜೂನ್ 26 ರಂದು ಬಿಡುಗಡೆ



ಟ್ರೈಲರ್ ಹಾಗೂ ವಿಡಿಯೋ ಹಾಡುಗಳ ಮೂಲಕ ಎಲ್ಲರ ಗಮನ ಸೆಳೆದಿರುವ "ಪಂಚಮುಖಿ" ಜೂನ್ 26 ರಂದು ಬಿಡುಗಡೆ .

ಎಸ್ ಪಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಿರ್ಮಾಣವಾಗಿರುವ, ಚಂದ್ರು ಆಚಾರ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನದ ಜೊತೆಗೆ ನಾಯಕನಾಗಿಯೂ ನಟಿಸಿರುವ "ಪಂಚಮುಖಿ" ಚಿತ್ರದ ಟ್ರೈಲರ್ ಹಾಗೂ ವಿಡಿಯೋ ಹಾಡುಗಳು ಸಿರಿ ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದೆ. ಚಿತ್ರ ಜೂನ್ 26 ರಂದು ತೆರೆಗೆ ಬರುತ್ತಿದೆ. ಚಿತ್ರದ ಕುರಿತು ಹೆಚ್ಚಿನ ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು.

ಕೆಲವು ಚಿತ್ರಗಳಿಗೆ ಅಸಿಸ್ಟೆಂಟ್ ಡೈರೆಕ್ಟರ್ ಆಗಿ ಕಾರ್ಯ ನಿರ್ವಹಿಸಿರುವ ನನಗೆ ಇದು ಮೊದಲ ನಿರ್ದೇಶನದ ಚಿತ್ರ. ಹಾರಾರ್ ಜೊತೆಗೆ ನೋಡುಗರಿಗೆ ಬೇಕಾದ ಎಲ್ಲಾ ಮನೋರಂಜನೆಯ ಅಂಶಗಳು ಇರುವ ಈ ಚಿತ್ರದಲ್ಲಿ ನಾನೇ ನಾಯಕನಾಗೂ ನಟಿಸಿದ್ದೇನೆ. ಸ್ಫೂರ್ತಿ ಮನೋಹರ್ ಈ ಚಿತ್ರದ ನಾಯಕಿ. ಕಳೆದ ಕೆಲವು ವರ್ಷಗಳ ಹಿಂದೆಯೇ ಈ ಚಿತ್ರಕ್ಕೆ ಚಾಲನೆ ದೊರೆಕಿತ್ತು. ಕಾರಣಾಂತರದಿಂದ ಬಿಡುಗಡೆ ಸ್ವಲ್ಪ ವಿಳಂಬವಾಗಿದೆ. ಇದೊಂದು ಕಡಿಮೆ ಬಜೆಟ್ ನ ಚಿತ್ರ. ತಂತ್ರಜ್ಞರ ಹಾಗೂ ಕಲಾವಿದರ ಸಹಕಾರದಿಂದ ನಿರ್ಮಾಣವಾಗಿರುವ ಚಿತ್ರವೂ ಹೌದು. ಈ ಚಿತ್ರದ ಬಹುತೇಕ ತಂತ್ರಜ್ಞರು ಹಾಗೂ ಕಲಾವಿದರು ಯಾವುದೇ ಸಂಭಾವನೆ ಪಡೆಯದೆ ಈ ಚಿತ್ರದಲ್ಲಿ ನಟಿಸಿದ್ದಾರೆ. ಅವರೆಲ್ಲರಿಗೂ ಈ ಸಂದರ್ಭದಲ್ಲಿ ಧನ್ಯವಾದ ತಿಳಿಸುತ್ತೇನೆ. ಚಿತ್ರದಲ್ಲಿ ಅರೋನ್ ಕಾರ್ತಿಕ್ ವೆಂಕಟೇಶ್ ಸಂಗೀತ ಸಂಯೋಜಿಸಿರುವ 4 ಹಾಡುಗಳಿದೆ. ಖಿಚಿತ್ರ ಜೂನ್ 26 ಸಹಕಾರದಿಂದ ಈ ಚಿತ್ರ ಚೆನ್ನಾಗಿ ಮೂಡಿಬಂದಿದೆ. ಪ್ರವೀಣ್ ಪೂಜಾರಿ ನಾಡ ಛಾಯಾಗ್ರಹಣ ಹಾಗೂ ಅರವಿಂದ್ ಮಲ್ಲು ಅವರ ಸಂಕಲನ ಚಿತ್ರಕ್ಕೆ ಪೂರಕವಾಗಿದೆ. ಚಿತ್ರ ಜೂನ್ 26 ರಂದು ತೆರೆಗೆ ಬರುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ದೇಶಕ ಹಾಗೂ ನಾಯಕ ಚಂದ್ರು ಆಚಾರ್ ತಿಳಿಸಿದರು.

ಈ ಚಿತ್ರದ ಕಥೆ ಚೆನ್ನಾಗಿದೆ. ನನ್ನದು ಇದು ಮೊದಲ ಚಿತ್ರ ಎಂದು ನಾಯಕಿ ಸ್ಫೂರ್ತಿ ಮನೋಹರ್ ಹೇಳಿದರು. ಹಾಡುಗಳ ಕುರಿತು ಸಂಗೀತ ನಿರ್ದೇಶಕ ಅರೋನ್ ಕಾರ್ತಿಕ್ ವೆಂಕಟೇಶ್ ಮಾಹಿತಿ ನೀಡಿದರು. ಸಂಕಲನಕಾರ ಅರವಿಂದ್ ಜೆ.ಪಿ ಮಲ್ಲು, ಕಲಾವಿದರಾದ ಪವನ್, ತೇಜಸ್, ಪೃಥ್ವಿ ಹಾಗೂ ವಿತರಕ ರಾಜು ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# 'ಪ್ರೇಮದ ಊರಲ್ಲಿ' ಅಪ್ಪನಿಗಾಗಿ ಹಾಡು..

ಕನ್ನಡ ಚಿತ್ರಗಳಲ್ಲಿ ಅಮ್ಮನ ಕುರಿತು ಸಾಕಷ್ಟು ಹಾಡುಗಳು ಬಂದಿವೆ. ಆದ್ರೆ ಅಪ್ಪನ ಪ್ರೀತಿಯನ್ನು ಸಂಭ್ರಮಿಸುವ ಈ ಹಾಡು ಸಿನಿಮಾಪ್ರೇಮಿಗಳನ್ನು ಸೆಳೆಯುತ್ತಿದೆ.

ಅದುವೇ ಅವ್ವನಂತ ಅಪ್ಪನಿವನು.

ಮ್ಯೂಸಿಕಲ್ ಲವ್ ಸ್ಟೋರಿ ಕಥಾಹಂದರ ಹೊಂದಿರುವ ಪ್ರೇಮದ ಊರಲ್ಲಿ ಸಿನಿಮಾತಂಡವೀಗ ಅಪ್ಪನ ಕುರಿತಾದದ ಚೆಂದದ ಹಾಡನ್ನು ಬಿಡುಗಡೆ ಮಾಡಿದೆ.

ನಿರ್ದೇಶಕ ಮನೋಜ್ ಕುಮಾರ್ ಕ್ಯಾಚಿ ಮ್ಯಾಚಿ ಪದ ಪೋಣಿಸಿ ಅಪ್ಪನ ಶ್ರಮವನ್ನು ವರ್ಣಿಸಿದ್ದಾರೆ. ಸಿದ್ದಾರ್ಥ್ ಸುಂದರ್ ಹಾಡಿಗೆ ಧ್ವನಿಯಾಗಿದ್ದು, ಸುನಾದ್ ಗೌತಮ್ ಸಂಗೀತ ಒದಗಿಸಿದ್ದಾರೆ. ಅವ್ವನಂತ ಅಪ್ಪನಿವನು ಗೀತೆಯಲ್ಲಿ ಅಪ್ಪನಾಗಿ ರಂಗಾಯಣ ರಘು ಹಾಗೂ ಮಗನಾಗಿ ಶ್ರೀರಾಮ್ ನಟಿಸಿದ್ದಾರೆ. ರಂಗಾಯಣ ರಘು ಕೂಡ ಹಾಡಿಗೆ ಹೆಜ್ಜೆ ಹಾಕಿರುವುದು ಸ್ಪೆಷಲ್.

ಪ್ರೇಮದ ಊರಲ್ಲಿ ಸಿನಿಮಾದಲ್ಲಿ ಶ್ರೀರಾಮ್ ನಾಯಕನಾಗಿ ನಟಿಸಿದ್ದು, ನಟಿಯರಾದ ತಪಸ್ವಿನಿ ಪೂಣಚ್ಚ ಹಾಗೂ ರಮಿಕಾ ಶಿವು ಜೊತೆಯಾಗಿದ್ದಾರೆ. ರಂಗಾಯಣ ರಘು ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದಾರೆ. 'ಅಕ್ಷಿ ಸಿನಿಮಾ ನಿರ್ದೇಶಿಸಿದ್ದ ಮನೋಜ್ ಕುಮಾರ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಸಿನಿಮಾವನ್ನು ವೆನಿಲ್ಲಾ ಎಂಟರ್‌ಟೇನ್ಮೆಂಟ್, ಜಾನಕಮ್ಮ ಪ್ರೊಡಕ್ಷನ್‌ನಡಿ ಮಮತಾ ದೇವೇಂದ್ರ, ಪ್ರಶಾಂತ್ ಹಾಗೂ ರಮೇಶ್ ನಿರ್ಮಾಣ ಮಾಡಿದ್ದಾರೆ. ಸುನಾದ ಗೌತಮ್ ಸಂಗೀತ ನಿರ್ದೇಶನ, ರಾಜ್ಕಾಂತ್ ಎಸ್.ಕೆ. ಛಾಯಾಚಿತ್ರಗ್ರಹಣ, ಹರ್ಷಿತ್ ಪ್ರಭು ಸಂಕಲನ ಚಿತ್ರಕ್ಕಿದೆ



# `ನಮ್ಮ ರೇಂಜ್ರೋವರ್`ನಲ್ಲಿ ಸುಮಧುರ ಹಾಡುಗಳು



ಸಿ.ಎಮ್.ಎಮ್ ಹಿಂದೂಸ್ತಾನ್ ಫಿಲಂಸ್ ಲಾಂಛನದಲ್ಲಿ ಡಾ||ಮೌಲಾ ಶರೀಫ್ ಸಿ.ಕೆ ನಿರ್ಮಿಸಿರುವ ಹಾಗೂ ಓ.ಎಸ್.ಆರ್ ಕುಮಾರ್ ನಿರ್ದೇಶಿಸಿರುವ "ನಮ್ಮ ರೇಂಜ್ ರೋವರ್" ಚಿತ್ರದ ಹಾಡುಗಳು ಹಾಗೂ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ಅದ್ದೂರಿಯಾಗಿ ನೆರವೇರಿತು. ಕೂಡಲಸಂಗಮದ ಪೂಜ್ಯ ಶ್ರೀಸಂಗಮಾನಂದ ಸ್ವಾಮಿಗಳು, ಮಾಜಿ ಶಾಸಕರಾದ ರಾಜಣ್ಣ, ಉದ್ಯಮಿ ವೀರಭದ್ರಾಚಾರಿ, ನಟ ಸಂಪೂರ್ಣೇಶ್ ಬಾಬು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಉಪಾಧ್ಯಕ್ಷರಾದ ಕಿಶೋರ್ ಕುಮಾರ್, ನಿರ್ಮಾಪಕರ ಸಂಘದ ಕಾರ್ಯದರ್ಶಿ ರಮೇಶ್ ಯಾದವ್, ವಿತರಕರಾದ ರಮೇಶ್ ಬಾಬು ಹಾಗೂ ನಿರ್ಮಾಪಕರ ಸಂಘದ ಮಾಜಿ ಅಧ್ಯಕ್ಷರಾದ ಉಮೇಶ್ ಬಣಕಾರ್ ಮುಂತಾದ ಗಣ್ಯರು ಸಮಾರಂಭಕ್ಕೆ ಆಗಮಿಸಿ ತಮ್ಮ ಪ್ರೋತ್ಸಾಹದ ಮಾತುಗಳ ಮೂಲಕ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಪೂಜ್ಯ ಸ್ವಾಮಿಗಳು ಹಾಡುಗಳು ಹಾಗೂ ಟೀಸರ್ ಬಿಡುಗಡೆ ಮಾಡಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಾನು ಮೂಲತಃ ಕಡಪದವನು. ಕಿರುಚಿತ್ರ ನಿರ್ದೇಶನ ಮಾಡಿ ಅನುಭವವಿರುವ ನನಗೆ ಹಿರಿತೆರೆಯಲ್ಲಿ ಇದು ಮೊದಲ ಚಿತ್ರ. ಅವಕಾಶ ನೀಡಿದ ನಿರ್ಮಾಪಕ ಮೌಲಾ ಶರೀಫ್ ಅವರಿಗೆ ಧನ್ಯವಾದ. ಚಿತ್ರದಲ್ಲಿ ಸುಮಧುರ ಹಾಡುಗಳಿದ್ದು, ಸತ್ಯ ಸೋಮೇಶ್ ಸಂಗೀತ ನೀಡಿದ್ದಾರೆ. ಸಿರಿ ಮ್ಯೂಸಿಕ್ ನಲ್ಲಿ ಹಾಡುಗಳು ಹಾಗೂ ಟೀಸರ್ ಬಿಡುಗಡೆಯಾಗಿದೆ. ತೆಲುಗು ಚಿತ್ರರಂಗದಲ್ಲಿ ನೃತ್ಯ ನಿರ್ದೇಶಕರಾಗಿರುವ ಆಟ ಸಂದೀಪ್ ಈ ಚಿತ್ರದ ಮೂಲಕ ನಾಯಕರಾಗಿದ್ದಾರೆ. ರಾಜಸ್ಥಾನ ಮೂಲದ ಮೇಘನಾ ರಜಪೂತ್ ಈ ಚಿತ್ರದ ನಾಯಕಿ. ಅರವಿಂದ್ ರಾವ್, ಬ್ಯಾಂಕ್ ಜನಾರ್ದನ್, ಯತಿರಾಜ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ರಾಜಾ ಶಿವಶಂಕರ್ ಛಾಯಾಗ್ರಹಣ ಹಾಗೂ ಗುರುಪ್ರಸಾದ್ ಸಂಕಲನವಿರುವ ಈ ಚಿತ್ರದ ಶೀರ್ಷಿಕೆ ಒಂದು ದುಬಾರಿ ಕಾರಿನ ಹೆಸರಿನದ್ದಾಗಿದೆ. ಚಿತ್ರಕ್ಕೆ ಶೀರ್ಷಿಕೆ ಪೂರಕವಾಗಿದೆ. ಈ ಶೀರ್ಷಿಕೆ ಇಡಲು ಕಾರಣ ಏನು ಎಂಬುದನ್ನು ಚಿತ್ರದಲ್ಲೇ ನೋಡಬೇಕು. ಚಿತ್ರವನ್ನು ಮುಂದಿನ ತಿಂಗಳು ತೆರಗೆ ತರುವ ಸಿದ್ದತೆ ನಡೆಯುತ್ತಿದೆ ಎಂದರು ನಿರ್ದೇಶಕ ಓ.ಎಸ್.ಆರ್ ಕುಮಾರ್.

ನಮ್ಮ ಊರು ಬಾಗೇಪಲ್ಲಿ. ಸುಪ್ರೀಂಕೋರ್ಟ್ ವಕೀಲನಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ.

ಚಿಕ್ಕಂದಿನಿಂದಲೂ ರಾಜಕುಮಾರ್ ಅವರ ಚಿತ್ರಗಳನ್ನು ನೋಡಿ ಬೆಳೆದವನು. "ನಮ್ಮ ರೇಂಜ್ ರೋವರ್" ನಮ್ಮ ಸಂಸ್ಥೆಯ ನಿರ್ಮಾಣದ ಮೂರನೇ ಚಿತ್ರ. ನಿರ್ದೇಶಕರು ಹೇಳಿದ ಕಥೆ ಬಹಳ ಇಷ್ಟವಾಯಿತು. ನಿರ್ಮಾಣಕ್ಕೆ ಮುಂದಾದೆ. ನಾನು ಚಿತ್ರರಂಗಕ್ಕೆ ಬರಲು ಉಮೇಶ್ ಬಣಕಾರ್ ಅವರೆ ಕಾರಣ. ಮುಂದೆ ಕೂಡ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನಿರ್ಮಿಸುವ ಯೋಜನೆ ಇದೆ. ಈ ಚಿತ್ರದ ಹಾಡುಗಳು ಹಾಗೂ ಟೀಸರ್ ಬಿಡುಗಡೆ ಮಾಡಿಕೊಟ್ಟ ಪೂಜ್ಯರಿಗೆ ಹಾಗೂ ಗಣ್ಯರಿಗೆ ಧನ್ಯವಾದ ಎಂದು ನಿರ್ಮಾಪಕ ಮೌಲಾ ಶರೀಫ್ ಹೇಳಿದರು. ತಮ್ಮ ಪಾತ್ರದ ಕುರಿತು ನಾಯಕಿ ಮೇಘನಾ ರಜಪೂತ್ ತಿಳಿಸಿದರು. ಅತಿಥಿ ಪಾತ್ರದಲ್ಲಿ ನಟಿಸಿರುವ ನಟ ಸನತ್ ಅವರು ಕೂಡ "ನಮ್ಮ ರೇಂಜ್ ರೋವರ್" ನ ತಮ್ಮ ಪಾತ್ರದ ಬಗೆ ಮಾತನಾಡಿದರು.

# ಇವರೇ ನಮ್ಮ ಮಹಾನ್ ಕಿಲಾಡಿಗಳು



ಟ್ಯಾಲೆಂಟ್ ಎನ್ನುವುದು ಯಾರೊಬ್ಬರ ಸ್ವತ್ತು ಅಲ್ಲ. ಈ ಹಿಂದೆ ಕಾಮಿಡಿ ಕಿಲಾಡಿಗಳು ರಿಯಾಲಿಟಿ ಶೋ ಮೂಲಕ ಹಲವು ಪ್ರತಿಭೆಗಳು ಬೆಳಕಿಗೆ ಬಂದರು. ಆ ಸಾಲಿನಲ್ಲಿ ಮಿಂಚು, ಪ್ರವೀಣ್ ಗಸ್ತಿ ಗೋಕಾಕ್ ಮತ್ತು ಚಿದಂಬರ ಪೂಜಾರಿ ಕಣ್ಣ ಮುಂದೆ ಕಾಣುತ್ತಾರೆ.

ಇವರುಗಳ ಬತ್ತಳಿಕೆಯಿಂದ ಮಹಾನ್ ಕಿಲಾಡಿ ಎಂಬ ರಿಯಾಲಿಟಿ ಶೋ ಶುರುವಾಗಿದೆ. ಟ್ಯಾಲೆಂಟ್ ನಿಮ್ಮದು ವೇದಿಕೆ ನಮ್ಮದು ಎಂಬ ಅಡಿಬರಹ ಇರಲಿದೆ. ಪ್ರಚಾರದ ಮೊದಲ ಹಂತವಾಗಿ ಪೋಸ್ಟರ್, ಟೈಟಲ್ ಸಾಂಗ್ ಮತ್ತು ಟ್ರೇಲರ್ ಬಿಡುಗಡೆ ಸಮಾರಂಭವು ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು.

ವಿಧಾನ ಪರಿಷತ್ ಸದಸ್ಯರಾದ ಟಿ.ಶರವಣ, ಉದ್ಯಮಿಗಳಾದ ಡಾ.ಎನ್.ನರಸಿಂಹಮೂರ್ತಿ, ಶ್ರೀಕಾಂತ್, ಡಾ.ಮೋಕ್ಷಗೊಂಡ ಗುರೂಜಿ ಮತ್ತು ಶ್ರೀ ಭಾರ್ಗವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶರವಣ, ಕಲಾವಿದರುಗಳಿಗೆ ಮೊದಲಿನಿಂದಲೂ ಸಹಕಾರ ನೀಡುತ್ತಾ ಬಂದಿದ್ದೇನೆ. ಇವರುಗಳ ಶ್ರಮ ನೋಡಿದಾಗ, ಇಂತಹವರು ಲೈಮ್‌ಲೈಟ್‌ಗೆ ಬರಬೇಕು. ನಿಮಗೆ ಸರ್ಕಾರದಿಂದಲೂ ಅನುದಾನ ಬರಲು ಶಿಫಾರಸ್ಸು ಮಾಡುತ್ತೇನೆಂದು ಭರವಸೆ ನೀಡಿದರು.

ಮಹಾನ್ ಕಿಲಾಡಿ ಸಾರಥಿ ಮಿಂಚು ಹೇಳುವಂತೆ, ಒಂದಷ್ಟು ವಿಷಯಗಳಿಂದ ಅವಕಾಶಗಳು ಇಲ್ಲದೆ ಇರುವಾಗ, ಹೊಸತನದೊಂದಿಗೆ ನನ್ನ ಅವಕಾಶವನ್ನು ನಾನೇ ರೂಪಿಸಿಕೊಳ್ಳಬೇಕು. ನಾನು ಕಲಿತುದನ್ನು ಬೇರೆಯವರಿಗೆ ಹೇಳಿಕೊಡಬೇಕು ಎಂಬ ಕಲ್ಪನೆಯನ್ನು ಗೆಳಯ ಪ್ರವೀಣ್ ಗಸ್ತಿಗೆ ಹೇಳಿದಾಗ, ಆತ ಬೆನ್ನಲುಬಾಗಿ ನಿಂತುಕೊಂಡಿದ್ದೇ ಇಲ್ಲಿಯವರೆಗೂ ಬಂದಿದೆ. ಮಿತವ್ಯಯ ಬಜೆಟ್‌ನೊಂದಿಗೆ ಶುರುಮಾಡಿ, ಮುಂದೆ ದೊಡ್ಡದಾಗಿ ಬೆಳೆಯುತ್ತಾ ಹೋಯಿತು. ಅಕ್ಷರ ಸ್ಟುಡಿಯೋದ ಗೌರಿಪ್ರಸಾದ್ ಚಿತ್ರೀಕರಿಸಲು ಅನುವು ಮಾಡಿಕೊಟ್ಟರು. ಸಾಮಾಜಿಕ ಜಾಲತಾಣದಲ್ಲಿ ಜಾಹಿರಾತು ಕೊಟ್ಟಾಗ ಕರ್ನಾಟಕದಾದ್ಯಂತ 1000ಕ್ಕೂ ಹೆಚ್ಚು ಆಕಾಂಕ್ಷಿಗಳು ಬಂದರು.

ಇದರಲ್ಲಿ ಮೂರು ಸಲ ಅಡಿಷನ್ ಮಾಡಿ, ಅಂತಿಮವಾಗಿ 22 ಪ್ರತಿಭೆಗಳು ಆಯ್ಕೆಯಾಗಿದ್ದರೆ. ಇವರುಗಳಿಗೆ ಮೇಧಾವಿಗಳಿಂದ ಏಳು ವಾರಗಳ ತರಭೇತಿ ನೀಡಲಾಗಿ, ಕ್ಯಾಮಾರ ಮುಂದೆ ನಿಲ್ಲಿಸಲಾಗಿದೆ. ಕಿರಣ್‌ಕುಮಾರ್ ನಿರ್ದೇಶನ ಜವಬ್ದಾರಿಯನ್ನು ಹೊತ್ತುಕೊಂಡಿದ್ದು, ದಿಲೀಪ್ ಕುಮಾರ್.ಹೆಚ್.ಆರ್ ಕ್ರಿಯಟೀವ್ ಮುಖ್ಯಸ್ಥ, ಪುಟ್ಟರಾಜು ಡಿಜಿಟಲ್ ಪ್ರಮೋಟರ್, ಚಿದಂಬರ ಪೂಜಾರಿ ಮೆಂಟರ್, ಸ್ಕ್ರಿಪ್ಟ್ ರೈಟರ್ ಶ್ರೀ ಪಲ್ಲವಿ ಆಗಿರುತ್ತಾರೆ. ನನ್ನೊಂದಿಗೆ ಮಹೇಶ್ ಕೃಷ್ಣ, ಪ್ರವೀಣ್ ಗಸ್ತಿ ತೀರ್ಪುಗಾರರಾಗಿರುತ್ತಾರೆ.

# ಈ ವಾರ ತೆರೆಗೆ ಪೊಲೀಸ್ ಕಂಪ್ಲೈಂಟ್



ನಟಿ ವರಲಕ್ಷ್ಮೀ ಶರತಕುಮಾರ್ ಹಾಗೂ ರಾಗಿಣಿ ದ್ವಿವೇದಿ ಮುಖ್ಯಭೂಮಿಕೆಯಲ್ಲಿ ಅಭಿನಯಿಸಿರುವ ಪೊಲೀಸ್ ಕಂಪ್ಲೈಂಟ್ ಈ ವಾರ ಬಿಡುಗಡೆ ಆಗುತ್ತಿದೆ.

ಚಿತ್ರದಲ್ಲಿ ನವೀನ್ ಚಂದ್ರ, ಕೃಷ್ಣ ಸಾಯಿ ನಾಯಕ ನಟರಾಗಿ ಕಾಣಿಸಿಕೊಂಡಿದ್ದಾರೆ. ಉಳಿದಂತೆ ರವಿಶಂಕರ್, ಶರತ್ ಲೋಹಿತಾಶ್ವ, ಅನಿಲ್ ರಾಜ್, ಸಪ್ತಗಿರಿ, ಪೃಥ್ವಿರಾಜ್, ಜೆಮಿನಿ ಸುರೇಶ್ ಹೀಗೆ ದೊಡ್ಡ ಕಲಾವಿದರ ತಾರಾಗಣವೇ ಚಿತ್ರದಲ್ಲಿದೆ.

ಸಂಜೀವ ಮೆಗೋಟಿ ಚಿತ್ರ ನಿರ್ದೇಶನ ಮಾಡಿದ್ದಾರೆ. ಎಂ.ಎಸ್.ಕೆ ಪ್ರಮೀದಾಶ್ರೀ ಫಿಲಂಸ್ ಬ್ಯಾನರಿನಲ್ಲಿ ಈ ಚಿತ್ರ ನಿರ್ಮಾಣವಾಗಿದೆ. ಈಗಾಗಲೇ ಚಿತ್ರದ ಟೀಸರ್, ಟ್ರೇಲರ್ ಮತ್ತು ಹಾಡುಗಳು ಬಿಡುಗಡೆಯಾಗಿದ್ದು, ಚಿತ್ರದ ಬಗ್ಗೆ ಸಿನಿಪ್ರಿಯರು ಮತ್ತು ಚಿತ್ರರಂಗದ ಮಂದಿಯಿಂದ ನಿರೀಕ್ಷೆಯ ಮಾತುಗಳು ವ್ಯಕ್ತವಾಗುತ್ತಿದೆ.

ಸಂಜೀವ ಮೆಗೋಟಿ ಮಾತಾಡಿ ಸುಮಾರು ಹತ್ತು ವರ್ಷದ ನಂತರ ಕನ್ನಡದಲ್ಲಿ ಪೊಲೀಸ್ ಕಂಪ್ಲೈಂಟ್ ಚಿತ್ರವನ್ನು ನಿರ್ದೇಶಿಸಿ, ಕನ್ನಡ ಪ್ರೇಕ್ಷಕರ ಮುಂದೆ ತರುತ್ತಿರುವುದಕ್ಕೆ ಖುಷಿಯಾಗುತ್ತಿದೆ. ಇದೊಂದು ಆ ಯಕ್ಷನ್ ಕಂ ಹಾರರ್-ಥ್ರಿಲ್ಲರ್ ಕಥಾಹಂದರದ ಸಿನಿಮಾ. ನಾವು ಮಾಡಿದ ಕರ್ಮ ಹೇಗೆ ನಮ್ಮನ್ನು ಕಾಡುತ್ತದೆ ಎಂಬ ಒಂದು ಎಳೆಯನ್ನು ಇಟ್ಟುಕೊಂಡು ಈ ಸಿನಿಮಾ ಮಾಡಿದ್ದೇವೆ. ಕನ್ನಡ ಮತ್ತು ತೆಲುಗಿನ ಸುಮಾರು 50ಕ್ಕೂ ಹೆಚ್ಚಿನ ಕಲಾವಿದರು ಈ ಸಿನಿಮಾದ ವಿವಿಧ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಕನ್ನಡ ಮತ್ತು ತೆಲುಗು ಭಾಷೆಗಳಲ್ಲಿ ಈ ಸಿನಿಮಾ ನಿರ್ಮಾಣವಾಗಿದೆ..

ಪೊಲೀಸ್ ಕಂಪ್ಲೈಂಟ್ ಚಿತ್ರದಲ್ಲಿನ ತಮ್ಮ ಪಾತ್ರದ ಬಗ್ಗೆ ಮಾತನಾಡಿದ ನಟಿ ರಾಗಿಣಿ ದ್ವಿವೇದಿ, ನನ್ನ ಸಿನಿಮಾ ಕೆರಿಯರ್ ನಲ್ಲಿ ಇದೊಂದು ವಿಭಿನ್ನ ಸಿನಿಮಾ. ಇದರಲ್ಲಿ ತಾಯಿ ಮತ್ತು ಮಗುವಿನ ಸಂಬಂಧದ ಸುತ್ತ ನನ್ನ ಪಾತ್ರ ಸಾಗುತ್ತದೆ. ಆ ಯಕ್ಷನ್, ಹಾರರ್ ಜೊತೆಗೆ ಎಮೋಶನ್ಸ್ ಕೂಡ ಸಿನಿಮಾದಲ್ಲಿದೆ. ಎಲ್ಲಾ ಥರದ ಆಡಿಯನ್ಸ್ ಗೂ ಈ ಸಿನಿಮಾ ಇಷ್ಟವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.


**Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,**